ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 265
18–4–2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 265

## 23ಕ್ಕೆ ಉಪ ಲೋಕಾಯುಕ್ತ ಬಿ.ವೀರಪ್ಪರಿಂದ ಉಪನ್ಯಾಸ

**ದಾವಣಗೆರೆ:** ಕರ್ನಾಟಕ ಲೋಕಾಯುಕ್ತ, ಜಿಲ್ಲಾ ವಕೀಲರ ಸಂಘ, ದಾವಣಗೆರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 23ರ ಬುಧವಾರ ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿನ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಉಪನ್ಯಾನ ಮಾಲಿಕೆ ಸಾರ್ವಜನಿಕ ಆಡಳಿತ ಮತ್ತು ಲೋಕಾಯುಕ್ತ ಕಾಯ್ದೆ 1984ರ ಅಡಿಯಲ್ಲಿ ವಕೀಲರ ಪಾತ್ರ ಕುರಿತು ವಿಶೇಷ ಉಪನ್ಯಾಸ ಮಾಲಿಕೆ ನಡೆಯಲಿದೆ. ಕಾರ್ಯಕ್ರಮವನ್ನು ರಾಜ್ಯದ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಉದ್ಘಾಟಿಸುವರು. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಡಿ.ಕೆ.ವೇಲಾ, ಲೋಕಾಯುಕ್ತ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ, ಎನ್.ವಿ.ಅರವಿಂದ, ವಿ.ಎನ್. ಮಿಲನ, ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ. ಮ.ಕರೆಣ್ಣವರ ಆಗಮಿಸಲಿದ್ದಾರೆ ಎಂದು ಜಿಲ್ಲಾ ವಕೀಲರ ಸಂಘದ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ತಿಳಿಸಿದ್ದಾರೆ.

## ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ, ಬಿಳಿ ಜೋಳ ಖರೀದಿ

**ದಾವಣಗೆರೆ :** ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಮೂಲಕ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ಭತ್ತ ಹಾಗೂ ಬಿಳಿ ಜೋಳವನ್ನು ರೈತರಿಂದ ಖರೀದಿಸಲು ಅವಕಾಶ ಕಲ್ಪಿಸಿದೆ. ಅದರಂತೆ ಜಿಲ್ಲಾ ವ್ಯಾಪ್ತಿಯಲ್ಲಿನ ಬಿತ್ತನೆ ಪ್ರಮಾಣ ಆಧರಿಸಿ ಭತ್ತ ಕ್ವಿಂಟಾಲ್‌ಗೆ ರೂ.2300 ಹಾಗೂ ಭತ್ತ ಗ್ರೇಡ್‌ಎ ರೂ.2320 ಗಳಂತೆ ಮತ್ತು ಹೈಬ್ರಿಡ್ ಜೋಳವನ್ನು ಪ್ರತಿ ಕ್ವಿಂಟಾಲ್‌ಗೆ ರೂ.3371/– ಹಾಗೂ ಮಾಲ್ದಂಡಿ ಜೋಳವನ್ನು ಕ್ವಿಂಟಾಲ್‌ಗೆ ರೂ. 3421/– ನಂತೆ ಯಾವುದೇ ವ್ಯತ್ಯಾಸಗಳಿಗೆ ಅವಕಾಶ ನೀಡದೆ ನೊಂದಣಿ ಮತ್ತು ಖರೀದಿಗೆ ಕ್ರಮವಹಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಪ್ರಸಕ್ತ ಸಾಲಿನ ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಮತ್ತು ಬಿಳಿಜೋಳ ಖರೀದಿಸಲು ಮಾರ್ಚ್ 15 ರಿಂದ ನೊಂದಣಿ ಪ್ರಕ್ರಿಯ ಪ್ರಾರಂಭಿಸಲಾಗಿದ್ದು, ಮೇ 31 ರವರೆಗೆ ನೊಂದಣಿ ಮತ್ತು ಖರೀದಿ ಪ್ರಕ್ರಿಯೆ ನಡೆಯಲಿದೆ. ಖರೀದಿ ಕೇಂದ್ರಗಳನ್ನು ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ಆರಂಭಿಸಲಾಗಿದೆ. ರೈತರಿಂದ ಸಂಪೂರ್ಣ ಒಣಗಿದ ಹಾಗೂ ಎಫ್‌ಎಕ್ಯೂ ಗುಣಮಟ್ಟದ ಭತ್ತ ಮತ್ತು ಬಿಳಿಜೋಳ ಮಾದರಿಯನ್ನು ಪಡೆದು ನಿಗಧಿಪಡಿಸಿದ ಮಾನದಂಡಗಳಂತೆ ಗ್ರೇಡರ್ ಅಥವಾ ಆಸೇಯರ್‌ಗಳಿಂದ ದೃಢೀಕರಿಸಿದ ಗುಣಮಟ್ಟದ ಬಿಳಿ ಜೋಳವನ್ನು ಮಾತ್ರ ಖರೀದಿಸಲಾಗುತ್ತದೆ. ರೈತರ ಫ್ರೂಟ್ಸ್ ಐಡಿ ನೊಂದಣಿ ಕಡ್ಡಾಯವಾಗಿರುತ್ತದೆ. ರೈತ–ರಿಂದ ಕನಿಷ್ಠ ಬೆಂಬಲ ಬೆಲೆಗೆ ಜೋಳ ಖರೀದಿಸಲಾಗುವುದು. ಪ್ರತಿ ರೈತರಿಂದ ಎಕರೆಗೆ 20 ಕ್ವಿಂಟಾಲ್‌ನಂತೆ ಗರಿಷ್ಠ 150 ಕ್ವಿಂಟಾಲ್ ಜೋಳ ಹಾಗೂ ಭತ್ತವನ್ನು ಎಕರೆಗೆ ಕನಿಷ್ಠ 25 ರಿಂದ ಗರಿಷ್ಠ 50 ಕ್ವಿಂಟಾಲ್‌ವರೆಗೆ ಖರೀದಿಸಲಾಗುವುದು. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಸಿದ್ದರಾಮ ಮರಿಹಾಳ್, ಆಹಾರ ನಿಗಮದ ಅಧಿಕಾರಿ ಶೃತಿ ಹಾಗೂ ಎಪಿಎಂಸಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೀ ಮುರುಘಾಮಠದಲ್ಲಿ ಏ.28 ರಿಂದ 30ರವರೆಗೆ ಬಸವೇಶ್ವರರ ಜಯಂತಿ ಅಂಗವಾಗಿ ವಿವಿಧ ಸ್ಪರ್ಧೆಗಳ ಆಯೋಜನೆ

**ಚಿತ್ರದುರ್ಗ :** ಏಪ್ರಿಲ್ 28, 29 ಹಾಗೂ 30ರಂದು ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಬಸವೇಶ್ವರರ ಜಯಂತಿ ಅಂಗವಾಗಿ ವಿಶೇಷ ಕಾರ್ಯಕ್ರಮಗಳು ಹಾಗೂ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಏ. 28ರಂದು ಸೋಮವಾರ ಬೆಳಗ್ಗೆ 10ಗಂಟೆಗೆ ಶ್ರೀಮಠದ ಅನುಭವ ಮಂಟಪದಲ್ಲಿ ವಚನ ಕಂಠಪಾಠ ಸ್ಪರ್ಧೆ, ಅದೇ ಸಮಯದಲ್ಲಿ ಶ್ರೀಮಠದ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ಬಸವಾದಿ ಶಿವಶರಣರ ವೇಷಭೂಷಣ ಸ್ಪರ್ಧೆ ಹಾಗೂ ಶ್ರೀಮಠದ ಆವರಣದಲ್ಲಿ ರಂಗೋಲಿ ಸ್ಪರ್ಧೆ (ಇದರಲ್ಲಿ ಬಸವಾದಿ ಶಿವಶರಣರ ಚಿತ್ರಗಳನ್ನೂ ಬಿಡಿಸಬಹುದಾಗಿದೆ) ನಡೆಯಲಿದೆ.

29ರಂದು ಮಂಗಳವಾರ ಬೆಳಗ್ಗೆ 10 ಗಂಟೆಗೆ ಅನುಭವ ಮಂಟಪದಲ್ಲಿ 18ವರ್ಷ ಮೇಲ್ಪಟ್ಟವರಿಗೆ 1ಗಂಟೆ ಕಾಲಾವಧಿಯಲ್ಲಿ "ಸರ್ವಶರಣರ ದೃಷ್ಟಿಯಲ್ಲಿ ಬಸವಣ್ಣ"ನವರು ವಿಷಯ ಕುರಿತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

## ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಯಶಸ್ವಿ ಸಂಧಾನ ಸಭೆ

# ಲಾರಿ ಮುಷ್ಕರ ವಾಪಸ್



**ಬೆಂಗಳೂರು:** ಡೀಸೆಲ್ ದರ ಇಳಿಕೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆ ಆಗ್ರಹಿಸಿ ಕಳೆದ ಮೂರು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದ ಲಾರಿ ಮಾಲೀಕರು ಮತ್ತು ಏಜೆಂಟರ ಸಂಘ ಕೊನೆಗೂ ಮುಷ್ಕರವನ್ನು ವಾಪಸ್ ತೆಗೆದು–ಕೊಂಡಿದೆ.

ಲಾರಿ ಮಾಲೀಕರ ಬೇಡಿಕೆ ಈಡೇರಿಸುವ ಸಂಬಂಧ ಇಂದು ಸಚಿವ ರಾಮಲಿಂಗಾರೆಡ್ಡಿ ನೇತೃತ್ವದಲ್ಲಿ ನಡೆದ ಸಂಧಾನ ಸಭೆ ಯಶಸ್ವಿಯಾಗಿದೆ. ಬಹುತೇಕ ಬೇಡಿಕೆಗಳನ್ನು ಈಡೇರಿಸುವುದಾಗಿ ಸಚಿವರು ಭರವಸೆ ನೀಡಿದ ಹಿನ್ನೆಲೆಯಲ್ಲಿ ಲಾರಿ ಮಾಲೀಕರು ಮುಷ್ಕರವನ್ನು ಹಿಂಪಡೆದಿದ್ದಾರೆ.

ಡೀಸೆಲೆ ಬೆಲೆ ಇಳಿಕೆ ಹಾಗೂ ರಾಜ್ಯ ಹೆದ್ದಾರಿಗಳಲ್ಲಿನ ಟೋಲ್ ಗಳನ್ನು ತೆಗೆಯುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ರಾಜ್ಯ ಲಾರಿ ಮಾಲೀಕರು ಮತ್ತು ಏಜೆಂಟರ ಸಂಘ ಕಳೆದ ಮೂರು ದಿನಗಳಿಂದ ಮುಷ್ಕರ ನಡೆಸುತಿತ್ತು.

ಲಾರಿ ಮಾಲೀಕರ ಸಂಘದ ಪ್ರತಿನಿಧಿಗಳು ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರೆಡ್ಡಿ ಅವರೊಂದಿಗೆ ನಡೆಸಿದ ಮಾತುಕತೆ ವಿಫಲವಾಗಿತ್ತು. ಆದರೆ ಇಂದು ರಾಮಲಿಂಗಾರೆಡ್ಡಿ ಅವರೊಂದಿಗೆ ನಡೆಸಿದ ಸಂಧಾನ ಸಭೆ ಯಶಸ್ವಿಯಾಗಿದ್ದು, ಲಾರಿ ಮುಷ್ಕರವನ್ನು ವಾಪಸ್ ಪಡೆಯುತ್ತಿರುವುದಾಗಿ ರಾಜ್ಯ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಷಣ್ಮುಗಪ್ಪ ಪಿಟಿಐ ಸುದ್ದಿಸಂಸ್ಥೆಗೆ ತಿಳಿಸಿದರು.

ಡೀಸೆಲ್ ಬೆಲೆ ಕಡಿಮೆ ಮಾಡಲು ಅಥವಾ ರಾಜ್ಯ ಹೆದ್ದಾರಿಗಳಲ್ಲಿನ ಟೋಲ್ ಗಳನ್ನು ತೆಗೆಯಲು ಸರ್ಕಾರ ಒಪ್ಪಿಲ್ಲ. ಆದಾಗ್ಯೂ, ಕೆಲವೊಂದು ಇತರ ಕುಂದುಕೊರತೆಗಳನ್ನು ಪರಿಹರಿಸುವುದಾಗಿ ಭರವಸೆ ನೀಡಲಾಗಿದೆ. ಹೀಗಾಗಿ ಲಾರಿ ಮುಷ್ಕರವನ್ನು ಹಿಂಪಡೆದಿರುವುದಾಗಿ ತಿಳಿಸಿದರು.

## ಬಿಜೆಪಿಗೆ ಮಾನ ಇದ್ದರೆ ಜನಾಕ್ರೋಶ ನಾಟಕ ಬಂದ್ ಮಾಡಬೇಕು: ಸಿಎಂ



**ಬೆಂಗಳೂರು:** ಬಿಜೆಪಿಗೆ ಮಾನ, ಮರ್ಯಾದೆ ಇದ್ದರೆ ಜನಾಕ್ರೋಶ ಎಂಬ ನಾಟಕವನ್ನು ಬಂದ್ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಗುರುವಾರ ಎಕ್ಸ್‌ನಲ್ಲಿ ಸುದೀರ್ಘ ಪೋಸ್ಟ್ ಒಂದನ್ನು ಹಂಚಿಕೊಂಡಿರುವ ಅವರು, ಬಿಜೆಪಿ ರಾಜ್ಯದಾದ್ಯಂತ ಜನಾಕ್ರೋಶ ಯಾತ್ರೆ ಕೈಗೊಂಡಿದ್ದಾರೆ. ಬಿಜೆಪಿಗೆ ಮಾನ ಮರ್ಯಾದೆ ಇದ್ದರೆ, ಕಿಂಚಿತ್ತಾದರೂ ಜನಪರವಾದ ಕಾಳಜಿ ಇದ್ದರೆ ಸುಳ್ಳು ನಾಟಕವನ್ನು ಬಂದ್ ಮಾಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ದೇಶದಲ್ಲಿ ಬೆಲೆಯೇರಿಕೆಯಾಗಿದ್ದರೆ ಅದ–ಕ್ಕೆ ಕೇಂದ್ರದ ಬಿಜೆಪಿಯೇ ನೇರ ಕಾರಣ. ಮನಮೋಹನ್ ಸಿಂಗ್ ಅವರ ಸರ್ಕಾರವಿದ್ದಾಗ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ದುಬಾರಿ ಇದ್ದಾಗಲೂ ಪೆಟ್ರೋಲ್ ಬೆಲೆ 173 ಹಾಗೂ ಡೀಸೆಲ್ ಬೆಲೆ 346 ಇತ್ತು. ಇಂದು ಅವುಗಳ ಬೆಲೆ ಎಷ್ಟಾಗಿದೆ' ಎಂದು ಬಿಜೆಪಿಯನ್ನು ಪ್ರಶ್ನಿಸಿದ್ದಾರೆ.

ಈಗ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಕಡಿಮೆಯಾಗಿದೆ. ಬ್ಯಾರಲ್‌ಗೆ ಸುಮಾರು 35 ಡಾಲರ್ ಇಳಿದಿದೆ. 120 ಡಾಲರ್ ಇರುವಾಗ ಪೆಟ್ರೋಲ್ ಬೆಲೆ 73, ಡೀಸೆಲ್ ಬೆಲೆ 46 ರೂ.ಗಳಿದ್ದರೆ, ಇಂದು 290 ಗಳಿಗಿಂತ ಹೆಚ್ಚು ಮಾಡಿದ್ದಾರೆ. ಇದಕ್ಕೆ ನರೇಂದ್ರ ಮೋದಿಯವರ ಕೇಂದ್ರ ಸರ್ಕಾರ ಕಾರಣ. ಬಿಜೆಪಿಯವರಿಗೆ ಮಾನ ಮರ್ಯಾದೆ ಇದ್ದರೆ ಇದ್ದನ್ನು ಕೇಳಬೇಕು. ಆಗ ಗ್ಯಾಸ್ ಸಿಲಿಂಡರ್ ಬೆಲೆ 2420 ರೂ ಇತ್ತು, ಈಗ ಸಾವಿರ ರೂಪಾಯಿಗೆ ಏರಿದೆ. ಅವರ ಆಡಳಿತದ ತಪ್ಪುಗಳನ್ನು ಮುಚ್ಚಿಕೊಂಡು ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಜನಾಕ್ರೋಶ ಯಾತ್ರೆ ಕೈಗೊಂಡಿದೆ ಎಂದು ಹೇಳಿದ್ದಾರೆ.

ಬಿಜೆಪಿ ನಾಯಕರು ಲಜ್ಜೆಗೆಟ್ಟವರು. 2008, 2018 ರಲ್ಲಿ ಜನರ ಆಶೀರ್ವಾದ ಪಡೆದು ಅಧಿಕಾರಕ್ಕೆ ಬಂದಿಲ್ಲ. ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದರು. ಆಪರೇಶನ್ ಕಮಲ ಮಾಡಿ ಅಧಿಕಾರಕ್ಕೆ ಬಂದವರು ನಮಗೆ ಪಾಠ ಹೇಳಲು ಬರುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನಡುರಸ್ತೆಯಲ್ಲೇ ಮಹಿಳೆ ಮೇಲೆ ಹಲ್ಲೆ; 6 ಮಂದಿ ಬಂಧನ

**ದಾವಣಗೆರೆ:** ದಾವಣಗೆರೆಯಲ್ಲಿ ನಡುರಸ್ತೆಯಲ್ಲಿ ಮಹಿಳೆ ಮೇಲೆ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸರು 6 ಮಂದಿಯನ್ನು ಬಂಧನಕ್ಕೊಳಪಡಿಸಿದ್ದಾರೆ.

ಬಂಧಿತರನ್ನು ತಾವರೆಕೆರೆಯ ಚಾಲಕ ಮೊಹಮ್ಮದ್ ನಯಾಜ್ (32), ಜ್ಯೂಸ್ ಅಂಗಡಿ ಮಾಲೀಕ ಮೊಹಮ್ಮದ್ ಗೌಸ್‌ಪೀರ್ (45), ಬೈಕ್ ಮೆಕ್ಯಾನಿಕ್ ಚಂದಪೀರ್ (35), ಇನಾಯತುಲ್ಲಾ (51), ಮೀನುಗಾರರಾದ ದಸ್ತಗೀರ್ (24) ಮತ್ತು ರಸೂಲ್ ಟಿಆರ್ (42) ಎಂದು ಗುರ್ತಿಸಲಾಗಿದೆ.

ಮಹಿಳೆ ಮೇಲೆ ಹಲ್ಲೆ ಮಾಡಿದ್ದ ವಿಡಿಯೋ ಏಪ್ರಿಲ್ 13ರಂದು ಜಾಲತಾಣದಲ್ಲಿ ವೈರಲ್ ಆಗಿತ್ತು. ಈ ಸಂಬಂಧ ಹಲ್ಲೆಗೊಳಗಾದ ಮಹಿಳೆಯ ಸಂಬಂಧಿಕರೊಬ್ಬರು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರು.

ದೂರು ದಾಖಲಿಸಿಕೊಂಡು ಪ್ರಕರಣದ ತನಿಖೆಗೆ ಇಳಿದ ಪೊಲೀಸರು, ಮಹಿಳೆ ಮೇಲೆ




ಹಲ್ಲೆ ಮಾಡಿದ್ದ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪ್ರಕರಣ ಸಂಬಂಧ ಮತ್ತಷ್ಟು ಆರೋಪಿಗಳನ್ನು ಪೊಲೀಸರು ಬಂಧಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಹಲ್ಲೆಗೊಳಗಾದ ಸಂತ್ರಸ್ತ ಮಹಿಳೆ ಶಬೀನಾ ಏಪ್ರಿಲ್ 19ರಂದು ಚನ್ನಗಿರಿ ನ್ಯಾಯಾಲಯದಲ್ಲಿ ತಮ್ಮ ಹೇಳಿಕೆಯನ್ನು ದಾಖಲಿಸಲಿದ್ದಾರೆ. ಹೇಳಿಕೆಯಲ್ಲಿ ಸಂಬಂಧಿ ನಸ್ರೀನ್ ಅವರನ್ನು ಮನೆಗೆ ಕರೆದುಕೊಂಡು ಹೋಗಲಾಗಿತ್ತು. ನಸ್ರೀನ್ ನೋಡಲು ಆಕೆಯ ಪತಿ ಫಯಾಸ್ ಬಂದಿದ್ದು, ಇದರಿಂದ ಪತಿ ಜಮೀಲ್ ಅಹ್ಮದ್ ಅಲಿಯಾಸ್ ಶಮೀರ್ ಕೆಂಡಾಮಂಡಲಗೊಂಡಿದ್ದರು. ಬಳಿಕ ತಾವರೆಕೆರೆಯ ಜಾಮೀಯಾ ಮಸೀದಿಯಲ್ಲಿ ಅರ್ಜಿ ಸಲ್ಲಿಸಿದ್ದರು. ಏಪ್ರಿಲ್ 9 ರಂದು ಮಸೀದಿಯಲ್ಲಿ ಮಾತುಕತೆ ನಡೆಸಲಾಯಿತು. ಮಾತುಕತೆ ಬಳಿಕ ಹೊರಗೆ ಬಂದಾಗ ನನ್ನ ಮೇಲೆ ಹಲ್ಲೆ ನಡೆಸಲಾಗಿದೆ. ಪೈಪ್ ಮತ್ತು ಕೋಲುಗಳಿಂದ ಹಲ್ಲೆ ನಡೆಸಿದ್ದಾರೆಂದು ಹೇಳಿದ್ದಾರೆ.

ಘಟನೆಯ ವಿಡಿಯೋ ವೈರಲ್ ಆಗಿದ್ದು, ವಿಡಿಯೋ ವೈರಲ್ ಬಳಿಕ ಪೊಲೀಸರು ಮಹಿಳೆಯನ್ನು ಪತ್ತೆ ಹಚ್ಚಿ, ಹೇಳಿಕೆ ದಾಖಲಿಸಿಕೊಂಡಿದ್ದಾರೆ. ಘಟನೆ ಸಂಬಂಧ ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಸೆಕ್ಷನ್ 109(1), 189(2), 190(2), 191(3), 115(2), 118(1), 76, 352, 351(2) ಮತ್ತು 190 ಬಿಎನ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

## ಜಾತಿ ಜನಗಣತಿ ವರದಿ ವಿರುದ್ಧ ಲಿಂಗಾಯತರು–ಒಕ್ಕಲಿಗರಿಂದ ಒಗ್ಗಟ್ಟಿನ ಹೋರಾಟ: ಡಾ. ಎಸ್ಸೆಸ್



**ದಾವಣಗೆರೆ:** ಜಾತಿ ಜನಗಣತಿ ವರದಿ ವಿರುದ್ಧ ಲಿಂಗಾಯತರು ಹಾಗೂ ಒಕ್ಕಲಿಗರು ಒಗ್ಗಟ್ಟಿನಿಂದ ಹೋರಾಟ ನಡೆಸಲಿದ್ದಾರೆಂದು ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾದ ಅಧ್ಯಕ್ಷ ಮತ್ತು ಕಾಂಗ್ರೆಸ್ ಹಿರಿಯ ನಾಯಕ ಶಾಮನೂರು ಶಿವಶಂಕರಪ್ಪ ಅವರು ಬುಧವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಗಣತಿ ವಿರುದ್ಧ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ರಾಜ್ಯದಲ್ಲಿ ವೀರಶೈವ ಲಿಂಗಾಯತರನ್ನು ಹಾಗು ಒಕ್ಕಲಿಗರನ್ನು ಎದುರಾಕಿಕೊಂಡು ರಾಜ್ಯಭಾರ ಮಾಡೋಕೆ ಆಗುತ್ತದೆಯೇ ಎಂದು ಸವಾಲು ಹಾಕಿದರು,

ಸರ್ಕಾರ ಜಾತಿಗಣತಿ ವರದಿಯನ್ನು ಬಿಡುಗಡೆ ಮಾಡುವುದಾಗಿ ಹೇಳುತ್ತಿದೆ. ಆದರೆ, ಮಾಡುತ್ತಿಲ್ಲ. ನಮ್ಮ ಪ್ರಕಾರ ರಾಜ್ಯದಲ್ಲಿ ವೀರಶೈವ ಲಿಂಗಾಯತರ ಸಂಖ್ಯೆ ಅಧಿಕವಾಗಿದೆ. ಎರಡನೇ ಸ್ಥಾನದಲ್ಲಿ ಒಕ್ಕಲಿಗ ಸಮುದಾಯವಿದೆ. ಜಾತಿ ಜನಗಣತಿ ವರದಿ ಬಿಡುಗಡೆ ಮಾಡುವುದಾಗಿ ಸರ್ಕಾರ ಸುಮ್ಮನೆ ಹೇಳುತ್ತಿದೆ. ಒಂದೊಮ್ಮೆ ಬಿಡುಗಡೆ ಮಾಡಿದರೆ ಒಕ್ಕಲಿಗರು ಮತ್ತು ಲಿಂಗಾಯತರು ಒಗ್ಗೂಡಿ ಹೋರಾಟ ಮಾಡುತ್ತೇವೆಂದು ತಿಳಿಸಿದರು.

10 ವರ್ಷಗಳ ಹಿಂದೆ ನಡೆಸಿದ ಸಮೀಕ್ಷೆಯು ಅವೈಜ್ಞಾನಿಕವಾಗಿದ್ದು, ಒಂದು ಸರ್ಕಾರ ವರದಿಯನ್ನು ಜಾರಿಗೆ ತಂದಿದ್ದೇ ಆದರೆ, ಹಿನ್ನಡೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದು ಕೇವಲ ನನ್ನ ಅಭಿಪ್ರಾಯವಷ್ಟೇ ಅಲ್ಲ, ಇತರ ಅನೇಕರ ಅಭಿಪ್ರಾಯವೂ ಆಗಿದೆ. ಗುರುವಾರ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ವರದಿಯ ಬಗ್ಗೆ ಚರ್ಚಿಸಲು ಸರ್ಕಾರ ಯೋಜಿಸುತ್ತಿದೆ. ಸರ್ಕಾರ ಚರ್ಚೆ ಮಾಡಲಿ ಸಾಮಾಜಿಕ–ಆರ್ಥಿಕ–ಶೈಕ್ಷಣಿಕ ಸಮೀಕ್ಷೆಯನ್ನು ವೈಜ್ಞಾನಿಕವಾಗಿ ನಡೆಸಲಿ ಎಂದು ಹೇಳಿದರು.

## 68 ಮಕ್ಕಳಲ್ಲಿ ಒಬ್ಬರಿಗೆ ಆಟಿಸಂ: ನಿರ್ಲಕ್ಷ್ಯ ಬೇಡವೆಂದ ಡಾ. ಹೆಚ್. ಹೇಮಾವತಿ



**ದಾವಣಗೆರೆ:** ಭಾರತದಲ್ಲಿ 180 ಲಕ್ಷ ಮಕ್ಕಳಲ್ಲಿ ಆಟಿಸಂ ಇದ್ದು, 2025 ರ ವರದಿ ಪ್ರಕಾರ 68 ಮಕ್ಕಳಲ್ಲಿ ಒಬ್ಬರಿಗೆ ಆಟಿಸಂ ಸಮಸ್ಯೆ ಇರುವುದು ಕಂಡುಬಂದಿದೆ ಎಂದು ಜಜಮು ವೈದ್ಯಕೀಯ ಮಹಾವಿದ್ಯಾಲಯದ ಮಾನಸಿಕ ಆರೋಗ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಹೆಚ್. ಹೇಮಾವತಿ ಹೇಳಿದರು.

ನಗರದ ಬಾಪೂಜಿ ಮಕ್ಕಳ ಆಸ್ಪತ್ರೆಯಲ್ಲಿ ವಿವೇಕ್ ಪೋಷಕರ ಕಾರ್ಯಾಗಾರದಡಿ 'ಆಟಿಸಂ ಮಕ್ಕಳನ್ನು ಬಲಶಾಲಿಯನ್ನಾಗಿ ಮಾಡೋಣ' ವಿಷಯ ಕುರಿತು ಉಪನ್ಯಾಸ ನೀಡಿದರು.

ಆಟಿಸಂ ನರಮಂಡಲದ ಬೆಳವಣಿಗೆಯಲ್ಲಿನ ನ್ಯೂನತೆಯಾಗಿದ್ದು, ಮಕ್ಕಳ ಸಾಮಾಜಿಕ ನಡವಳಿಕೆ ಮತ್ತು ಸಂವಹನದ ಕೊರತೆಯನ್ನು ಆಟಿಸಂ ಎಂದು ಗುರ್ತಿಸಲಾಗುತ್ತದೆ ಎಂದರು.

ಆಟಿಸಂ ರೋಗ ನಿರ್ಣಯದ ಮಾನದಂಡಗಳೆಂದರೇ, ಮಗು ಕಣ್ಣಲ್ಲಿ ಕಣ್ಣಿಟ್ಟು ನೋಡುವುದಿಲ್ಲ. ಪ್ರತಿಕ್ರಿಯಿಸುವುದಿಲ್ಲ. ಮಗುವಿಗೆ 14 ತಿಂಗಳಾದರೂ ಯಾವುದೇ ವಸ್ತುಗಳನ್ನು ಗುರ್ತಿಸುವುದಿಲ್ಲ. ದೈಹಿಕ ಬೆಳವಣಿಗೆಯಿದ್ದರೂ, ಸಾಮಾಜಿಕವಾಗಿ ಬೆಳವಣಿಗೆ ಆಗಿರುವುದಿಲ್ಲ.

ಆಟಿಸಂ ಮಕ್ಕಳು ಪರಾವಲಂಬಿಗಳಾಗಿದ್ದು, ಕಲಿಕೆಯಲ್ಲಿ ಹಿಂದಿರುತ್ತಾರೆ.

ಆಟಿಸಂ ರೋಗಕ್ಕೆ ಕಾರಣ, ಅನುವಂಶಿಕತೆ, ನರವೈಜ್ಞಾನಿಕ, ಪರಿಸರ ಅಂಶಗಳು, ರೋಗನಿರೋಧಕ ವ್ಯವಸ್ಥೆಯಲ್ಲಿ ವ್ಯತ್ಯಯ, ಅವಧಿ ಪೂರ್ವ ಜನನ, ಕಡಿಮೆ ತೂಕದ ಮಗುವಿನ ಜನನ ಹಾಗೂ ತಂದೆ ತಾಯಿಗಳು ವಯಸ್ಸಾದ ಮೇಲೆ ಮದುವೆ ಆಗಿದ್ದರೆ ಮಕ್ಕಳಲ್ಲಿ ಈ ಸಮಸ್ಯೆ ಕಾಣುತ್ತದೆ ಎಂದು ಎಚ್ಚರಿಸಿದರು.

ಮಕ್ಕಳಲ್ಲಿ ಪುನರಾವರ್ತಿತ ನಡವಳಿಕೆ, ಕಣ್ಣಲ್ಲಿ ಕಣ್ಣಿಟ್ಟು ನೋಡುವುದಿಲ್ಲ, ಅರ್ಥಪೂರ್ಣ ಮಾತಿನ ಕೊರತೆ, ದೇಹದ ಅತಿಯಾದ ಚಟುವಟಿಕೆ, ಆಕ್ರಮಣಕಾರಿ ಅಥವಾ ಸ್ವಯಂ ಹಾನಿಕಾರಕ ನಡವಳಿಕೆಗಳು ಆಟಿಸಂ ಮಕ್ಕಳ ಲಕ್ಷಣವಾಗಿದೆ. ಇಂತಹ ಮಕ್ಕಳು ದೊಡ್ಡವರಾದ ಮೇಲೆ ಸರಿ ಹೋಗುತ್ತಾರೆ ಎಂದು ನಿರ್ಲಕ್ಷ್ಯ ಮಾಡುವುದು ಸರಿಯಲ್ಲ ಎಂದು ಕಿವಿಮಾತು ಹೇಳಿದರು.

ಆಟಿಸಂಗೆ ಯಾವುದೇ ಔಷಧ, ಶಸ್ತ್ರಚಿಕಿತ್ಸೆ ಇಲ್ಲ. ತಂದೆ ತಾಯಿಗಳು ಬಹು ತಾಳ್ಮೆಯಿಂದ ನಿರಂತರ ಕಲಿಕೆ, ವರ್ತನಾ ಚಿಕಿತ್ಸಾ ತರಬೇತಿ, ಶಿಕ್ಷಣದ ಮೂಲಕ ಹಂತಹಂತವಾಗಿ ಚಿಕಿತ್ಸೆ ನೀಡಬೇಕು. ಮಕ್ಕಳಿಗೆ ಸಾಮಾಜಿಕವಾಗಿ ಬೆರೆಯಲು ಪ್ರೋತ್ಸಾಹಿಸಬೇಕು. ಸಂವಹನ ಕೌಶಲ್ಯ ಹೆಚ್ಚಿಸುವ ಚಟುವಟಿಕೆ ನೀಡಿ, ಆತ್ಮವಿಶ್ವಾಸ ಹೆಚ್ಚಿಸಬೇಕು. ಭಾಷಣ ಮತ್ತು ಭಾಷಾ ಚಿಕಿತ್ಸೆ, ವ್ಯಾವಹಾರಿಕ ಥೆರಪಿ, ಸಾಮಾಜಿಕ ಕೌಶಲ್ಯಗಳ ತರಬೇತಿ ನೀಡುವ ಮೂಲಕ ಮಕ್ಕಳಲ್ಲಿ ಬದಲಾವಣೆ ತರಬೇಕು ಎಂದು ತಿಳಿಸಿದರು.

ಕಾರ್ಯಕ್ರದಲ್ಲಿ ಸಿಹೆಚ್ ಐ ನಿರ್ದೇಶಕ ಡಾ. ಗುರುಪ್ರಸಾದ್, ಹಿರಿಯ ಮಕ್ಕಳ ತಜ್ಞಡಾ. ಸುರೇಶ ಬಾಬು, ವ್ಯವಸ್ಥಾಪಕರಾದ ಸಿದ್ದೇಶ್ವರ ಗುಬ್ಬಿ, ಡಾ. ರಮೇಶ್, ಡಾ. ಮೃತ್ಯುಂಜಯ, ಡಾ. ಮಧು. ಎಸ್. ಪೂಜಾರ್, ಡಾ.ರೇವಪ್ಪ ಉಪಸ್ಥಿತರಿದ್ದು,

## ಸಮಾಜ–ಸಂಘಟನೆಯೊಳಗೆ ಸಂಘರ್ಷ ಬೇಡ: ಹೆಚ್.ಎಸ್. ಶಿವಶಂಕರ್



**ದಾವಣಗೆರೆ:** ಪಂಚಮಸಾಲಿ ಸಮಾಜದ ನಾಯಕರು ವೈಯಕ್ತಿಕ ಹೇಳಿಕೆಗಳನ್ನು ನೀಡಬೇಡಿ. ಇದರಿಂದ ಗೊಂದಲಮಯ ವಾತಾವರಣ ಮೂಡುತ್ತಿದ್ದು, ದ್ವೇಷದ ಭಾವನೆ ಹೆಚ್ಚಾಗುತ್ತಿದೆ. ಎಲ್ಲರೂ ಒಗ್ಗಟ್ಟಾಗಿ ಸಾಗೋಣ ಎಂಬ ಮಾತುಗಳನ್ನು ಪಂಚಮಸಾಲಿ ಸಮುದಾಯದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳು, ಮಾಜಿ ಶಾಸಕರು ಆದ ಎಚ್.ಎಸ್. ಶಿವಶಂಕರ್ ಆಡಿ–ದರು.

ಗುರುವಾರ ಅವರ ಗೃಹ ಕಚೇರಿಯಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಇಲ್ಲಿ ಸಮಾಜ ದೊಡ್ಡದೆ ಹೊರತು, ವ್ಯಕ್ತಿಯಲ್ಲ. ವಿಜಯಾನಂದ ಕಾಶಪ್ಪನವರು ಹುಬ್ಬಳ್ಳಿಯಲ್ಲಿ ಸಭೆ ಸೇರಿ, ಶ್ರೀಗಳನ್ನು ಬದಲಿಸುವ ಹೇಳಿಕೆ ನೀಡಿದ್ದು, ಇದು ಸಮಾಜದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ. ಏಕಾಏಕಿ ಈ ರೀತಿ ಹೇಳಿಕೆ ನೀಡದಂತೆ ನಾನು ಕಾಶಪ್ಪನವರಿಗೆ ಮನವಿ ಮಾಡಿದ್ದೇನೆ. ಯಾರೂ ಕೂಡ ಫೇಸ್ಬುಕ್ ನಲ್ಲಿ ಇಲ್ಲ ಸಲ್ಲದ ಕಾಮೆಂಟ್ ಮಾಡುವುದನ್ನು ಬಿಡಿ ಎಂದು ಹೇಳುತ್ತೇನೆ ಎಂದರು.

ಏ.20ಕ್ಕೆ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ 2ಎ ಮೀಸಲಾತಿ ಹೋರಾಟದ ಬಗ್ಗೆ ಎಲ್ಲರನ್ನೂ ಸೇರಿಸಿ ಚರ್ಚಿಸಲು ಮಠದಲ್ಲಿ ಸಭೆ ಕರೆಯಲಾಗಿತ್ತು. ಕಾಶಪ್ಪನವರು ಏ.19 ಸಭೆ ಕರೆದರು. ನಾನು ಮತ್ತು ಪಾಟೀಲ್ ಈ ರೀತಿ ಬೇರೆ ಬೇರೆ ಸಭೆಗಳನ್ನು ನಡೆಸುವುದರಿಂದ ಸಮಾಜದಲ್ಲಿ ಒಡಕುಂಟಾಗುತ್ತದೆ. ದ್ವೇಷ ಬೆಳೆಯುತ್ತೆ ಸಭೆ ಬೇಡ ಅಂತ ಮನವಿ ಮಾಡಿದೆವು. ಇದರಿಂದ ಇಬ್ಬರೂ ಕೂಡ ಸಭೆ ರದ್ದುಪಡಿಸಿದ್ದಾರೆ. ಸಭೆಯ ಮುಂದಿನ ದಿನಾಂಕವನ್ನು ತಿಳಿಸಲಾಗುವುದು ಎಂದರು. ಒಗ್ಗಟ್ಟು ಇಲ್ಲದಿದ್ದರೆ, ನಮ್ಮ ಮೀಸಲಾತಿ ಹೋರಾಟ ಯಶಸ್ವಿಯಾಗದು.

ಈ ರೀತಿ ಗೊಂದಲ ಇರುವುದರಿಂದಲೇ ಸರ್ಕಾರ ಚೆಲ್ಲಾಟವಾಡುತ್ತಿದೆ. ದಿಕ್ಕು ತಿರುಗಿಸುವ ತಂತ್ರ ಮಾಡುತ್ತಿದೆ ಎಂದು ಕಿವಿಮಾತು ಹೇಳಿದರು.

ಯತ್ನಾಳ್ ಪಕ್ಷದಿಂದ ಹೊರ ಹಾಕಿದ್ದು ಆಂತರಿಕ ವಿಚಾರ. ಯತ್ನಾಳ್ ಹೊರ ಹಾಕಿದ್ದಕ್ಕೆ ಪಂಚಮಸಾಲಿ ಸಮುದಾಯ ಹೋರಾಟ ಮಾಡಿದ್ದು ಒಳ್ಳೇಯದೆ.

ನಾವು ಯತ್ನಾಳ್ ಹೊರ ಹಾಕಿದ್ದರಿಂದ ಎನ್ ಡಿಎ ಕೂಟಕ್ಕೆ ಸಮಸ್ಯೆ ಆಗುತ್ತೆ ಅಂತ ಮಾಡಿದ್ದೆ. ಆದ್ರೆ ಪಕ್ಷದ ನಿರ್ಧಾರ ಆಗಿರೋದನ್ನು ಒಪ್ಪಿಕೊಳ್ಳಬೇಕಾಗುತ್ತೆ ಎಂದು ಶಿವಶಂಕರ್ ಹೇಳಿದರು.

## ಯುವನಿಧಿಗೆ ನೊಂದಾಯಿಸಿಕೊಂಡು ಪ್ರಯೋಜನ ಪಡೆಯಲು ಯುವಜನತೆಗೆ ಕರೆ

**ಶಿವಮೊಗ್ಗ:** 'ಯುವನಿಧಿ' ಯುವಜನತೆ ಉದ್ಯೋಗ ಪಡೆಯಲು ಆರ್ಥಿಕ ಸಹಕಾರ ಒದಗಿಸುವ ಒಂದು ಅತ್ಯುತ್ತಮ ಯೋಜನೆಯಾಗಿದ್ದು, ಯಾವುದೇ ಪದವಿ–ಡಿಪ್ಲೊಮಾ ಪೂರ್ಣಗೊಳಿಸಿದ ಅರ್ಹ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ ಮೂಲಕ ಈ ಯೋಜನೆಗೆ ನೋಂದಾಯಿಸಕೊಳ್ಳಬೇಕೆಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಹಯೋಗದಲ್ಲಿ ಗುರುವಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಯುವಜನ ನೋಂದಣಿ




ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವನಿಧಿ ವಿದ್ಯಾರ್ಥಿಗಳು ಪದವಿ, ಡಿಪ್ಲೊಮಾ ಮುಗಿಸಿದ ಮೇಲೆ ಕೆಲಸ ಹುಡುಕಲು, ಇತರೆ ಪರೀಕ್ಷೆಗಳನ್ನು ಬರೆಯಲು ಆರ್ಥಿಕವಾಗಿ ಸಹಕಾರ ನೀಡುವ ಒಂದು ಯೋಜನೆಯಾಗಿದೆ. ಪದವಿ ಮುಗಿದ ನಂತರ ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಅಥವಾ ಉತ್ತಮ ಉದ್ಯೋಗ ಪಡೆಯಬೇಕೆಂದು ಅನೇಕ ಕನಸುಗಳನ್ನು ಕಾಣುತ್ತಾರೆ. ಆದರೆ ಮನೆಯಲ್ಲಿ ಕೆಲಸ ಹುಡುಕಲು, ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ಹಣ ಕೇಳಲು ಕಷ್ಟವಾಗುತ್ತದೆ. ಯುವಜನತೆಯ ಈ ಭಾರ ಕಡಿಮೆ ಮಾಡಲೆಂದೇ ರಾಜ್ಯ ಸರ್ಕಾರ ಇವರಲ್ಲಿ ಆರ್ಥಿಕ ಸ್ವಾವಲಂಬನೆ ತರಲು ಈ ಯೋಜನೆಯನ್ನು ಜಾರಿಗೊಳಿಸಿದೆ.

ರಾಜ್ಯ ಸರ್ಕಾರ ಜನರ ಕಲ್ಯಾಣಕ್ಕಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು ಯುವನಿಧಿ ಯೋಜನೆ ಯುವಜನರ ಆಶಾಕಿರಣವಾಗಿದೆ. ನಿರುದ್ಯೋಗಿ ಪದವೀಧರರಿಗೆ ಕೇವಲ ನಿರುದ್ಯೋಗ ಭತ್ಯೆ ನೀಡುವುದು ಮಾತ್ರ ಸರ್ಕಾರದ ಉದ್ದೇಶವಲ್ಲ, ಹಲವಾರು ಆರ್ಥಿಕ, ಕೌಟುಂಬಿಕ ಸಮಸ್ಯೆಗಳಿಂದ ಬಳಲುತ್ತಿರುವ ಯುವ ಜನರಿಗೆ ಆತ್ಮವಿಶ್ವಾಸ ತುಂಬುವುದಲ್ಲದೇ ತಮ್ಮ ವಿದ್ಯಾರ್ಹತೆಗೆ ತಕ್ಕ ಕೌಶಲ್ಯವನ್ನು ಪಡೆದುಕೊಳ್ಳಲು ಸಹ ಸರ್ಕಾರ ನೆರವಾಗುತ್ತಿದೆ.

ಯಾವುದೇ ಪದವಿ ಮುಗಿಸಿ ನೋಂದಣಿಯಾದ ಅಭ್ಯರ್ಥಿಗಳಿಗೆ ಪ್ರತಿ ತಿಂಗಳು ರೂ.3 ಸಾವಿರ ಹಾಗೂ ಡಿಪ್ಲೊಮಾ ಮುಗಿಸಿದ ಅಭ್ಯರ್ಥಿಗಳಿಗೆ ರೂ.1500 ಗಳನ್ನು ನೇರವಾಗಿ ಅವರ ಖಾತೆಗೆ ಜಮಾ ಮಾಡಲಾಗುತ್ತಿದೆ. ಎಲ್ಲ ಅರ್ಹ ಅಭ್ಯರ್ಥಿಗಳು ನೋಂದಣಿಯಾಗುವ ಮೂಲಕ ಇದರ ಸದುಪಯೋಗ ಪಡೆಯಬೇಕು. ಏಕಾಗ್ರತೆಯಿಂದ ವಿದ್ಯಾರ್ಥಿಗಳು ಓದಿ, ಉತ್ತಮ ಅಂಕ ಪಡೆದು ಕಾಲೇಜಿಗೆ ಹಾಗೂ ಪೋಷಕರಿಗೆ ಕೀರ್ತಿ ತರಬೇಕೆಂದು ಹಾರೈಸಿದರು. ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಹೆಚ್ ಎಂ ಮಧು ಮಾತನಾಡಿ, ಯುವಜನತೆಯ ಭವಿಷ್ಯಕ್ಕೊಂದು ಉತ್ತಮ ಯೋಜನೆಯೇ ಯುವನಿಧಿ. ಯಾವುದೇ ಪದವಿ, ಡಿಪ್ಲೊಮಾ ಮುಗಿದ ಮೇಲೆ ಪೋಷಕರ ಮೇಲೆ ಅವಲಂಬಿತರಾಗುವುದನ್ನು ತಪ್ಪಿಸಲು, ಉದ್ಯೋಗ ಪಡೆಯಲು ಸಹಕರಿಸಲು ಸರ್ಕಾರ ಯುವನಿಧಿ ಯೋಜನೆ ಜಾರಿಗೊಳಿಸಿದೆ. ಪದವಿ ಮುಗಿದ ಕೂಡಲೇ ಈ ಯೋಜನೆಗೆ ನೋಂದಾಯಿತರಾಗುವ ಮೂಲಕ ಈ ಯೋಜನೆಯ ಸದುಪಯೋಗ ಪಡೆಯಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ಮತ್ತು ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

### ವೃಷಭ ರಾಶಿ

ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಏನಾದರೂ ಸರಿಪಡಿಸಲು ಹಾಗೂ ಸ್ನೇಹಿತರ ಜೊತೆ ಏನಾದರೂ ಕುತೂಹಲಕಾರಿ ಹಾಗೂ ಮನರಂಜನೀಯವಾದದ್ದನ್ನು ಮಾಡಲು ಒಂದು ಪರಿಪೂರ್ಣ ದಿನ.

### ಮಿಥುನ ರಾಶಿ

ವಿಜಯೋತ್ಸವವು ನಿಮಗೆ ಪ್ರಚಂಡ ಸಂತೋಷವನ್ನು ನೀಡುತ್ತದೆ. ನಿಮ್ಮ ಸಂತೋಷವನ್ನು ಅನುಭವಿಸಲು ನೀವಿದನ್ನು ನಿಮ್ಮ ಸ್ನೇಹಿತರ ಜೊತೆ ಹಂಚಿಕೊಳ್ಳಬಹುದು. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಮಕ್ಕಳು ಮತ್ತು ಕುಟುಂಬ ಇಂದು ನಿಮ್ಮ ಕೇಂದ್ರಬಿಂದುವಾಗಿರುತ್ತದೆ. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ

### ಕರ್ಕ ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

### ಸಿಂಹ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ನಿಮ್ಮ ಪ್ರೀತಿಯ ಜೀವನದಲ್ಲಿ ಕಹಿ ಘಟನೆಗಳನ್ನು ಕ್ಷಮಿಸಿ. ನೀವು ಕೆಲಸದಲ್ಲಿ ತುಂಬ ಒತ್ತಡ ಹೇರಿದಲ್ಲಿ ಕೋಪ ಹೆಚ್ಚಾಗುತ್ತದೆ. ಯಾವುದೇ ನಿರ್ಧಾರಗಳನ್ನು ತೆಗೆದುಕೊಳ್ಳುವ ಮೊದಲು ಇತರರರ ಅವಶ್ಯಕತೆಗಳನ್ನು ತಿಳಿಯಲು ಪ್ರಯತ್ನಿಸಿ. ಚಂದ್ರನ ಸ್ಥಿತಿಯನ್ನು ನೋಡಿದರೆ, ಇಂದು ನಿಮಗೆ ಸಾಕಷ್ಟು ಉಚಿತ ಸಮಯ ಸಿಗುತ್ತದೆ ಎಂದು ಹೇಳಬಹುದು

### ಕನ್ಯಾ ರಾಶಿ

ನಿಮ್ಮ ಭಾವನೆಗಳನ್ನು ವಿಶೇಷವಾಗಿ ಕೋಪವನ್ನು ನಿಯಂತ್ರಿಸಲು ಪ್ರಯತ್ನಿಸಿ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ನೀವು ಇಂದು ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ.

### ತುಲಾ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ. ನಿಮ್ಮ ಜೊತೆಗಿರುವ ನಿಮ್ಮೊಂದಿಗೆ ಬಹಳ ಸಂತೋಷದಿಂದಿರುವುದಿಲ್ಲ ನೀವು ಅವರನ್ನು ಸಂತೋಷಗೊಳಿಸಲು ಏನೇ ಮಾಡಿದರೂ ಕೂಡ. ಕಳೆದ ಸಂತೋಷದ ನೆನಪುಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ.

### ವೃಶ್ಚಿಕ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಇಂದು ನೀವು ಸಲಹೆ ಕೊಟ್ಟರೆ ಅದನ್ನು ಸ್ವೀಕರಿಸಲೂ ಸಿದ್ಧವಾಗಿರಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಪ್ರಮುಖ ಭೂಮಿ ಒಪ್ಪಂದಗಳನ್ನು ಮಾಡಲು ಹಾಗೂ ಮನರಂಜನಾ ಯೋಜನೆಗಳಿಗಾಗಿ ಅನೇಕರನ್ನು ಸಂಘಟಿಸುವ ಒಂದು ಸ್ಥಾನದಲ್ಲಿರುತ್ತೀರಿ.

### ಧನು ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಇತರರಿಗೆ ನಿಮ್ಮ ಸಮಯ ನೀಡಲು ಒಳ್ಳೆಯ ದಿನ.

### ಮಕರ ರಾಶಿ

ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಪಾಲಕರು ಮತ್ತು ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸಲು ಅವರಿಗೆ ಸಾಧ್ಯವಾದದ್ದನ್ನೆಲ್ಲ ಮಾಡುತ್ತಾರೆ.

### ಕುಂಭ ರಾಶಿ

ನಿಮ್ಮ ಭಯವನ್ನು ಗುಣಪಡಿಸಲು ಇದು ಒಳ್ಳೆಯ ಸಮಯ. ಇದು ಭೌತಿಕ ಚೈತನ್ಯವನ್ನು ಕಡಿಮೆ ಮಾಡುವುದಲ್ಲದೇ ಜೀವಿತಾವಧಿಯನ್ನೂ ಕಡಿಮೆ ಮಾಡುತ್ತದೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು, ಆದರೆ ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ ಏಕೆಂದರೆ ಹಣವನ್ನು ಉಳಿಸಲಾಗಿದೆ ಇದರಿಂದ ಅದು ಕೆಟ್ಟ ಸಮಯದಲ್ಲಿ ನಿಮಗೆ ಉಪಯುಕ್ತವಾಗಿರುತ್ತದೆ.

### ಮೀನ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

## ಕಬ್ಬಳ ಗ್ರಾಮದಲ್ಲಿ ಕ್ರಿಕೆಟ್ ಹಬ್ಬ – 2025

### ಚಾಂಪಿಯನ್ಸ್ ಟ್ರೋಫಿ ಗೆದ್ದ ಲಾಯಲ್ ಆರ್ಸಿಬಿಯನ್ಸ್ ತಂಡ




**ದಾವಣಗೆರೆ :** ಚನ್ನಗಿರಿ ತಾಲ್ಲೂಕಿನ ಕಬ್ಬಳ ಗ್ರಾಮದಲ್ಲಿ ಎಕೆ–47 ಕ್ರಿಕೆಟ್ ಕ್ಲಬ್ ನ ವತಿಯಿಂದ ಆಯೋಜಿಸಲಾಗಿದ್ದ ವಿಕಬ್ಬಳ ಕ್ರಿಕೆಟ್ ಹಬ್ಬ ಸೀಸನ್ 11ರಹಿ ಟೂರ್ನಿಯಲ್ಲಿ ಲಾಯಲ್ ಆರ್ಸಿಬಿಯನ್ಸ್ ತಂಡವು ಎಸ್.ಎಸ್ ಐಕಾನ್ ತಂಡವನ್ನು ಸೋಲಿಸಿ ಚಾಂಪಿಯನ್ಶಿಪ್ ಮತ್ತು ನಗದು ಬಹುಮಾನ ರೂ 33 ಸಾವಿರ ತನ್ನದಾಗಿಸಿಕೊಂಡಿತು.

ದ್ವಿತೀಯ ಬಹುಮಾನ ಪಡೆದ ಎಸ್.ಎಸ್ ಐಕಾನ್ ತಂಡಕ್ಕೆ ಪಾರಿತೋಷಕ ಮತ್ತು ರೂ 22 ಸಾವಿರ

ನಗದು ನೀಡಲಾಯಿತು. ರಿಷಿ ಭುವಿ ಕ್ರಿಕೆಟರ್ಸ್ ತಂಡವು ಮೂರನೇ ಸ್ಥಾನ ಪಡೆಯಿತು.

ಐಪಿಎಲ್ ಮಾದರಿಯಲ್ಲಿ ಕ್ರಿಕೆಟ್ ಟೂರ್ನಿಯನ್ನು ಆಯೋಜಿಸಲಾಗಿತ್ತು. ಈ ಸೌಹಾರ್ದಯುತ ಪಂದ್ಯಾವಳಿಯಲ್ಲಿ ಎಂಟು ತಂಡಗಳು ಭಾಗವಹಿಸಿದ್ದು, ಸೋಲು ಗೆಲುವು ಸಾಮಾನ್ಯವಾಗಿದ್ದು ಕ್ರೀಡಾಪಟುಗಳು ಕ್ರೀಡಾ ಸ್ಫೂರ್ತಿಯಿಂದ ಭಾಗವಹಿಸಿದ್ದರು. ಕಬ್ಬಳ ಕ್ರಿಕೆಟ್ ಹಬ್ಬದ ಮೂಲ ಧ್ಯೇಯ ವಾಕ್ಯ "ಕ್ರೀಡೆ ಸ್ನೇಹಕ್ಕಾಗಿ ಹೊರತು ಸಮರಕ್ಕಾಗಿ ಅಲ್ಲ' ಎಂಬ ಹೆಸರಿನಡಿ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿದ್ದು, ಬಹುಮಾನಗಳನ್ನು ಸ್ಥಳಿಯರು ಪ್ರಾಯೋಜಿಸಿದ್ದರು. ಒಟ್ಟಿನಲ್ಲಿಮೂರು ದಿನಗಳ ಕಾಲ ಟೂರ್ನಮೆಂಟ್ ಯಶಸ್ವಿಯಾಗಿ ನಡೆಯಿತು.

ಈ ವೇಳೆ ಗ್ರಾಮದ ಮುಖಂಡರಾದ ಮನೋಹರ್ ನಾಯ್ಕ, ಬಿಜೆಪಿ ಶಿವ ನಾಯ್ಕ, ಸತೀಶ್ ನಾಯ್ಕ, ಹಿರಿಯ ಆಟಗಾರರಾದ ಸುಧೀರ್, ಸ್ವಾಮಿ, ಲಾಕೇಶ್, ಲೋಕೇಶ್,

ಸುಪ್ರೀತ್, ದಾಗಿ ಚೇತನ್, ಅವಿನಾಶ್ ಗೌಡ, ಧನರಾಜ್, ಕೇಶವ, ಹನುಮಂತ, ಶರತ್, ಕಾರ್ತಿಕ್, ನಿಖಿಲ್, ನಟರಾಜ್, ಮಧು ಸೇರಿದಂತೆ ಎಲ್ಲಾ ತಂಡದ ಪ್ರಾಂಚೆಸಿಗಳು, ಆಟಗಾರರು ಹಾಗೂ ಕ್ರೀಡಾ ಪ್ರೇಮಿಗಳು ಹಾಜರಿದ್ದರು.

## ಲಿಂಗಾಯತರು–ಒಕ್ಕಲಿಗರನ್ನು ಎದುರು ಹಾಕಿಕೊಂಡು ಆಡಳಿತ ಮಾಡಲು ಸಾಧ್ಯವೇ?: ಗುಡುಗಿದ ಎಸ್ಸೆಸ್

**ದಾವಣಗೆರೆ:** ರಾಜ್ಯದಲ್ಲಿ ಲಿಂಗಾಯತರು, ಒಕ್ಕಲಿಗರನ್ನು ಎದುರು ಹಾಕಿಕೊಂಡು ರಾಜ್ಯಭಾರ ಮಾಡುವುದಕ್ಕೆ ಆಗುತ್ತದೆಯೇ? ಎಂದಿರುವ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರಾಧ್ಯಕ್ಷರು, ಹಾಲಿ ಶಾಸಕರು ಆಗಿರುವ ಡಾ. ಶಾಮನೂರು ಶಿವಶಂಕರಪ್ಪನವರ ಖಡಕ್ ಮಾತು, ಜಾತಿಗಣತಿ ವಿಚಾರದಲ್ಲಿ ಮೊದಲೇ ಇಕ್ಕಟ್ಟಿಗೆ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮತ್ತಷ್ಟು ಆತಂಕಕ್ಕೆ ದೂಡಿದಂತಾಗಿದೆ.

ಮಂಗಳವಾರ ದಾವಣಗೆರೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಶಾಮನೂರು ಶಿವಶಂಕರಪ್ಪ, ರಾಜ್ಯದಲ್ಲಿ ವೀರಶೈವ ಲಿಂಗಾಯತರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಒಕ್ಕಲಿಗರು ನಂತರದ ಸ್ಥಾನದಲ್ಲಿದ್ದಾರೆ. ಈ ಎರಡೂ ಸಮುದಾಯಗಳನ್ನೂ ಎದುರು ಹಾಕಿಕೊಂಡು ರಾಜ್ಯಭಾರ ಮಾಡುವುದಕ್ಕೆ ಆಗುವುದಿಲ್ಲ ಎಂದು ಗುಡುಗಿದರು.

ಈ ಹಿಂದೆ ತಮ್ಮ ಸರ್ಕಾರದ ವಿರುದ್ಧವೇ ಶಿವಶಂಕರಪ್ಪನವರು ವೀರಶೈವ ಲಿಂಗಾಯತ ಅಧಿಕಾರಿಗಳನ್ನು ಉನ್ನತ ಹುದ್ದೆಯಲ್ಲಿ ಇರಲು ಬಿಡುತ್ತಿಲ್ಲ. ವಿನಾಕಾರಣ ತೊಂದರೆ ನೀಡಲಾಗುತ್ತಿದೆ ಎಂದು ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿದ್ದು ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು. ಮತ್ತೆ ಜಾತಿಜನಗಣತಿ ಭೂತ ಎದ್ದಿದ್ದು, ಮತ್ತೆ ಲಿಂಗಾಯತರು ಮತ್ತು ಒಕ್ಕಲಿಗರ ವಿರೋಧ ಕಟ್ಟಿಕೊಳ್ಳುವ ಆಂತಕ ಸಿದ್ದರಾಮಯ್ಯ ಅವರಿಗೆ ಎದುರಾಗಲಿದೆ.

ಜಾತಿ ಜನಗಣತಿ ವರದಿ ಬಿಡುಗಡೆಗೆ ತುದಿಗಾಲಲ್ಲಿ ನಿಂತಿರುವ ರಾಜ್ಯ ಸರ್ಕಾರಕ್ಕೆ ಮಾತಿನ ಚಾಟಿ ಬೀಸಿರುವ ಶಾಮನೂರು ಶಿವಶಂಕರಪ್ಪ ಜಾತಿ ಜನಗಣತಿ ವರದಿಯನ್ನು ಬಿಡುಗಡೆ ಮಾಡುತ್ತೇವೆಂದು ಸುಮ್ಮನೇ ಹೇಳುತ್ತಿದ್ದಾರಷ್ಟೇ. ರಾಜ್ಯದಲ್ಲಿ ವೀರಶೈವ ಲಿಂಗಾಯತರು ಫಸ್ಟ್, ಒಕ್ಕಲಿಗರು ಸೆಕೆಂಡ್ ಇದ್ದಾರೆ ಎಂದರು.

ನಮ್ಮನ್ನು ಎದುರು ಹಾಕಿಕೊಂಡು, ರಾಜ್ಯಭಾರ ಮಾಡುವುದಕ್ಕೆ ಆಗುತ್ತಾ?

ಒಂದು ವೇಳೆ ಜಾತಿ ಜನಗಣತಿ ವರದಿಯನ್ನು ಬಿಡುಗಡೆ ಮಾಡಿದ್ದೇ ಆದಲ್ಲಿ ವೀರಶೈವ ಲಿಂಗಾಯತರು ಹಾಗೂ ಒಕ್ಕಲಿಗರು ಇಬ್ಬರೂ ಒಟ್ಟಾಗಿ ಹೋರಾಟ ಮಾಡುತ್ತೇವೆ. ಈಗಾಗಲೇ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಸಭೆಯನ್ನೂ ನಡೆಸಿ, ಮುಂದಿನ ನಡೆಗಳ ಬಗ್ಗೆಯೂ ನಾವು ಚರ್ಚೆ ಮಾಡಿದ್ದೇವೆ ಎಂದು ತಿಳಿಸಿದರು.

## ಇಂದು ಜಕಾತಮ್ಮ ದೇವಿಯ ಹಬ್ಬ, ಪರಾವು

**ಶಿವಮೊಗ್ಗ:** ತಾಲೂಕಿನ ದೇವಕಾತಿಕೊಪ್ಪ (ಜಕಾತಿಕೊಪ್ಪ) ದ ಮಾತೆ ಶ್ರೀ ಆದಿಶಕ್ತಿ ಜಕಾತಮ್ಮ ದೇವಿಯ ಹಬ್ಬ, ಪರಾವು, ಮಹಾರುದ್ರಾಭಿಷೇಕ, ಕೆಂಡದಾರ್ಚನೆ ಇಂದು ರಂದು ನಡೆಯಲಿದೆ.

ದೇವಕಾತಿಕೊಪ್ಪದ ಶ್ರೀ ಬಸವೇಶ್ವರ ದೇವಸ್ಥಾನ ಕಮಿಟಿ ಆಶ್ರಯದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಇಂದು ರಾತ್ರಿ ಕಡೆನಂದಿಹಳ್ಳಿ ದುಗ್ಗಿ ಮತ್ತು ತಪೋ ಕ್ಷೇತ್ರದ ಶ್ರೀ ರೇವಣಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಆಗಮಿಸಲಿದ್ದು, ನಾಳೆ ಬೆಳಗ್ಗೆ ಶೀಗಳ ಸಮ್ಮುಖದಲ್ಲಿ ವಿಶೇಷ ಪೂಜೆ ಹಾಗೂ ಶ್ರೀ ಮಹಾರುದ್ರಾಭಿಷೇಕ ಕೆಂಡದಾರ್ಚನೆ ಹಾಗೂ ಬಾಳೆಕೊಪ್ಪದ ವೀರಭದ್ರೇಶ್ವರ ಪುರವಂತಿಕೆ ಸಂಘದ ವೀರಗಾಸೆಯೊಂದಿಗೆ ರಾಜಭೀದಿ ಉತ್ಸವ ನಡೆಯಲಿದೆ.ಮಧ್ಯಾಹ್ನ

53ನೇ ವರ್ಷದ ಶ್ರೀ ಆದಿಶಕ್ತಿ ಜಕಾತಮ್ಮ ದೇವಿಯ ಹಬ್ಬ ಪರಾವು ನಡೆಯಲಿದೆ.

ರಾತ್ರಿ 9:00ಗೆ ಶ್ರೀ ನಾಟ್ಯಮಯೂರಿ ಆರ್ಕೆಸ್ಟ್ರಾ, ಭದ್ರಾವತಿ ಅವರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಮಾತೆಯ ಕೃಪೆಗೆ ಪಾತ್ರರಾಗಲು ಶ್ರೀ ಬಸವೇಶ್ವರ ದೇವಸ್ಥಾನ ಕಮಿಟಿ ಹಾಗೂ ದೇವಕಾತಿಕೊಪ್ಪದ ಗ್ರಾಮಸ್ಥರು ಕೋರಿದ್ದಾರೆ.

## ಭಕ್ತಿಗೀತೆಗಳು ಅಂತಃಶಕ್ತಿ ವೃದ್ಧಿಸುತ್ತವೆ: ಸಿ.ಟಿ.ರವಿ

**ಚಿಕ್ಕಮಗಳೂರು:** ಮುಂಜಾನೆ ಭಕ್ತಿಗೀತೆಗಳನ್ನು ಕೇಳುವುದರಿಂದ ನಮ್ಮ ಅಂತಃಶಕ್ತಿ ವೃದ್ಧಿಯಾಗುತ್ತದೆ ಎಂದು ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿ ತಿಳಿಸಿದರು. ಚಿಕ್ಕಮಗಳೂರು ಸಮೀಪದ ಕುಮಾರಗಿರಿಯ ಶ್ರೀ ಸುಬ್ರಹ್ಮಣ್ಯ ಸ್ವಾಮಿಯ ಕುರಿತಾಗಿ ಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತ ಸಾಹಿತ್ಯ ಪರಿಷತ್, ಸೂರಂಕಣ, ದೀವಿಗೆ ಬಳಗ, ಗುರುಕೃಪಾ ಸಂಗೀತ ಸೇವಾ ಟ್ರಸ್ಟ್‌ನವರು ಹೊರತಂದ, ಕಲ್ಕಟ್ಟೆ ಗಾನದೀವಿಗೆ ಸರಣಿಯ 27ನೇ ಭಕ್ತಿಗೀತೆಯನ್ನು ಇತ್ತೀಚೆಗೆ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.




ಕ್ಷೇತ್ರ ಮತ್ತು ಕ್ಷೇತ್ರ ದೇವತೆಯನ್ನು ನಿರಂತರವಾಗಿ ನೆನೆಯುವಂತೆ ಮಾಡುವ ಭಕ್ತಿಗೀತೆಗಳು ನಮ್ಮ ಭಾವ ಸಂಸ್ಕಾರ ರೂಪುಗೊಳ್ಳುವುದರಲ್ಲೂ ಪ್ರಮುಖ ಪಾತ್ರ ವಹಿಸುತ್ತವೆ. ಕಲ್ಕಟ್ಟೆ ಪುಸ್ತಕದ ಮನೆಯವರು ಹೆಚ್.ಎನ್. ಮಲ್ಲೇಶರಾವ್ ಸವಿನೆನಪಿನಲ್ಲಿ ಹೊರತರುತ್ತಿರುವ ಈ ಗಾನದೀವಿಗೆ ಸರಣಿ, ನಮ್ಮ ಸಂಸ್ಕೃತಿ ಗಾನ ಸೇವೆ ಸಲ್ಲಿಸುತ್ತಿರುವ ಸತ್ಕಾರ್ಯ ಎಂದು ಅವರು ತಿಳಿಸಿದರು.

ಸಾಹಿತಿ ನಾಗರಾಜರಾವ್ ಕಲ್ಕಟ್ಟೆ ಮಾತನಾಡಿ ಈ ಸುಂದರ ಪರಿಸರದಲ್ಲಿರುವ ಕುಮಾರಸ್ವಾಮಿಯ ದೇವಾಲಯ ನಿಜಕ್ಕೂ ಭಾವಾನುಭೂತಿಯನ್ನು ನೀಡುತ್ತದೆ. ನವಿಲುಗುತ್ತಿ ಎಂಬ ಈ ಭೂಪ್ರದೇಶ ಈಗ ಕುಮಾರಗಿರಿಯಾಗಿ ಜನರ ಮನಸೆಳೆಯುತ್ತಿರುವುದಲ್ಲದೆ, ನೆಮ್ಮದಿ ನೀಡುತ್ತಿದೆ. ಪ್ರಕೃತಿಯೇ ದೈವ ಎಂಬುದಕ್ಕೆ ಇಂತಹ ದೇವಾಲಯ ಪ್ರದೇಶಗಳು ಸಾಕ್ಷಿ ಎಂದರು. ಸಾಹಿತ್ಯ ಸಹಕಾರ ನೀಡಿದ ಜಿ.ರಮೇಶ್ ಮಾತನಾಡಿ, ಈ ಕ್ಷೇತ್ರದ ಕುರಿತು, ಶ್ರೀ ಸುಬ್ರಹ್ಮಣ್ಯ ಸ್ವಾಮಿಯ ಕುರಿತು ಪ್ರಪ್ರಥಮ ಭಕ್ತಿಗೀತೆ ಹೊರಬರುತ್ತಿರುವ ಈ ಸಂದರ್ಭ ನಿಜಕ್ಕೂ ರೋಮಾಂಚನಕಾರಿಯಾದುದು. ಇದಕ್ಕಾಗಿ ಸಾಹಿತ್ಯ ಸಂಗೀತ ನೀಡಿ ಹಾಡಿದ ನಾಗರಾಜರಾವ್ ಕಲ್ಕಟ್ಟೆ, ಸಹಗಾಯನ ನೀಡಿದ ವೈಷ್ಣವಿ ಎನ್. ರಾವ್, ಹಿನ್ನೆಲೆ ಸಂಗೀತ ನೀಡಿದ ಕೆ.ಎನ್.ನಾಗಭೂಷಣ್, ನಿರ್ಮಾಪಕಿ ರೇಖಾ ನಾಗರಾಜರಾವ್ ನಿಜಕ್ಕೂ ಅಭಿನಂದನಾರ್ಹರು. ಈ ತಂಡದಿಂದ ಮತ್ತಷ್ಟು ಕ್ಷೇತ್ರ ಸೇವೆಯಾಗಲಿ ಎಂದರು. ಇದೇ ವೇಳೆ ಸಂಗೀತ ತಂಡವನ್ನು ಶಾಸಕರು ಸನ್ಮಾನಿಸಿದರು.

ಪಾಕತಜ್ಞ ಬಾಟಾ ನಾಗೇಂದ್ರ, ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನ ಧರ್ಮದರ್ಶಿ ಮಂಡಳಿಯ ಅಧ್ಯಕ್ಷ ಶ್ರೀ ಗುಣಶೇಖರನ್, ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್, ಉಪಾಧ್ಯಕ್ಷರುಗಳಾದ ಜಿ.ರಮೇಶ್ ಮತ್ತು ಮಹಾಲಿಂಗಂ, ಖಜಾಂಚಿ ಕೃಷ್ಣರಾಜು, ಸದಸ್ಯರಾದ ಅಣ್ಣಾವೇಲು, ಜಿ. ಶಂಕರ್ ಕುಮಾರ್, ಮುರುಗನ್, ಪೂವೆಂದಿರನ್, ಗೋಪಾಲ್, ಮತ್ತು ಇತರರು ಉಪಸ್ಥಿತರಿದ್ದರು.

16ಸಿಕೆಎಂ ಫೋಟೋ: ಕುಮಾರಗಿರಿಯಲ್ಲಿ ಶ್ರೀ ಸುಬ್ರಹ್ಮಣ್ಯ ಸ್ವಾಮಿಯ ಕುರಿತಾಗಿ ಕಲ್ಕಟ್ಟೆ ಗಾನದೀವಿಗೆ ಸರಣಿಯ 27ನೇ ಭಕ್ತಿಗೀತೆಯನ್ನು ಇತ್ತೀಚೆಗೆ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಲೋಕಾರ್ಪಣೆಗೊಳಿಸಿದರು.


**ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಲಯ (ಹಿ.ವಿ) ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್ ನಂ: 175/2025**

ಅರ್ಜಿದಾರರು: 1.ಇಂದ್ರಮ್ಮ ಬಿನ್ ನಿಂಗಪ್ಪ ವಯಸ್ಸು ಸುಮಾರು 49 ವರ್ಷ ವಾಸ:ದಿಂಡದಹಳ್ಳಿ ಗ್ರಾಮ, ದಾವಣಗೆರೆ ತಾಲ್ಲೂಕು & ಜಿಲ್ಲೆ 2. ಗಂಗಮ್ಮ ಬಿನ್ ನಿಂಗಪ್ಪ ವಯಸ್ಸು ಸುಮಾರು 62 ವರ್ಷ ವಾಸ: ಕಾಶೀಪುರ ಗ್ರಾಮ, ದಾವಣಗೆರೆ, ತಾಲ್ಲೂಕು & ಜಿಲ್ಲೆ 3.ಹನುಮಕ್ಕ ಬಿನ್ ನಿಂಗಪ್ಪ ವಯಸ್ಸು ಸುಮಾರು 60 ವರ್ಷ ವಾಸ: ಶಾಮನುರು ಗ್ರಾಮ, ದಾವಣಗೆರೆ ತಾಲ್ಲೂಕು & ಜಿಲ್ಲೆ 4. ರತ್ನಮ್ಮ ಬಿನ್ ನಿಂಗಪ್ಪ ವಯಸ್ಸು ಸುಮಾರು 59 ವರ್ಷ ವಾಸ:ಹದಡಿ ಗ್ರಾಮ, ದಾವಣಗೆರೆ ತಾಲ್ಲೂಕು & ಜಿಲ್ಲೆ 5.ರುದ್ರಮ್ಮ ಬಿನ್ ನಿಂಗಪ್ಪ ವಯಸ್ಸು ಸುಮಾರು 57 ವರ್ಷ ವಾಸ: ತೊಗಲೆರೆ ಗ್ರಾಮ, ದಾವಣಗೆರೆ ತಾಲ್ಲೂಕು & ಜಿಲ್ಲೆ 6. ಗೀತಾ ಬಿನ್ ನಿಂಗಪ್ಪ ವಯಸ್ಸು ಸುಮಾರು 51 ವರ್ಷ, ವಾಸ: ಕಾರಿಗನೂರು ಗ್ರಾಮ, ಚನ್ನಗಿರಿ ತಾಲ್ಲೂಕು & ದಾವಣಗೆರೆ ಜಿಲ್ಲೆ. 7. ಸಣ್ಣ ನಿಂಗಪ್ಪ ಬಿನ್ ನಿಂಗಪ್ಪ ಪೌತಿ ಇವರ ವಾರಸುದಾರರು
7(ಎ). ಲೋಲಮ್ಮ ಕೋಂ ಸಣ್ಣ ನಿಂಗಪ್ಪ ವಯಸ್ಸು 65 ವರ್ಷ. ವಾಸ: ಕನಗೊಂಡನಹಳ್ಳಿ ಗ್ರಾಮ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ವಿರುದ್ಧ**

**ಎದುರುದಾರರು:** ತಹಶೀಲ್ದಾರರವರು ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ತಾಯಿಯಾದ ದುರುಗಮ್ಮ ಗಂಡ ನಿಂಗಪ್ಪ ಇವರು ದಿನಾಂಕ :18.06.1972 ರಂದು ದಾವಣಗೆರೆ ಜಿಲ್ಲೆ ದಾವಣಗೆರೆ ತಾಲ್ಲೂಕು, ಕಸಬಾ ಹೋಬಳಿ ಕನಗೊಂಡನಹಳ್ಳಿ ಗ್ರಾಮದ ಸ್ವ–ಗೃಹದಲ್ಲಿ ಮರಣ ಹೊಂದಿದ್ದು, ಸದರಿ ಸಲ್ಲಿಸಿರುವ ಅರ್ಜಿದಾರರ ಅರ್ಜಿಯನ್ನು ಮಾನ್ಯ ಮಾಡಿ ಅರ್ಜಿದಾರರಿಗೆ ತಮ್ಮ ತಾಯಿಯ ಮರಣ ಪ್ರಮಾಣಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ನ್ಯಾಯಾಲಯದ ಮುಂದೆ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರಿಗೆ ಸಂಬಂದಪಟ್ಟ ಯಾರದಾದರು ತಕರಾರು ಮತ್ತು ಆಕ್ಷೇಪಣೆಯನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ: 21.05.2025 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು ತಪ್ಪಿದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ

ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ:16–04–2025 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರ ಪರ ವಕೀಲರು
(ಬಿ.ಎಸ್.ನಾಗರಾಜ್)
ದಿನಾಂಕ:16.04.2025

ಸಹಿ/–
ಶಿರಸ್ತೇದಾರರು
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು(ಹಿ.ವಿ)
ಮತ್ತು ಸಿ.ಜೆ.ಎಮ್. ನ್ಯಾಯಾಲಯ ದಾವಣಗೆರೆ.


## ಜಗಜ್ಯೋತಿ ಬಸವೇಶ್ವರ ಜಯಂತಿ : ಪೂರ್ವಭಾವಿ ಸಭೆ ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿ



**ಗದಗ :** ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ಏಪ್ರಿಲ್ 30 ರಂದು ಬೆಳಿಗ್ಗೆ 11 ಗಂಟೆಗೆ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಅರ್ಥಪೂರ್ಣವಾಗಿ ಹಾಗೂ ಸುವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಗಜ್ಯೋತಿ ಬಸವೇಶ್ವರ ಜಯಂತಿ ಪ್ರಯುಕ್ತ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಜಗಜ್ಯೋತಿ ಬಸವೇಶ್ವರರ ಭಾವಚಿತ್ರಗಳನ್ನೊಳಗೊಂಡ ಮೆರವಣಿಗೆಯು ನಗರದ ವಿವಿಧ ವೃತ್ತಗಳಲ್ಲಿ ಸಂಚರಿಸಿ ಕಾರ್ಯಕ್ರಮದ ಸ್ಥಳಕ್ಕೆ ಬಂದು ತಲುಪಲಿದೆ. ಕಾರ್ಯಕ್ರಮದಲ್ಲಿ ಸಂಗೀತಗಾರರು ಬಸವೇಶ್ವರರ ವಚನಗಳನ್ನು ಪ್ರಸ್ತುತಪಡಿಸಲಿದ್ದಾರೆ. ಜಗಜ್ಯೋತಿ ಬಸವೇಶ್ವರರ ಕುರಿತು ಆಳವಾಗಿ ಅಧ್ಯಯನ ಮಾಡಿದಂತಹವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಲು ಕ್ರಮ ವಹಿಸಬೇಕು

.ಎಲ್ಲ ಅಧಿಕಾರಿಗಳು ಜಯಂತಿ ಕಾರ್ಯಕ್ರಮದಲಿ ಜಗಜ್ಯೋತಿ ಬಸವೇಶ್ವರರ ಕುರಿತು ಆಳವಾಗಿ ಅಧ್ಯಯನ ಮಾಡಿದಂತಹವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಲು ಕ್ರಮ ವಹಿಸಬೇಕು.ಎಲ್ಲ ಅಧಿಕಾರಿಗಳು ಜಯಂತಿ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಹಾಜರಿರಬೇಕು. ಒಟ್ಟಾರೆಯಾಗಿ ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ಅಚ್ಚುಕಟ್ಟಾಗಿ ನಡೆಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು. ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಅಲ್ಪೋಹಾರ, ಬ್ಯಾನರ್ ಅಳವಡಿಕೆ ಕುರಿತು ಚರ್ಚಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ ಸರ್ವರನ್ನು ಸ್ವಾಗತಿಸಿ ವಂದಿಸಿದರು.

ಸಭೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು , ಸಮುದಾಯದ ಮುಖ್ಯಸ್ಥರು, ಗಣ್ಯರು , ಹಿರಿಯರು ಹಾಜರಿದ್ದರು.

## ಕೃಷಿಕರ ಕೋಟಾದಲ್ಲಿ ಕೃಷಿ ಪದವಿಗೆ ಪ್ರವೇಶ ಪರೀಕ್ಷೆ ಅವಧಿ ವಿಸ್ತರಣೆ

**ಶಿವಮೊಗ್ಗ:** ಕೃಷಿಕರ ಮಕ್ಕಳಿಗಾಗಿ ಮೀಸಲಿರುವ ಕೃಷಿ ಪದವಿ ಸೀಟುಗಳಿಗಾಗಿ ಪ್ರವೇಶ ಪರೀಕ್ಷೆಯ ದಿನಾಂಕಗಳನ್ನು ಮುಂದೂಡಲಾಗಿದ್ದು, ಸಿ.ಇ.ಟಿಯ ನೇತೃತ್ವದಲ್ಲಿ ನಡೆಸಲಾಗುವ ಈ ಪ್ರಾಯೋಗಿಕ ಪರೀಕ್ಷೆ ಎಲ್ಲಾ ಕೃಷಿ ವಿಜ್ಞಾನಗಳಿಗೆ ಹಾಗೂ ಪಶು ವೈದ್ಯಕೀಯ ವಿಜ್ಞಾನಗಳಿಗೆ ಪ್ರವೇಶ ಪ್ರಕ್ರಿಯೆಗಾಗಿ ನಡೆಯಲಿದೆ. ಕೃಷಿಕರ ಕೋಟಾದಲ್ಲಿ ಈಗಗಾಲೇ ಸಿ.ಇ.ಟಿ. ಅರ್ಜಿಯಲ್ಲಿ ಆಯ್ಕೆ ನೀಡಿದವರಿಗೆ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಅಪಲೋಡ್ ಮಾಡುವ ದಿನಾಂಕವನ್ನು ಏ.21 ರ ಮಧ್ಯರಾತ್ರಿ 12:00 ಗಂಟೆಗೆ ಮುಂದೂಡಲಾಗಿದೆ.

ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಏ. 01 (ಬೆಳಗ್ಗೆ 10.00 ಗಂಟೆಯ ನಂತರ) ರಿಂದ ಏ.21 ರ ಮಧ್ಯರಾತ್ರಿ 12.00 ಗಂಟೆವರೆಗೆ. ಆನ್‌ಲೈನ್ ನಲ್ಲಿ ದಾಖಲಾತಿಗಳ ಪರಿಶೀಲನೆ ಮತ್ತು ಪರೀಕ್ಷೆಗೆ ಅರ್ಹ/ಅರ್ಹರಲ್ಲದ ಅಭ್ಯರ್ಥಿಗಳ ಪಟ್ಟಿಯ ಸಿದ್ಧತೆ – ಆಯಾ ಕೇಂದ್ರಗಳಲ್ಲಿ ನಿಯೋಜಿಸಿದ ಸಮಿತಿ ಸದಸ್ಯರಿಂದ (ಆಯಾ ವಿಶ್ವವಿದ್ಯಾನಿಲಯಗಳು ನಿಯೋಜಿಸಿದ) ಏ. 04 ರಿಂದ ಏ. 23 ರ ಸಂಜೆ 5.00 ಗಂಟೆವರೆಗೆ. ಕೃಷಿ ಕೋಟಾದಡಿ ಅರ್ಹ / ಅರ್ಹರಲ್ಲದ ಅಭ್ಯರ್ಥಿಗಳ ಪಟ್ಟಿಯನ್ನು ಎಲ್ಲಾ ಕೃಷಿ ಮತ್ತು ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳು ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ಜಾಲತಾಣದಲ್ಲಿ ಏ.25 ರ ಸಂಜೆ 4.00 ಗಂಟೆಯ ನಂತರ ಪ್ರಕಟಿಸಲಾಗುವುದು. ಅನರ್ಹ ಅಭ್ಯರ್ಥಿಗಳಿಗೆ ಮಾತ್ರ ದಾಖಲೆಗಳ ಬಗ್ಗೆ ಸ್ಪಷ್ಟೀಕರಣ ಮತ್ತು ಸಂಬಂಧಿತ ಕೇಂದ್ರಗಳಲ್ಲಿ ಖುದ್ದಾಗಿ ದಾಖಲೆಗಳನ್ನು ಸಲ್ಲಿಸಲು ಕಾಲಾವಕಾಶ ಏ. 26 ರಿಂದ ಏ. 27 ರ ಸಂಜೆ 4.00ಗಂಟೆಯವರೆಗೆ. ಪ್ರಾಯೋಗಿಕ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ರಾಜ್ಯದ ಎಲ್ಲಾ ಕೃಷಿ ಮತ್ತು ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳಲ್ಲಿ ಏ. 28 ರಂದು 1.00 ಗಂಟೆಯ ನಂತರ ಪ್ರಕಟಿಸಲಾಗುವುದು.

ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ಪತ್ರವನ್ನು (ಊಚಿಟಟ ಣುಥಿಇಜಣ) ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ ಮೇ.01 ರಿಂದ ಮೇ.05 ರಂದು ಸಂಜೆ 4.00 ರಿಂದ 12:00 ಗಂಟೆಯವರೆಗೆ. ಪ್ರಾಯೋಗಿಕ ಪರೀಕ್ಷೆಯನ್ನು ರಾಜ್ಯದ ಎಲ್ಲಾ ಕೃಷಿ ಮತ್ತು ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳ 17 ಕೇಂದ್ರಗಳಲ್ಲಿ ಏಕಕಾಲಕ್ಕೆ ಮೇ .09 ರಂದು ಬೆಳಗ್ಗೆ 9.00 ಗಂಟೆಯಿಂದ ಪ್ರಾರಂಭಿಸಲಾಗುವುದು. ತಡವಾಗಿ ಬರುವ ಅಭ್ಯರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದಿಲ್ಲ. ರಾಜ್ಯದ ಎಲ್ಲಾ ಕೃಷಿ ಮತ್ತು ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳಲ್ಲಿ ಮೇ 12 ರಂದು ಸಂಜೆ 6.00 ಗಂಟೆಯ ನಂತರ ಪ್ರಾಯೋಗಿಕ ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಲಾಗುವುದು. ಸಂಬಂಧಿತ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳಲ್ಲಿ ಫಲಿತಾಂಶಕ್ಕೆ ಸಂಬಂಧಿಸಿದಂತೆ ಅಭ್ಯರ್ಥಿಗಳಿಂದ ಆಕ್ಷೇಪ / ಮನವಿಗಳೇನಾದರೂ ಇದ್ದಲ್ಲಿ ಮೇ. 13 ರ ಸಂಜೆ 4.00 ಗಂಟೆಯ ಒಳಗೆ ಸಲ್ಲಿಸಬಹುದು. ಪ್ರಾಯೋಗಿಕ ಪರೀಕ್ಷೆಯ ಅಂತಿಮ ಫಲಿತಾಂಶವನ್ನು ರಾಜ್ಯದ ಎಲ್ಲಾ ಕೃಷಿ ಮತ್ತು ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳಲ್ಲಿ ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ಜಾಲತಾಣದಲ್ಲಿ ಮೇ. 15 ರಂದು ಮಧ್ಯಾಹ್ನ 12.00 ಗಂಟೆಯ ನಂತರ ಪ್ರಕಟಿಸಲಾಗುವುದು ಎಂದು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.ವಿದ್ಯಾರ್ಥಿಗಳು ಬದಲಾದ ದಿನಾಂಕಗಳನ್ನು ತಿಳಿಯಲು ಹಾಗೂ ಹೆಚ್ಚಿನ ಮಾಹಿತಿಗಾಗಿ www.uasbangalore.edu.in, www.uasd.edu.in/www.uasd.edu, www.uhsbagalkot.edu.in /uhsbagalkot.karnataka.gov.in, www.uahs.edu.in,www.uasraichur.edu.in/raichur.karnataka.gov.in, www.kvafsu.edu.in,http//kea.kar.nic.in, http//pgadmission.kar.nic.in/ugcet/UG_Home.aspx www.kvafsu.edu.in.

ಅಂತರ್ಜಾಲ ತಾಣಗಳಿಗೆ ಭೇಟಿ ನೀಡಬಹುದಾಗಿದೆ.

## ಜಿಲ್ಲಾ ಸಂಘಟಕರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಭಾರತ್ ಸೌಟ್ಸ್ ಮತ್ತು ಗೈಡ್ಸ್, ಶಿವಮೊಗ್ಗ ಜಿಲ್ಲಾ ಸಂಸ್ಥೆಯ ಜಿಲ್ಲಾ ಸಂಘಟಕರ ಹುದ್ದೆಗೆ ಅಹ್ವಾನಿಸಲಾಗಿದೆ.

ಸಂಘಟನೆಯಲ್ಲಿ ಆಸಕ್ತಿಯುಳ್ಳವರಿಗೆ ಆದ್ಯತೆ. ಯಾವುದಾದರೂ ಪದವಿ, ಗಣಕಯಂತ್ರದ ಜ್ಞಾನ, ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಅತ್ಯವಶ್ಯ.ಆಸಕ್ತರು ಅರ್ಜಿಯನ್ನು ಏ.25ರ ರೊಳಗಾಗಿ ಜಿಲ್ಲಾ ಸಂಸ್ಥೆ, ಜಿಲ್ಲಾ ಸೌಟ್ ಭವನ, ಬಿ.ಹೆಚ್.ರಸ್ತೆ, ಶಿವಮೊಗ್ಗ ಇಲ್ಲಿಗೆ ಅರ್ಜಿ ಸಲ್ಲಿಸುವುದು.ಹೆಚ್ಚಿನ ಮಾಹಿತಿಗಾಗಿ 9663883213, 9945626593 ಸಂಪರ್ಕಿಸಬಹುದು.

## ಇಂದು ವಿದ್ಯುತ್ ವ್ಯತ್ಯಯ

**ಶಿವಮೊಗ್ಗ:** ಆಲ್ಕೊಳ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಏ.18 ರಂದು ಬೆಳಗ್ಗೆ 09–00 ರಿಂದ ಸಂಜೆ 05.00ರವರೆಗೆ ಇಂದಿರಾಗಾಂಧಿ ಬಡಾವಣೆ, ಪ್ರಿಯದರ್ಶಿನಿ ಲೇಔಟ್, ಜಯದೇವ ಬಡಾವಣೆ, ಕಾಶಿಪುರ, ಲಕ್ಕಪ್ಪ ಲೇಔಟ್, ಕಲ್ಲಳ್ಳಿ ಎ ಯಿಂದ ಎಫ್ ಬ್ಲಾಕ್‌ಗಳು, ತಿಮ್ಮಕ್ಕ ಲೇಔಟ್, ಹುಡ್ಕೋ ಕಾಲೋನಿ, ಲಕ್ಷ್ಮೀಪುರ ಬಡಾವಣೆ, ಕುವೆಂಪು ಬಡಾವಣೆ, ಸಿದ್ಧರಾಮ ಬಡಾವಣೆ, ರೇಣುಕಾಂಬ ಬಡಾವಣೆ, ಹನುಮಂತಪ್ಪ ಲೇಔಟ್, ತಮಿಳ್ ಕ್ಯಾಂಪ್, ಕೆಂಚಪ್ಪ ಲೇಔಟ್, ಎನ್.ಎಂ.ಸಿ. ಕಾಂಪೌಂಡ್, ಸೂಡಾ ಕಚೇರಿ, ದಯಾನಂದ ಪ್ರಿಂಟರ್ಸ್, ಸವಿ ಬೇಕರಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ಪಂಚ ಗ್ಯಾರಂಟಿಗಳು ಜನಸಾಮಾನ್ಯರಿಗೆ ತಲುಪಲಿ

**ನ್ಯಾಮತಿ:** ಪಟ್ಟಣದ ತಾಲ್ಲೂಕು ಪಂಚಾಯತ್ ಕಾರ್ಯಾಲಯದಲ್ಲಿ ಬುಧವಾರ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯನ್ನು ಸರ್ಕಾರದ ಆದೇಶದಂತೆ ರಚಿಸಲಾಗಿದೆ.ಸರ್ಕಾರ ಮಾಡಿದ ಪಂಚ ಗ್ಯಾರಂಟಿಗಳು ಜನ ಸಮಾನ್ಯರಿಗೆ ತಲುಪುತ್ತದೆಯೆ ಇಲ್ಲವೊ ಎಂಬುದನ್ನು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ನೀಡಿಕೊಳ್ಳಬೇಕು.ಗ್ಯಾ.ಯೋ.ಅನುಷ್ಠಾನ ಸಮಿತಿ ಸದಸ್ಯ ಹೆಚ್.ಮಲ್ಲಿಕಾರ್ಜುನ ಮಾತನಾಡಿ ನ್ಯಾಮತಿ ತಾಲ್ಲೂಕಿನ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ನ್ಯಾಮತಿ ಹಾಗೂ ಇತರೆ ಬಂದು ಹೋಗಲು ಬಸ್ಸುಗಳು ಇಲ್ಲದೆ ಬಹಳ ತೊಂದರೆಯಾಗಿದೆ ಆದ ಪ್ರಯುಕ್ತ ಹೊನ್ನಾಳಿ ಸರ್ಕಾರಿ ಬಸ್ ಡಿಪೋದಿಂದ ಹೆಚ್ಚುವರಿ ಬಸ್ಸುಗಳನ್ನು ಬಿಡಬೇಕು ಎಂದು ಡಿ.ಪೋ ಮ್ಯಾನೇಜರ್‌ಗೆ ಮನವಿ ಮಾಡಿದರು.ಗ್ಯಾ.ಯೋ. ಅನುಷ್ಠಾನ ಸಮಿತಿ ಸದಸ್ಯರಾದ ಪ್ರಕಾಶ್ ಮತ್ತು ವಸಂತನಾಯ್ಕ ಇವರು ಮಾತನಾಡಿ ಅನ್ನಭಾಗ್ಯದ ಪಡಿತರ ಚೀಟಿ ಅಕ್ಕಿಯನ್ನು ಉಚಿತವಾಗಿ ನೀಡುತ್ತಿರುವ ಅಕ್ಕಿಯನ್ನು ಯಾವುದೇ ಕಾರಣದಿಂದ ಕಡಿಮೆ ಕೊಡಬಾರದೆಂದು ಆಹಾರ ಇಲಾಖಾಧಿಕಾರಿಗಳಿಗೆ ತಿಳಿಸಿದರು.ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಶ್ರೀ ಶಿವರಾಮ್‌ನಾಯ್ಕ ಅಧ್ಯಕ್ಷತೆ ವಹಿಸಿದ್ದರು. ನ್ಯಾಮತಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಹೆಚ್.ವಿ.ರಾಘವೇಂದ್ರ, ಕೆ.ಎಸ್.ಆರ್.ಟಿ.ಸಿ ಹೊನ್ನಾಳಿ ಡಿಪೋ ಮ್ಯಾನೇಜರ್ ರಾಮಚಂದ್ರಪ್ಪ, ಬೆಸ್ಕಾಂ ಇಲಾಖಾ ಧಿಕಾರಿ, ಸಿಡಿಪಿ ಅಧಿಕಾರಿ ಜ್ಯೋತಿ, ನೂತನ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಫಲಿತಾಂಶ

**ನ್ಯಾಮತಿ:** ಪಟ್ಟಣದ ಸಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ 2024–25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು 83 ವಿದ್ಯಾರ್ಥಿನಿಯರು ಪರೀ–ಕ್ಷೆಗೆ ಕುಳಿತು 51 ವಿದ್ಯಾರ್ಥಿನಿಯರು ಉತ್ತೀರ್ಣವಾಗಿ ಕಾಲೇಜಿಗೆ ಶೇ 62 ಫಲಿತಾಂಶ ಬಂದಿದೆ ಎಂದು ಕಾಲೇಜಿನ ಪ್ರಾಂಶುಪಾಲರು ತಿಳಿಸಿದ್ದಾರೆ.2024–25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷಗೆ ಕಲಾ ವಿಭಾಗ, ವಾಣಿಜ್ಯ ವಿಭಾಗ, ವಜ್ಞಾನ ವಿಭಾಗದಿಂದ 83 ವಿದ್ಯಾರ್ಥಿನಿಯರು ಹಾಜರಾಗಿ 51 ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾ–ರೆ. ಕಲಾ ವಿಭಾಗದಲ್ಲಿ ಶೈಲಾ ಬಿ.ಆರ್.476, ವಾಣಿಜ್ಯ ವಿಭಾಗದಲ್ಲಿ ಸಂಜನ ಬಿ 488, ವಿಜ್ಞಾನ ವಿಭಾಗದಲ್ಲಿ ಪ್ರಿಯಾಂಕ ಎಂ 507 ಅಂಕ ಗಳಿಸಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿಯರಾಗಿದ್ದಾರೆ.

# ಕಡೂರಿನಲ್ಲಿ ಅಕ್ರಮ ಸ್ಫೋಟಕ ವಶ– ಆರೋಪಿ ಬಂಧನ

**ಚಿಕ್ಕಮಗಳೂರು:** ಅಕ್ರಮವಾಗಿ ಸ್ಫೋಟಕಗಳನ್ನು ಮನೆಯಲ್ಲಿ ಸಂಗ್ರಹಿಸಿಟ್ಟಿದ್ದ ಖಚಿತ ಮಾಹಿತಿಯ ಮೇರೆಗೆ ದಾಳಿ ನಡೆಸಿದ ಚಿಕ್ಕಮಗಳೂರು ಆಂತರಿಕ ಭದ್ರತಾ ವಿಭಾಗದ ಪೊಲೀಸರು ಹಾಗೂ ಕಡೂರು ಠಾಣೆಯ ಸಿಬ್ಬಂದಿಗಳು ಜಂಟಿ ಕಾರ್ಯಾಚರಣೆ ನಡೆಸಿ ಅಕ್ರಮವಾಗಿ ಸಂಗ್ರಹಿಸಿದ್ದ ಸ್ಫೋಟಕಗಳನ್ನು ವಶಕ್ಕೆ ಪಡೆದಿದ್ದಾರೆ. ಕಡೂರು ಪಟ್ಟಣದ ವೆಂಕಟೇಶ್ವರ ಬಡಾವಣೆಯ ವಾಸಿ ನಾಗರಾಜ್ ಎಂಬುವರು ತಮ್ಮ ಮನೆಯ ಮಂಚದ ಕೆಳಗೆ ಮೂರು ಬಾಕ್ಸ್‌ಗಳಲ್ಲಿ ಬರೋಬ್ಬರಿ 388 ಜಿಲೆಟಿನ್ ಪೇಸ್ಟ್ ಟ್ಯೂಬ್‌ಗಳು ಹಾಗೂ 250 ಅಡಿ ಬತ್ತಿಯನ್ನು ಶೇಖರಿಸಿದ್ದರು. ಅಕ್ರಮವಾಗಿ ಸ್ಫೋಟಕಗಳನ್ನು ಸಂಗ್ರಹಿಸಿದ್ದ ಖಚಿತ ಮಾಹಿತಿ ಮೇರೆಗೆ ಆಂತರಿಕ ಭದ್ರತಾ ಪೊಲೀಸರು ದಾಳಿ ನಡೆಸಿ ಸ್ಫೋಟಕಗಳ ಸಮೇತ ಆರೋಪಿ ನಾಗರಾಜನನ್ನು ಬಂಧಿಸಿದ್ದಾರೆ. ಜಿಲೆಟಿನ್ ಪೇಸ್ಟ್ ಟ್ಯೂಬ್ ಸ್ಫೋಟಕಗಳನ್ನು ಕಲ್ಲುಕ್ವಾರಿಗಳನ್ನು ಸ್ಫೋಟಿಸಲು ಬಳಸಲಾಗುತ್ತದೆ. ಇದು ಅತ್ಯಂತ ಅಪಾಯಕಾರಿ ಸ್ಫೋಟಕವಾಗಿದ್ದು, ಇದನ್ನು ಸಂಗ್ರಹಿಸಿಡಲು ಅಧಿಕೃತವಾಗಿ ಪರವಾನಿಗೆಯನ್ನು ಪಡೆದು, ಹಲವು ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಬೇಕಾಗುತ್ತದೆ. ಆದರೆ ಇಲ್ಲಿ ಯಾವುದೇ ಪರವಾನಗಿ ಇಲ್ಲದೆ ನಿಯಮಗಳನ್ನು ಗಾಳಿಗೆ ತೂರಿ ಮಂಚದಡಿ ಸ್ಫೋಟಕ ಸಂಗ್ರಹಿಸಿಟ್ಟಿರುವುದು ಆತಂಕಕ್ಕೆ ಕಾರಣವಾಗಿದೆ.

# ಪಕ್ಷದ ಹಲವಾರು ನಾಯಕರು ಕೆಪಿಸಿಸಿ ಹುದ್ದೆ ರೇಸ್ ನಲ್ಲಿದ್ದಾರೆ: ಸಚಿವ ಸತೀಶ್ ಜಾರಕಿಹೊಳಿ

**ಬೆಳಗಾವಿ:** ಕೆಪಿಸಿಸಿ ಉನ್ನತ ಹುದ್ದೆಗೆ ನಾನೂ ಸೇರಿದಂತೆ ಇನ್ನೂ ಹಲವಾರು ನಾಯಕರು ಸ್ಪರ್ಧೆಯಲ್ಲಿದ್ದಾರೆಂದು ಸಚಿವ ಸತೀಶ್ ಜಾರಕಿಹೊಳಿಯವರು ಹೇಳಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ನಾನೊಬ್ಬನೇ ಅಲ್ಲ ಇನ್ನೂ ಹಲವಾರು ನಾಯಕರು ಸ್ಪರ್ಧೆಯಲ್ಲಿದ್ದಾರೆ. ಆದರೆ, ಈ ಬಗ್ಗೆ ಪಕ್ಷದ ಹೈಕಮಾಂಡ್ ಸೂಕ್ತ ಸಮಯಕ್ಕೆ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಹೇಳಿದರು. ಬೆಲೆ ಏರಿಕೆ ಕುರಿತು ಬಿಜೆಪಿ ನಡೆಸುತ್ತಿರುವ ಪ್ರತಿಭಟನೆ ಕುರಿತು ಪ್ರತಿಕ್ರಿಯಿಸಿದ ಅವರು, ಬಿಜೆಪಿ ಅಧಿಕಾರದಲ್ಲಿದ್ದಾಗಲೂ ವಿವಿಧ ವಸ್ತುಗಳ ಬೆಲೆಗಳು ಏರಿದ್ದವು. ಆದರೆ, ಇದೀಗ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದರು.

# ಶಾಲೆ ಕಾಂಪೌಂಡ್ ನಿರ್ಮಾಣಕ್ಕಾಗಿ ಸಚಿವರ ಶ್ರಮದಾನ





**ಶಿವಮೊಗ್ಗ:** ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರು ಶಾಲೆಯ ಕಾಂಪೌಂಡ್ ನಿರ್ಮಾಣಕ್ಕೆ ಸ್ವತಃ ಶ್ರಮದಾನಮಾಡಿದರು. ಬಿರು ಬಿಸಿಲಿನಲ್ಲಿ ತಲೆಗೆ ಟವೆಲ್ ಸುತ್ತಿಕೊಂಡು, ಪಿಕಾಸಿ, ಗುದ್ದಲಿ ಹಿಡಿದು ಕಾಂಪೌಂಡ್ ನಿರ್ಮಾಣಕ್ಕೆ ಗುಂಡಿ ಅಗೆದರು. ಗುದ್ದಲಿಯಿಂದ ಬುಟ್ಟಿಗೆ ಮಣ್ಣು ತುಂಬಿಹೊತ್ತು ಬೇರೆಡೆ ಸುರಿದರು. ಸೊರಬ ತಾಲ್ಲೂಕಿನ ಹುರುಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಅಂಗಳ ಈ ಶ್ರಮದಾನಕ್ಕೆ ಸಾಕ್ಷಿಯಾಯಿತು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿಯೋಜನೆ (ಮನರೇಗಾ) ಅಡಿ ಶಾಲೆಯ ಕಾಂಪೌಂಡ್ ನಿರ್ಮಾಣಕ್ಕೆ ಸಚಿವರು ಕೈಜೋಡಿಸಿದರು. ಬೆಳಿಗ್ಗೆ 10 ಗಂಟೆಗೆ ಆರಂಭವಾದ ಶ್ರಮದಾನ ಕಾರ್ಯಕ್ರಮ ಸತತ ಒಂದು ಗಂಟೆ ನಡೆಯಿತು.ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಚಾಲನೆ ನೀಡಿ ಶ್ರಮದಾನ ಮಾಡಿದರು. 'ನರೇಗಾಯೋಜನೆಯನ್ನು ಸದ್ಬಳಕೆಮಾಡಿಕೊಂಡರೆ ಗ್ರಾಮಗಳ ಚಿತ್ರಣವನ್ನೇ ಬದಲಿಸಬಹುದು. ಈ ರೀತಿಯ ಕಾರ್ಯ ಕ್ರಮಗಳು ಇತರರಿಗೆಮಾದರಿಯಾಗಬೇಕು, ಪ್ರೇರಣೆಯಾಗಬೇಕು' ಎಂದು ಮಧು

# ಶ್ರೀ ಮಹಾವೀರ ತೀರ್ಥಂಕರರು ವೈಜ್ಞಾನಿಕ ದಾರ್ಶನಿಕ



**ರಿಪ್ಪನ್‌ಪೇಟೆ(ಹೊಂಬುಜ):** "ಜೈನ ಧರ್ಮಿಯರಿಗೆ ಇಪ್ಪತ್ತನಾಲ್ಕು ತೀರ್ಥಂಕರರ ಉಪದೇಶಗಳು ಜೈನಾಚಾರದ ಬುನಾದಿಯಾಗಿದೆ. ಇಪ್ಪತ್ತನಾಲ್ಕನೇಯ ತೀರ್ಥಂಕರಾದ ಶ್ರೀ ಮಹಾವೀರ ತೀರ್ಥಂಕರರು ಜ್ಞಾನವೃದ್ಧಿಗಾಗಿ ಖಗೋಳ, ವೈಧ್ಯಕೀಯ, ವಿಜ್ಞಾನ, ಗಣಿತ, ಜ್ಯೋತಿಷ್ಯ, ವಾಸ್ತು ಮುಂತಾದ ವಿಷಯಗಳಲ್ಲಿ ಪಾರಂಗತರಾಗಿ ಮಾನವ ಕ್ಷೇಮ ಕಲ್ಯಾಣ ಮಾರ್ಗವನ್ನು ವೈಜ್ಞಾನಿಕ ದೃಷ್ಠಿಕೋನದಿಂದಲೂ ಸರಳವಾಗಿ ಪ್ರಚುರಪಡಿಸಿದವರು ಎಂದು ಚತುರ್ಥಪಟ್ಟಾಚಾರ್ಯ ಶ್ರೀ 108 ಸುವಿಧಿಸಾಗರ ಮಹಾರಾಜರು ಹೇಳಿದರು.

ರಿಪ್ಪನ್‌ಪೇಟೆ ಸಮೀಪದ ಹೊಂಬುಜ ಅತಿಶಯ ಮಹಾಕ್ಷೇತ್ರದಲ್ಲಿ ಇಂದು ನಡೆದ 2624ನೇ ಶ್ರೀ ಮಹಾವೀರ ತೀರ್ಥಂಕರರ ಜಯಂತ್ಯೋತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ ಆಹಾರ–ವಿಹಾರ ಕ್ರಮಗಳನ್ನು, ಪರಿಸರ ಸಂರಕ್ಷಣೆ, ಪ್ರಾಣಿದಯಾ ವಿಚಾರವನ್ನು ಮನಮುಟ್ಟುವಂತೆ ಬೋಧಿಸಿರುವರು. ಹಾಗಾಗಿ ಅವರ ಉಪದೇಶಗಳು ಜೈನ ಪ್ರಾಚೀನ ಗ್ರಂಥಗಳ ಅವಲೋಕನ ಮತ್ತು ನಿತ್ಯ ನಿರಂತರ ಆಚರಿಸಲ್ಪಡುವ ಧರ್ಮಮಾರ್ಗವನ್ನು ನಂದಾದೀಪದಂತೆ ಬೆಳಗಿಸಿದೆ" ಎಂದು ಮಂಗಳ ಪ್ರವಚನದಲ್ಲಿ ತಿಳಿಸಿದರು.

ಅತಿಶಯ ಶ್ರೀಕ್ಷೇತ್ರ ಹೊಂಬುಜದ ಜಗದ್ಗುರು ಡಾ. ದೇವೇಂದ್ರಕೀರ್ತಿ ಭಟ್ಟಾರಕ ಮಹಾಸ್ವಾಮೀಜಿಗಳವರು ದಿವ್ಯ ಸಾನಿಧ್ಯ, ನೇತೃತ್ವ ಮತ್ತು ಮಾರ್ಗದರ್ಶನದಲ್ಲಿ 2624ನೇ ಶ್ರೀ ಮಹಾವೀರ ತೀರ್ಥಂಕರರ ಜನ್ಮಕಲ್ಯಾಣ ಸುದಿನವನ್ನು ಆಗಮೋಕ್ತ ವಿಧಿ–ವಿಧಾನದಲ್ಲಿ ನೆರವೇರಿಸಿದ ಶ್ರೀಗಳವರು "ಭಗವಾನ ಮಹಾವೀರ ಸ್ವಾಮಿ ಸಾಮಾಜಿಕ, ಧಾರ್ಮಿಕ ಮತ್ತು ಶೈಕ್ಷಣಿಕ ಪ್ರಗತಿಗಾಗಿ ಮಾನವ ಸಮಾಜಕ್ಕೆ ಅತ್ಯುತ್ತಮ ಧರ್ಮಸಂದೇಶ ಸಾರಿದ್ದಾರೆ ಎನ್ನುತ್ತಾ, ಜೈನ ಧರ್ಮದ ಸರ್ವಧರ್ಮ ಸಮನ್ವಯತೆ, ಪ್ರಾಣಿದಯೆ, ದಿನಚರ್ಯೆಯಲ್ಲಿ ಸಾಧನಾ ಮಾರ್ಗಗಳನ್ನು ಶ್ರೀ ಮಹಾವೀರರು ನಿರ್ದೇಶಿಸಿರುವುದನ್ನು ನಾವೆಲ್ಲರು ಪರಿಪಾಲಿಸೋಣ" ಎಂದರು.

ಮುನಿಶ್ರೀ ಗುಲಾಭಭೂಷಣರು, ಆರ್ಯಿಕೆಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಭಗವಾನ ಮಹಾವೀರ ಜಯಂತಿ ಸಂದರ್ಭದಲ್ಲಿ ಶ್ರೀ ಮಹಾವೀರ ಸ್ವಾಮಿ ಜಿನಬಿಂಬದ ರಜತ ಪಲ್ಲಕ್ಕಿಯಲ್ಲಿ ಶೋಭಾಯಾತ್ರೆ, ಅರ್ಘ್ಯ ವಿಧಾರ್ಚನೆ, ನಾಮಕರಣ ವಿಧಿ–ವಿಧಾನಗಳು ಜರುಗಿದರು. ಜಯ ಮಹಾವೀರ, ಅಹಿಂಸಾ ಪರಮೋಧರ್ಮ, ಮಹಾವೀರ ಕೀ ಜೈ ಜೈಕಾರಗಳು, ಜಿನಭಜನೆ ಸುಶ್ರಾವ್ಯವಾಗಿತ್ತು.

ಹೊಂಬುಜ ಶ್ರೀ ಪದ್ಮಾವತಿ ಮಹಿಳಾ ಮಂಡಲ, ಊರ ಪರವೂರ ಭಕ್ತರು ಜಿನಭಜನೆ, ಆರಾಧನೆಯಲ್ಲಿ ಪಾಲ್ಗೊಂಡರು. ಶ್ರೀ ಪದ್ಮರಾಜ ಹಾಗೂ ಸಹ ಪುರೋಹಿತರು ಪೂಜಾ ವಿಧಿಯನ್ನು ಸ್ತೋತ್ರ ಪಠಣದ ಮೂಲಕ ನೆರವೇರಿಸಿದರು.

# ಅಷ್ಟಬಂಧ ಕಲಶೋತವ ನೂತನ ರಥ ರಜತ ಕವಚ ಸಮರ್ಪಣೆ ಧಾರ್ಮಿಕ ಸಮಾರಂಭ

**ರಿಪ್ಪನ್‌ಪೇಟೆ:** ಸಮೀಪದ ಅಮೃತ ಶ್ರೀ ಗುರು ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ಅಷ್ಟಬಂಧ ಕಲಶೋತ್ಸವ ಕಾರ್ಯಕ್ರಮವೂ ಭೀಮನಕಟ್ಟೆ ಭೀಮಸೇತು ಮುನಿವೃಂದ ಶ್ರೀ ರಘವರೇಂದ್ರ ತೀರ್ಥ ಶ್ರೀಪಾದಂಗಳವರ ದಿವ್ಯಸಾನಿಧ್ಯದಲ್ಲಿ ಜರುಗಿತು.ಇಂದು ಬೆಳಗ್ಗೆ 9.00 ಗಂಟೆಯಿಂದ 108 ಮೋದಕ ಗಣಹೋಮ ರಾಮತಾರಕ ಹೋಮ ಅಂಜನೇಯ ಮೂಲಮಂತ್ರ ಹೋಮ.ಪವಮಾನ ಆಭಿಷೇಕ.ಶ್ರೀಸತ್ಯನಾರಾಯಣ ವ್ರತ ಮಹಾಪೂಜೆ ಮಂಗಳಾರತಿ. ತೀರ್ಥ ಪ್ರಸಾದ ವಿತರಣೆ ಸಾಮೂಹಿಕ ಅನ್ನ ಸಂತರ್ಪಣೆ ನೆರವೇರಿತು.6 ಗಂಟೆಯಿಂದ ದೇವತಾ ಪ್ರಾರ್ಥನೆ.ತೋರಣ ಮುಹೂರ್ತ.ಪುಣ್ಯಾಹ.ಪಂಚಗವ್ಯ.ಅರಣಿ ಮಥನ.ಸಪ್ತ ಶುದ್ದಿ ಪ್ರಸಾದ ಶುದ್ದಿ ರಾಕ್ಷೋಘ್ನ ಹೋಮ.ವಾಸ್ತುಹೋಮ.ವಾಸ್ತು ಪೂಜೆ.ಪ್ರಕಾರ ಬಲಿ.ಜರುಗಲಿದೆ ಎಂದು ಗುರುರಾಯರ ಮಠದ ಪ್ರಕಟಣೆ ತಿಳಿಸಿದೆ. ಏಪ್ರಿಲ್ 11 ರಂದು ಬೆಳಗ್ಗೆ 9 ಗಂಟೆಯಿಂದ ಪುಣ್ಯಾಹ.ಪಂಚಗವ್ಯ.ದೇವನಾಂದಿ.ಬಿಂಬ ಶುದ್ದಿ ಪ್ರಕ್ರಿಯೆ.ಅಷ್ಟಬಂಧ ಲೇಪನ.ಪ್ರಾಯಶ್ಚಿತ ಹೋಮ.ಶಾಂತಿ ಹೋಮ.ವಿರಜಾಮಂತ್ರ ಹೋಮ.ತತ್ವ ಹೋಮ. ತತ್ವಕಲಶಾಭಿಷೇಕ ಮಹಾಪೂಜೆ. ಸಂಜೆ 6 ಗಂಟೆ ರಥ ಶುದ್ದಿ ವಾಸ್ತು ಪೂಜೆ.ಚಕ್ರಾಬ್ದ ಮಂಡಲಪೂಜೆ.ಕಲಶ ಪ್ರತಿಷ್ಟೆ.ಏಪ್ರಿಲ್ 12 ರಂದು ಶನಿವಾರ ಬೆಳಗ್ಗೆ 9 ಗಂಟೆಯಿಂದ ಅಷ್ಟೋತ್ತರ ಕಲಶಪೂರಣ ಪ್ರಧಾನ ಹೋಮ.ಪವಮಾನ ಹೋಮ. ಶ್ರೀಗಳ ದಿವ್ಯಸಾನಿಧ್ಯದಲ್ಲಿ ಅಷ್ಟೋತ್ತರ ಕಲಶ ಸಹಿತ ಶ್ರೀ ದೇವರಿಗೆ ಬ್ರಹ್ಮಕುಂಭಾಭಿಷೇಕ ಶ್ರೀರಾಮದೇವರಿಗೆ ರಜತ ಕವಚ ಸಮರ್ಪಣೆ ಜರುಗಲಿದೆ.ಏಪ್ರಿಲ್ 12 ರಂದು ಶನಿವಾರ ಮಧ್ಯಾಹ್ನ 3 ಗಂಟೆಗೆ ಭೀಮನಕಟ್ಟೆ ಭೀಮಸೇತು ಮುನಿವೃಂದ ಶ್ರೀ ರಘವರೇಂದ್ರ ತೀರ್ಥ ಶ್ರೀಪಾದಂಗಳವರ ಆಧ್ಯಕ್ಷತೆಯಲ್ಲಿ ಧಾರ್ಮಿಕ ಸಮಾರಂಭ ಜರುಗಲಿದೆ. ಹೊಂಬುಜ ಜೈನ ಮಠದ ಜಗದ್ಗುರು ಡಾ.ಶ್ರೀಮದ್ ದೇವೇಂದ್ರಕೀರ್ತಿ ಭಟ್ಟಾರಕ ಪಟ್ಟಾಚಾರ್ಯವರ್ಯ ಮಹಾಸ್ವಾಮಿಜಿ ಮತ್ತು ನಿಟ್ಟೂರು ನಾರಾಯಣಗುರು ಮಹಾಸಂಸ್ಥಾನ ಮಠದ ಶ್ರೀ ರೇಣುಕಾನಂದ ಮಹಾಸ್ವಾಮಿಜಿ ಉಪಸ್ಥಿತಿಯಲ್ಲಿ ಧಾರ್ಮಿಕ ಸಮಾರಂಭ ಜರುಗಲಿದೆ ಎಂದು ಮಠದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಮನಸೂರೆಗೊಂಡ "ಒಡಲಾಳ" ನಾಟಕ ಪ್ರದರ್ಶನ

**ಭದ್ರಾವತಿ:** ರಾಜ್ಯ ಸರ್ಕಾರಿ ನೌಕರರ ಸಂಘದ ಆಶ್ರಿತದ ನಗರದ ಹೊಸ ಸೇತುವೆ ರಸ್ತೆಯಲ್ಲಿರುವ ವಿಶ್ವೇಶ್ವರಾಯ ವಿದ್ಯಾ ಸಂಸ್ಥೆಯಲ್ಲಿ ಡಾ. ಬಿ.ಆರ್ ಅಂಬೇಡ್ಕರ್ ಜಾನಪದ ಕಲಾ ಸಂಘದ ಆಶ್ರಯದಲ್ಲಿ ಬಿಇಡಿ ವಿಭಾಗದ ಪ್ರಶಿಕ್ಷಣಾರ್ಥಿಗಳಿಗಾಗಿ 'ಒಡಲಾಳ' ನಾಟಕ ಪ್ರದರ್ಶನ ಮತ್ತು ರಂಗ ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಡಾ ಎಸ್.ಪಿ ರಾಕೇಶ್ ತಮಟೆ ಬಾರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಜಾನಪದ ಕಲಾ ಸಂಘದ ಪ್ರಧಾನ ಕಾರ್ಯದರ್ಶಿ ತಮಟೆ ಜಗದೀಶ್, ಹಿರಿಯ ಕಲಾವಿದರಾದ ಕೆ.ಎಸ್ ರವಿಕುಮಾರ್, ವೈ.ಕೆ ಹನುಮಂತಯ್ಯ, ಬಿ. ಪ್ರವೀಣ್‌ಕುಮಾರ್, ದಿವಾಕರ್, ರತ್ನ, ಶಿಕ್ಷಕರ ವರ್ಗದವರು ಹಾಗು ನೂರಕ್ಕೂ ಹೆಚ್ಚು ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ನಾಟಕದ ಅಭಿನಯ ಮಾಡಿದ



ಇಂದು ಡಿ. ನೀನಾಸಂ ಅವರನ್ನು ಗೌರವಿಸಲಾಯಿತು. ರಂಗ ಭೂಮಿಯ ಕಲೆ ಗೀಳು, ಕಲೆಯ ಉಳಿವು, ಯುವ ಸಮೂಹದ ಪಾತ್ರ, ಜಾನಪದ ಅಳಿವು–ಉಳಿವು ಹಾಗು ನಾಟಕದಲ್ಲಿನ ಕೆಲ ವಿಚಾರಗಳ ಕುರಿತು ಶಿಕ್ಷಣಾರ್ಥಿಗಳು ಕೇಳಿದ ಪ್ರಶ್ನೆಗಳಿಗೆ ಒಡಲಾಳ ನಾಟಕದ ಪ್ರಮುಖ ಸಾಕವ್ವನ ಪಾತ್ರದಾರಿ ರಂಗ ಕಲಾವಿದೆ ಇಂದು ಡಿ. ನೀನಾಸಂ ಮತ್ತು ತಮಟೆ ಜಗದೀಶ್ ಉತ್ತರಿಸಿದರು.

ನಾಟಕದ ಸಾರಾಂಶ:

ದಲಿತ ಕವಿ ದೇವನೂರು ಮಹಾದೇವರವರ ಕಾದಂಬರಿ "ಒಡಲಾಳ" ಆಯ್ದ ಭಾಗದ ನಾಟಕದಲ್ಲಿ, ಊರಿಗೆ ಹೊಸದಾಗಿ ಆಗಮಿಸಿದ ಪೊಲೀಸ್ ಅಧಿಕಾರಿಗೆ ಊರಿನ ಗೌಡನೋರ್ವ ಭಕ್ಷ್ಯ ಭೋಜನ ಮಾಡಿಸಲು ಕೋಳಿವೊಂದನ್ನು ಕದ್ದು ಅಡಿಗೆ ಮಾಡಿಸಿ ತಿನ್ನಿಸುತ್ತಾನೆ. ಕೆಳ ವರ್ಗದ ಬಡವಿ ಸಾಕವ್ವನಿಗೆ ಸೇರಿದ ಆ ಕೋಳಿ ತಿಂದು ತೇಗಿದ ಉಳ್ಳವರ ಮತ್ತು ಅದರಿಂದ ಕೋಳಿಯ ಒಡತಿ ಸಾಕವ್ವನಿಗಾಗುವ ಅನ್ಯಾಯ, ದಮನಿತರ ಶೋಷಿತ ವರ್ಗದ ಬೆಳಕು ಚೆಲ್ಲುವ ಹಾಗೂ ಪೊಲೀಸರ ದರ್ಪ, ಉಳ್ಳವರ ಅಟ್ಟಹಾಸ ಚಿತ್ರಣದ ಆಯ್ದ ಭಾಗದ ತಿರುಳನ್ನು ಬಲು ತೀಕ್ಷವಾಗಿ ತೆರೆದಿಡುವಲ್ಲಿ ಸಾಕವ್ವನ ಪಾತ್ರ ನೋಡುಗರಿಗೆ ಮನಸೂರೆಗೊಂಡಿತು.

## ಪ್ರದೀಪ್, ಪಿಸಿ ಮೋಹನ್ ವಾಗ್ವಾದ

**ಬೆಂಗಳೂರು:** ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಿನ್ನೆ ನಡೆದ ಕೈವಾರ ತಾತಯ್ಯ ಯೋಗಿನಾರಾಯಣ ಯತೀಂದ್ರರ 299ನೇ ಜಯಂತ್ಯುತ್ಸವ ಕಾರ್ಯಕ್ರಮದ ವೇಳೆ ಶಾಸಕ ಪ್ರದೀಪ್ ಈಶ್ವರ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದಿದೆ. ಈ ವೇಳೆ ಆಕ್ರೋಶಭರಿತರಾದ ಪ್ರದೀಪ್ ಈಶ್ವರ್ ಬಿಜೆಪಿ ಕಾರ್ಯಕ್ರರ್ತರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದರು. ಸಮುದಾಯ ಗುಣಗಾನ ಮಾಡೋಕೆ ಇದೇನು ಬಿಜೆಪಿ ಕಾರ್ಯಕ್ರಮ ಅಲ್ಲ? ಈ ರಾಜ್ಯದಲ್ಲಿ ಇರೋದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ. ಎಲ್ಲರೂ ಬಾಯಿ ಮುಚ್ಕೊಂಡು ಕೂತ್ಕೊಬೇಕು ಎಂದು ಹೇಳಿದ್ದರು. ಈ ವೇಳೆ ವೇದಿಕೆ ಮೇಲಿದ್ದ ಬಿಜೆಪಿ ಸಂಸದ ಪಿಸಿ ಮೋಹನ್ ಅವರು, ಶಾಸಕನಾಗಿ ನೀವು ಈ ರೀತಿ ಮಾತನಾಡಿದರೆ ನಾನು ವೇದಿಕೆ ಮೇಲೆ ಇರಬೇಕೋ ಬೇಡವೋ ಎಂದು ಪ್ರತಿದಾಳಿ ನಡೆಸಿದರು. ಅಷ್ಟೇ ಅಲ್ಲದೆ ಇಂದು ಸಹ ಪಿಸಿ ಮೋಹನ್ ಪ್ರದೀಪ್ ಈಶ್ವರ್ ವಿರುದ್ಧ ವಾಗ್ದಾಳಿ ನಡೆಸಿದ್ದು ಮೊದಲು ಸರ್ಕಾರದಿಂದ 300 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿಸಿ ಎಂದು ಸವಾಲು ಹಾಕಿದ್ದಾರೆ.

## ಸೈಯ್ಯದ್ ಅಲಿ ಹುಸೇನಿ ಆಯ್ಕೆ

**ಬೆಂಗಳೂರು:** ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಆಪ್ತ ಸೈಯ್ಯದ್ ಅಲಿ ಅಲ್ ಹುಸೇನಿ ಅವರು ಕರ್ನಾಟಕ ವಕ್ಫ್ ಬೋರ್ಡ್ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ವಕ್ಫ್ ಬೋರ್ಡ್ ಅಧ್ಯಕ್ಷರ ಆಯ್ಕೆ ವಿಚಾರದಲ್ಲಿ ಕಾಂಗ್ರೆಸ್ ನಲ್ಲಿ ಎರಡು ಬಣಗಳ ನಡುವೆ ಜಟಾಪಟಿ ನಡೆದಿತ್ತು. ಚಿತ್ರದುರ್ಗದ ಅನ್ವರ್ ಪಾಷಾಗೆ ಅಧ್ಯಕ್ಷ ಸ್ಥಾನ ನೀಡುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆಗೆ ಜಮೀರ್ ಖಾನ್ ಪಟ್ಟು ಹಿಡಿದಿದ್ದರು. ಆದರೆ ಈ ಒತ್ತಡಕ್ಕೆ ಮಲ್ಲಿಕಾರ್ಜುನ ಖರ್ಗೆ ಮಣಿಯಲಿಲ್ಲ. ಹೀಗಾಗಿ ಅಸಮಾಧಾನದಿಂದ ಜಮೀರ್ ಹೊರನಡೆದಿದ್ದರು. ಎರಡೂವರೆ ವರ್ಷಗಳ ಅಧಿಕಾರ ಹಂಚಿಕೆ ಸೂತ್ರದಂತೆ ಮೊದಲಿಗೆ ಕಲಬುರಗಿಯ ಹಝ್ರತ್ ಖ್ವಾಜಾ ಬಂದಾ ನವಾಝ್ ದರ್ಗಾದ ಸೈಯದ್ ಮುಹಮ್ಮದ್ ಅಲಿ ಹುಸೈನಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

## ನನ್ನ ವಿರುದ್ಧ ಸುಳ್ಳು ಕೇಸ್, ನನ್ನ ಕಪಾಳಕ್ಕೆ ಹೊಡೆದಿದ್ದಾರೆ: ನಟಿ ರನ್ಯಾ ರಾವ್ ಪತ್ರ

**ಬೆಂಗಳೂರು:** ನಟಿ ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ದಂಧೆಗೆ ಕರ್ನಾಟಕ ಪೊಲೀಸ್ ಪ್ರೋಟೋಕಾಲ್ ಅಧಿಕಾರಿಗಳನ್ನು ಬಳಸಿಕೊಳ್ಳಲಾಗಿದೆ ಎಂದು ಕಂದಾಯ ಗುಪ್ತಚರ ನಿರ್ದೇಶನಾಲಯ(ಡಿಆರ್) ನ್ಯಾಯಾಲಯಕ್ಕೆ ತಿಳಿಸಿದೆ. ರನ್ಯಾ ರಾವ್ ಜಾಮೀನು ಅರ್ಜಿ ವಿಚಾರಣೆ ವೇಳೆ ಡಿಆರ್ ಅಧಿಕಾರಿಗಳ ಪರವಾಗಿ ಮಧು ರಾವ್ ಅವರು ನಟಿ ಜನವರಿಯಿಂದ 27 ಬಾರಿ ದುಬೈಗೆ ಪ್ರಯಾಣಿಸಿದ್ದಾರೆ ಎಂದು ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯಕ್ಕೆ ತಿಳಿಸಿದರು. ಡಿಆರ್‌ನ ವಾದವನ್ನು ಪರಿಗಣಿಸಿ ನಿನ್ನೆ ರನ್ಯಾಗೆ ಕೋರ್ಟ್ ಜಾಮೀನು ನಿರಾಕರಿಸಿತ್ತು. ಸದ್ಯ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ರನ್ಯಾ ರಾವ್ ಜೈಲಿನಿಂದಲೇ ಡಿಆರ್ ಎಡಿಜಿಗೆ ಪತ್ರ ಬರೆದಿದ್ದಾರೆ. 14 ಕೆಜಿ ಚಿನ್ನ ತಂದಿರೋದಾಗಿ ಚಿನ್ನಕಳ್ಳಸಾಗಣೆ ಪ್ರಕರಣದಲ್ಲಿ ನನ್ನ ಮೇಲೆ ಸುಳ್ಳು ಕೇಸ್ ದಾಖಲು ಮಾಡಿದ್ದಾರೆ. ಅಧಿಕಾರಿಗಳು ನನಗೆ ಮಾತನಾಡೋದಕ್ಕೆ ಯಾವುದೇ ಅವಕಾಶ ಕೊಟ್ಟಿಲ್ಲ. ಹಲವು ಬಾರಿ ನನ್ನ ಮೇಲೆ ಅಧಿಕಾರಿಗಳು ಕೈ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

## ಕಲಬುರಗಿಯ ಐನಾಪುರದಲ್ಲಿ ಗರಿಷ್ಠ ತಾಪಮಾನ 42.8 ಡಿಗ್ರಿ ಸೆಲ್ಸಿಯಸ್ ದಾಖಲು

**ಬೆಂಗಳೂರು:** ರಾಜ್ಯದಲ್ಲಿ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಕಲ್ಯಾಣ ಕರ್ನಾಟಕದ ಕಲಬುರಗಿ ಜಿಲ್ಲೆಯ ಐನಾಪುರ ಹೋಬಳಿ ಗ್ರಾಮದಲ್ಲಿ ಕಳೆದ 24 ಗಂಟೆಗಳಲ್ಲಿ ಗರಿಷ್ಠ ತಾಪಮಾನ 42.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಐಎಂಡಿ ನೀಡಿದ ಮುನ್ಸೂಚನೆ ಪ್ರಕಾರ, ಮುಂದಿನ ಐದು ದಿನಗಳವರೆಗೆ ಉತ್ತರ ಕರ್ನಾಟಕದ ಒಳನಾಡಿನಲ್ಲಿ ಮಾರ್ಚ್ 15 ರಿಂದ 17ರವರೆಗೆ ಗರಿಷ್ಠ ತಾಪಮಾನ ಇನ್ನೂ 2 ರಿಂದ 4 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಹೇಳಿದೆ. ಮಾರ್ಚ್ 18 ರಿಂದ 19 ರವರೆಗೆ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಐಎಂಡಿ ಹೀಟ್ ವೇವ್ ಎಚ್ಚರಿಕೆಯನ್ನು ನೀಡಿದೆ.



# ಕೊಡದಗುಡ್ಡದ ವೀರಭದ್ರಸ್ವಾಮಿ ರಥೋತ್ಸವ



ಜಗಳೂರು: ತಾಲ್ಲೂಕಿನ ಹೆಸರಾಂತ ಸ್ಥಳಗಳಲ್ಲಿ ಒಂದಾದ ಶ್ರೀ ಕೊಡದಗುಡ್ಡದ ವೀರಭದ್ರಸ್ವಾಮಿ ರಥೋತ್ಸವವು ಒಂದು ಎಂದು ಹೇಳಬಹುದು ಈ ರಥೋತ್ಸವವು ಸಾವಿರಾರು ಅಪಾರ ಭಕ್ತರ ಮಧ್ಯೆ ಸಂಡಗರ ಸಂಭ್ರಮದಿದ ಅದ್ದೂರಿಯಾಗಿ ರಥೋತ್ಸವ ಜರಗಿತು.

ವಿಶೇಷ ಎಂದರೇ ಬೇರೆ ಬೇರೆ ಜಿಲ್ಲೆಗಳಿಂದ ಜನರು ಪಾದಯಾತ್ರೆ ಬರುತ್ತರೆ.ಹಾಗೂ ಸುತ್ತಮುತ್ತಲಿನ ಊರುಗಳಿದ ಭಕ್ತದಿಗಳು ಬೆಳಗ್ಗಿನ ಜಾವ 1 ಗಂಟೆ ಸುಮಾರಿಗೆ ಹೊರಡುತ್ತರೆ ಕೊಡದಗುಡ್ಡಕ್ಕೆ ಮುಂಜಾನೆ 6 ಗಂಟೆ ಸುಮಾರಿಗೆ ಬಂದು ಶ್ರೀ ಸ್ವಾಮಿಯ ದರ್ಶನವನ್ನು ಪಡೆ-ಯುತ್ತರೆ.

ಜಾತ್ರಗೆ ಬರುವ ಭಕ್ತರಿಗೆ ತಂಗಲೂ ವಸತಿ ಗೃಹಗಳನ್ನು ನಿರ್ಮಿಸಲಾಗುವುದು.ದಾವಣಗೆರೆ ಜಿಲ್ಲೆ. ಚಿತ್ರದುರ್ಗ , ಶಿವಮೊಗ್ಗ ಜಿಲ್ಲೆ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಿಂದ ಮತ್ತು ನಾನಾ ಗ್ರಾಮಗಳಿಂದ ಭಕ್ತರು ಮರದ ಕೆಳಗೆ ಮತ್ತು ನೆರಳಿರುವ ಜಾಗದಲ್ಲಿ ಬಿಡಾರವನ್ನು ಹಾಕಿ ಮೂರು ದಿಗಳ ಕಾಲ ತಂಗುತ್ತಾರೆ.

ರಥಕ್ಕೆ ಪೂಜೆಸಲ್ಲಿಸಿದ ನಂತರ ಭಕ್ತರು ಶ್ರೀ ವೀರಭದ್ರ ಸ್ವಾಮಿಯಗೆ ಜೈಕಾರ ಹಾಕುತ್ತ ರಥವನ್ನು ಎಳೆದರು.ಭಕ್ತರು ತೇರು ಹೊರಡುವ ಸಂದರ್ಭದಲ್ಲಿ ರಥಕ್ಕೆ ಬಾಳಿಹಣ್ಣು, ಮೆಣಸು, ಉತ್ತುತ್ತಿ, ಇನ್ನಿತರೆ ಧಾನ್ಯಗಳನ್ನು ಎಸೆದು ಸ್ವಾಮಿಗೆ ಸಮರ್ಪಿಸಿದರು.

ದೇವರ ಪಟವನ್ನು ದೇವಿಕೆರೆ ಎಲೆ ಶ್ರೀ ಶರಬೇಂದ್ರಪ್ಪ

ಎಂಬುವವರು 4.65 ಲಕ್ಷದ ಸಾವಿರ ರೂಗೆ ಹರಾಜಿನಲ್ಲಿ ತಮ್ಮದಾಗಿಸಿಕೊಂಡರು.

ಶನಿವಾರ ಬೆಳಗ್ಗೆಯಿಂದಲೇ ಭಕ್ತರು ಶ್ರೀ ವೀರಭದ್ರಸ್ವಾಮಿಗೆ ಕಾಯಿ, ಬಾಳೆಹಣ್ಣು, ಕರ್ಪೂರ, ಊದಿನಕಡ್ಡಿ, ಅರ್ಪಿಸಿ ಶ್ರೀ ಸ್ವಾಮಿಯ ದರ್ಶನವನ್ನು ಪಡೆಯಲು ಸರದಿ ಸಾಲಿನಲ್ಲಿ ಜನರು ಮುಗಿಬಿದ್ದಿದ್ದರು. ರಥೋತ್ಸವಕ್ಕೂ ಮುನ್ನ ಶ್ರೀ ವೀರಭದ್ರ ಸ್ವಾಮಿಯ ದೇವರನ್ನು ದೇವಸ್ಥಾನದಿಂದ ಪಲ್ಲಕ್ಕಿಯಲ್ಲಿ ಕೂರಿಸಿಕೊಂಡು ಮೆರವಣಿಗೆಯ ಜೊತೆಗೆ ಸಮಾಳ, ಓಡಪುಗಳನ್ನು ಹಾಡುತ್ತ ಗುಡ್ಡದಿಂದ ಕೆಳಗೆ ಬರುತ್ತರೆ. ಇದನ್ನು ನೋಡುವುದು ವಿಶೇಷವಾಗಿತ್ತು ಮತ್ತು ಜನರ ಗಮನ ಸೆಳೆದವು. ದೊಡ್ಡವರು ಮತ್ತು ಸಣ್ಣಮಕ್ಕಳು ಹೊಸಬಟ್ಟೆಗಳನ್ನು ತೊಟ್ಟು ಸಂಭ್ರಮಿಸಿದರು.ಯುವಕರು ಹಾಗೂ ಯುವತಿಯರು ದೇವಸ್ಥಾನ ಮತ್ತು ರಥೋತ್ಸವದ ಹತ್ತಿರ ಬಂದು ಯುವಕ ಯುವತಿ ಯಾರು ಸೆಲ್ಫಿ ತೆಗೆದುಕೊಳ್ಳವುದು ಕಂಡುಬಂತು.

ರಥೋತ್ಸವ ನೀಲುವ ಜಾಗದಲ್ಲಿ ಮತ್ತು ರಸ್ತೆಯ ಅಕ್ಕ-ಪಕ್ಕದಲ್ಲಿ ಖಾರಮಂಡಕ್ಕೆ ಅಂಗಡಿಗಳು, ಸ್ತ್ರೀಯರ ಸೌಂದರ್ಯವರ್ಧಕದ ಅಂಗಡಿಗಳು,ಮಕ್ಕಳ ಅಂಟಿಕೆ ಅಂಗಡಿಗಳು, ಐಸ್‌ಕ್ರೀಂ ಗಾಡಿಗಳು, ಕಬ್ಬಿನಗಾಡಿಗಳು, ಪಾನಿಪೂರಿ ಅಂಗಡಿಗಳು, ಮಂಡಕ್ಕೆ ಮೆಣಸಿನಕಾಯಿಯನ್ನು ಬಂದ ಭಕ್ತದಿಗಳು ಸವಿದರು ಮತ್ತು ಶ್ರೀ ವೀರಭದ್ರಸ್ವಾಮಿಯ ಪೋಟೋಗಳು ಹಾಗೂ ಸ್ವಾಮಿಯ ಸಿಡಿಗಳ ಅಂಗಡಿಗಳು ಇದ್ದವು.

## ಕಮ್ಮಾರಗಟ್ಟೆ : ಶ್ರೀ ಆಂಜನೇಯ ಸ್ವಾಮಿ ರಥೋತ್ಸವ

**ಸಾಸ್ವೆಹಳ್ಳಿ:** ಹೊನ್ನಾಳಿ ತಾಲೂಕು ಕಮ್ಮಾರಗಟ್ಟೆ ಗ್ರಾಮದ ಪುರಾಣ ಪ್ರಸಿದ್ಧ ಶ್ರೀ ಆಂಜನೇಯ ಸ್ವಾಮಿಯ ರಥೋತ್ಸವ ಪ್ರತಿ ವರ್ಷದಂತೆ ಈ ಬಾರಿಯೂ ಶನಿವಾರ ಮುಂಜಾನೆ ನೂರಾರು ಭಕ್ತ ಸಮೂಹದ ಮಧ್ಯೆ ವಿಜೃಂಭಣೆಯಿಂದ ನಡೆಯಿತು.ದೇವಾಲಯದ ಆವರಣದಲ್ಲಿ ಉಚ್ಚಾಯ ಉತ್ಸವ, ಶುಕ್ರವಾರ ಗ್ರಾಮದಲ್ಲಿ ಉತ್ಸವ ಮೂರ್ತಿಯ ರಾಜಭೀದಿ ಉತ್ಸವ ಮೆರವಣಿಗೆ ನಡೆಯಿತು, ಶನಿವಾರ ರಥೋತ್ಸವದ ನಂತರ ದೇವಾಲಯದ ಆವರಣದಲ್ಲಿ ನೆರೆದ ಭಕ್ತರಿಗೆ ಅನ್ನದಾಸೋಹ ಪ್ರಸಾದ ವ್ಯವಸ್ಥೆ, ಸಂಜೆ ಮುಳ್ಳುಗದ್ದಿಗೆ ಉತ್ಸವ, ಭೂತಪ್ಪನ ಸೇವೆ ನಡೆಸಲಾಯಿತು.

## ಕನ್ನಡಪೂಜೆಗೆ ಹೆಸರಾದ ಹಿರೇಮಗಳೂರು ಕೋದಂಡರಾಮ ದೇವಾಲಯ

**ಚಿಕ್ಕಮಗಳೂರು:** ಪ್ರಕೃತಿ ಸೌಂದರ್ಯಕ್ಕೂ ಜಲಪಾತಗಳಿಗೂ ಗಿರಿಧಾಮಗಳಿಗೂ ಹೆಸರಾಗಿರುವ ಜಿಲ್ಲೆಯಲ್ಲಿ ಹಲವಾರು ಸುಂದರ ದೇವಾಲಯಗಳಿವೆ. ನಗರದಿಂದ ಸುಮಾರು ಮೂರು ಕಿ.ಮೀ. ದೂರದಲ್ಲಿ ಹಿರೇಮಗಳೂರು ಎಂಬ ಊರು ಇದ್ದು, ಇಲ್ಲಿ ಶ್ರೀ ಕೋದಂಡರಾಮ ದೇವಾಲಯ ನೋಡತಕ್ಕದ್ದಾಗಿದೆ.

ಸೊಗಸಾದ ರಾಜಗೋಪುರ ಮತ್ತು ವಿಶಾಲವಾದ ಪ್ರಾಕಾರ ಮನಸೆಳೆಯುತ್ತವೆ. ಎಲ್ಲೆಲ್ಲಿ ನೋಡಿದರೂ ಕನ್ನಡದ ಫಲಕಗಳು ಎದ್ದು ಕಾಣುತ್ತಾ ಮನಸೆಳೆಯುತ್ತವೆ. ಇಲ್ಲಿನ ಅರ್ಚಕ ಶ್ರೀ ಹಿರೇಮಗಳೂರು ಕಣ್ಣನ್ ನೇತೃತ್ವದಲ್ಲಿ ಕನ್ನಡ ಪೂಜೆ ಇಲ್ಲಿ ವಿಶೇಷವಾಗಿದ್ದು ಹಾಗೂ ದೇವಾಲಯಲ್ಲಿ ಎಲ್ಲವನ್ನೂ ಕನ್ನಡಮಯವಾಗಿಸಿದ್ದಾರೆ. ನುಡಿಮುತ್ತುಗಳ ಹಲವಾರು ಫಲಕಗಳನ್ನು ಹಾಕಿಸಿದ್ದಾರೆ. ಒಳ್ಳೆಯ ವಿದ್ವಾಂಸರಾದ ಅವರು ಜನಪ್ರಿಯವಾದ ದೂರದರ್ಶನ ಕಾರ್ಯಕ್ರಮಗಳಿಂದ ಸುಪ್ರಸಿದ್ಧರಾಗಿದ್ದಾರೆ.

ದೇವಾಲಯದ ಗರ್ಭಗುಡಿ ಮತ್ತು ಶುಕನಾಸಿ,





ಹೊಯ್ಸಳ ಶೈಲಿಯಲ್ಲಿದ್ದು, ನವರಂಗ, ಗೋಪುರ ಮೊದಲಾದವು ದ್ರಾವಿಡಶೈಲಿಯಲ್ಲಿವೆ. ಗರ್ಭಗುಡಿಯಲ್ಲಿ ಹನುಮಂತನ ವಿಗ್ರಹವಿರುವ ಪೀಠದ ಮೇಲೆ ಶ್ರೀರಾಮ, ಸೀತೆ, ಮತ್ತು ಲಕ್ಷ್ಮಣರ ವಿಗ್ರಹಗಳಿವೆ.

ರಾಮ, ಲಕ್ಷ್ಮಣರು ಬಿಲ್ಲುಬಾಣಗಳನ್ನು ಧರಿಸಿದ್ದಾರೆ. ಹಾಗಾಗಿ ರಾಮನಿಗೆ ಕೋದಂಡರಾಮ ಎಂಬ ಹೆಸರು ಬಂದಿದೆ.

ಕೋದಂಡ ಎಂಬುದು ಶ್ರೀರಾಮನ ಬಿಲ್ಲಿನ ಹೆಸರಾಗಿದೆ. ಒಂದು ವಿಶೇಷವೆಂದರೆ, ಇಲ್ಲಿ ಸೀತೆ ರಾಮನ ಬಲಕ್ಕಿದ್ದಾಳೆ. ಸಾಮಾನ್ಯವಾಗಿ ಬೇರೆಲ್ಲ ಕಡೆ, ಸೀತೆ ರಾಮನ ಎಡಕ್ಕಿರುತ್ತಾಳೆ. ದೇವಾಲಯದ ಪ್ರಾಕಾರದಲ್ಲಿ ಯೋಗನರಸಿಂಹ, ವೇದಾಂತ ದೇಶಿಕ, ಕಾಳಿಂಗಮರ್ದನ ಕೃಷ್ಣ, ಸುಗ್ರೀವ, ಶ್ರೀ ರಾಮಾನುಜಾಚಾರ್ಯರು ಮತ್ತು ಇತರ ಆಳ್ವಾರರ ವಿಗ್ರಹಗಳಿರುವ ಪುಟ್ಟ ಗುಡಿಗಳಿವೆ.

ನರಸಿಂಹನು ತಪಸ್ಸು ಮಾಡುವ ಭಂಗಿಯಲ್ಲಿರುವುದರಿಂದ ಈ ವಿಗ್ರಹಕ್ಕೆ ಯೋಗನರಸಿಂಹ ಎನ್ನುತ್ತಾರೆ. ಈ ವಿಗ್ರಹ ಬಹಳ ಸುಂದರವಾಗಿದ್ದು, ಇದರ ಪ್ರಭಾವಳಿಯಲ್ಲಿ ದಶಾವತಾರಗಳ ಚಿತ್ರಣವಿದೆ. ಅಂತೆಯೇ ಕಾಳಿಂಗಮರ್ದನ ಶ್ರೀ ಕೃಷ್ಣ ಮೊದಲಾದ ವಿಗ್ರಹಗಳು ಬಹು ಸುಂದರವಾಗಿವೆ. ಸ್ಥಳಪುರಾಣದ ಪ್ರಕಾರ, ಇದೊಂದು ಸಿದ್ಧಕ್ಷೇತ್ರವಾಗಿದ್ದು, ಇಲ್ಲಿ ಪರಶುರಾಮನೂ ಸೇರಿದಂತೆ ಹಲವು ಸಿದ್ಧರಿದ್ದರಂತೆ.

ಭೃಗುವಂಶಜನಾದ ಪರಶುರಾಮನಿಂದ ಇದ-ಕ್ಕೆ ಭಾರ್ಗವಪುರಿ ಎಂದೂ ಹೆಸರಿತ್ತಂತೆ. ವಾಲ್ಮೀಕಿ ರಾಮಾಯಣದಲ್ಲಿ ಶ್ರೀರಾಮನು ಪರಶುರಾಮನ ಭೇಟಿ ಮಾಡಿದ ಪ್ರಸಂಗವನ್ನು ಕಾಣಬಹುದು. ಇದರ ಸ್ಮರಣಾರ್ಥ, ಇಲ್ಲಿ ಪರಶುರಾಮನು ಶ್ರೀರಾಮನಿಗೆ ಶರಣಾಗಿರುವ ಒಂದು ಸುಂದರ ಕೆತ್ತನೆಯನ್ನು ನಿಲ್ಲಿಸಿರುವುದನ್ನು ಕಾಣಬಹುದಾಗಿದೆ.

ಶ್ರೀ ರಾಮನಿಗೆ ಶರಣಾದ ಪರಶುರಾಮನು ಅವನಿಗೆ ಅವನ ಮದುವೆಯ ದೃಶ್ಯವನ್ನು ತೋರಿಸಲು ಬೇಡಿಕೊಂಡನಂತೆ. ಆಗ ಶ್ರೀರಾಮನು ಸೀತೆ, ಲಕ್ಷ್ಮಣರೊಂದಿಗೆ ನಿಂತನಂತೆ. ಆಗ ಸೀತೆಯನ್ನು ತನ್ನ ಬಲಕ್ಕೂ ಲಕ್ಷ್ಮಣನನ್ನು ತನ್ನ ಎಡಕ್ಕೂ ಇರಿಸಿಕೊಂಡು ನಿಂತ ಭಂಗಿಯಲ್ಲಿಯೇ ದೇವಾಲಯದ ವಿಗ್ರಹಗಳಿವೆಯೆಂದು ಹೇಳುತ್ತಾರೆ. ಜನಮೇಜಯನು ಸರ್ಪಯಾಗ ಮಾಡಿದ ಸ್ಥಳವು ಇದೇ ಎಂದು ಪ್ರತೀತಿ ಇದೆ. ಹೀಗೆ ಹಿರೇಮಗಳೂರಿನ ಶ್ರೀ ಕೋದಂಡರಾಮ ದೇವಾಲಯ, ಒಂದು ಸ್ವಾರಸ್ಯಕರ ದೇವಾಲಯವಾಗಿದೆ.

## ಶ್ರೀ ಶನೇಶ್ವರ ದೇವರ 43 ನೇ ವರ್ಧಂತಿ ಪಲ್ಲಕ್ಕಿ ಉತ್ಸವ



**ಚಂದ್ರಗುತ್ತಿ:** ಸಮೀಪದ ಗುಂಜನೂರು ಗ್ರಾಮದಲ್ಲಿ ಶ್ರೀ ಶನೇಶ್ವರ ದೇವರ 43 ನೇ ವರ್ಧಂತಿ ಪಲ್ಲಕ್ಕಿ ಉತ್ಸವವು ಭಕ್ತರ ಸಮ್ಮುಖದಲ್ಲಿ ಶನಿವಾರ ಸಂಭ್ರಮದಿಂದ ಜರುಗಿತು. ಶ್ರೀ ಶನೇಶ್ವರ ದೇವರ ವರ್ಧಂತಿಯ ಪಲ್ಲಕ್ಕಿ ಉತ್ಸವ ಅಂಗವಾಗಿ ಶ್ರೀದೇವರಿಗೆ ವಿಶೇಷ ಪೂಜೆ, ತುಲಾಭಾರ ಸೇವೆ ಹರಕೆ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆದವು. ವಿಶೇಷವಾಗಿ ಶ್ರೀ ಶನೇಶ್ವರ ದೇವರ ಮೂರ್ತಿಗೆ ವಿವಿಧ ಪುಷ್ಪಗಳಿಂದ ಅಲಂಕಾರ ಮಾಡಲಾಗಿತ್ತು. ಮಹಾ ಮಂಗಳಾರತಿ ಬಳಿಕ ಬಂದಂತಹ ಭಕ್ತರಿಗೆ ಅನ್ನದಾಸೋಹ ಪ್ರಸಾದ ಸೇವೆ ನಡೆಯಿತು. ದೇವಾಲಯದಿಂದ ಆರಂಭವಾದ ಶ್ರೀ ಶನೇಶ್ವರ ದೇವರ ಪಲ್ಲಕ್ಕಿ ಉತ್ಸವ ಮೆರವಣಿಗೆಯು ಗ್ರಾಮದಲ್ಲಿ ವಿವಿಧ ವಾದ್ಯ-ಮೇಳಗಳೊಂದಿಗೆ ಸಂಭ್ರಮದಿಂದ ನಡೆಯಿತು.

ಪುಣ್ಯ ಕೋಟಿ ಸೇವಾ ಸಂಘದವರು ಹಾಗೂ ಗುಂಜನೂರು ಗ್ರಾಮಸ್ಥರು ಭಕ್ತರಿಗೆ ಪಾನಕ ವಿತರಿಸಿದರು. ಸಾವಿರಾರು ಭಕ್ತರು ಆಗಮಿಸಿ ಶ್ರೀ ದೇವರ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಪಾಲ್ಗೊಂಡಿದ್ದರು. ಗುಂಜನೂರು, ಹಾಗೂ ಚೌಡಿಕೊಪ್ಪ, ಶ್ರೀ ಶನೇಶ್ವರ ಯುವಕ ಸಂಘದವರು ಉಪಸ್ಥಿತರಿದ್ದರು.

## ಜಗತ್ತಿನಲ್ಲಿ ಯಾರು ದೊಡ್ಡವರಲ್ಲ ಎಲ್ಲರೂ ಸಮಾನರು

**ಭದ್ರಾವತಿ:** ಜಗತ್ತಿನಲ್ಲಿ ಯಾರು ದೊಡ್ಡವರಲ್ಲ ಎಲ್ಲರೂ ಸಮಾನರು. ನಮ್ಮ ಸೃಷ್ಟಿಕರ್ತ ಮಾತ್ರ ದೊಡ್ಡವನು. ಇದನ್ನು ನಾವೆಲ್ಲರೂ ಅರ್ಥ ಮಾಡಿಕೊಳ್ಳಬೇಕು. ಈ ಉದ್ದೇಶದಿಂದ ಇಫ್ತಾರ್ ಕೂಟ ಆಯೋಜಿಸಲಾಗುತ್ತದೆ ಎಂದು ಜಮಾಅತೆ ಇಸ್ಲಾಮಿ ಹಿಂದ್ ಜಿಲ್ಲಾ ಸಂಚಾಲಕ ಜನಾಬ್ ಅಕ್ರಮ್ ಉಲ್ಲಾ ಷರೀಬ್ ಹೇಳಿದರು. ಅವರು ಶನಿವಾರ ಪಾವನ ಮಾಸ ರಂಜಾನ್ ಪ್ರಯುಕ್ತ ಜಮಾಅತೆ ಇಸ್ಲಾಮಿ ಹಿಂದ್ ತಾಲೂಕು ಘಟಕದ ವತಿಯಿಂದ ನಗರದ ಡಾ. ರಾಜ್‌ಕುಮಾರ್ ರಸ್ತೆ(ಬಿ.ಎಚ್ ರಸ್ತೆ) ಆಯಿಷಾ ಮಸೀದಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸೌಹಾರ್ದ ಇಫ್ತಾರ್ ಕೂಟ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಮುಸ್ಲಿಂ ಸಮುದಾಯದವರು ನಮ್ಮ ಸೃಷ್ಟಿಕರ್ತ ಒಬ್ಬನೆ. ಆತ ಮಾತ್ರ ನಮ್ಮೆಲ್ಲರಿಗೂ ದೊಡ್ಡವನು ಎಂಬುದನ್ನು ಅರಿಯಬೇಕು. ಈ ನಿಟ್ಟಿನಲ್ಲಿ 5 ಕರ್ಮಗಳನ್ನು ಕಡ್ಡಾಯವಾಗಿ ಆಚರಿಸಬೇಕು. ಆಗ ಮಾತ್ರ ನಮ್ಮಲ್ಲಿ ಒಳ್ಳೆಯ ಗುಣಗಳನ್ನು ರೂಪುಗೊಳ್ಳಲು ಸಾಧ್ಯ. ಜಾತಿ-ಧರ್ಮ, ಬಡವ-ಶ್ರೀಮಂತ ಯಾವುದೇ ಭಾವಿಸದೆ ಎಲ್ಲರನ್ನು ಒಂದಾಗಿ ನೋಡುವ ಮನೋಭಾವ, ಕಷ್ಟದಲ್ಲಿ ಇರುವವರಿಗೆ ನೆರವಾಗುವುದು. ಯಾರು ಮೊದಲು ಬರುತ್ತಾರೆಯೋ ಅವರಿಗೆ ಮೊದಲ ಆದ್ಯತೆ ನೀಡುವುದು. ಹೀಗೆ ಹಲವು ಸಮಾನತೆ ನಮ್ಮಲ್ಲಿ ಬೆಳೆಸಿಕೊಳ್ಳಬೇಕು. ಇಫ್ತಾರ್ ಕೂಟ ಇದನ್ನು ತಿಳಿಸುವ ಉದ್ದೇಶವಾಗಿದೆ ಎಂದರು. ಜಮಾಅತೆ ಇಸ್ಲಾಮಿ ಹಿಂದ್ ತಾಲೂಕು ಸಂಚಾಲಕ ಉಪಸ್ಥಿತರಿದ್ದರು. ನಗರಸಭೆ ಸದಸ್ಯ ಜಾರ್ಜ್, ಮುಖಂಡರಾದ ತೀರ್ಥೇಶ, ಮಂಜುನಾಥ್, ರಾಜು, ಮಹಮದ್ ರಫಿ(ಟೈಲರ್), ಖದೀರ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

# ಕ್ಷೇತ್ರದಲ್ಲಿ ಹೆಚ್ಚು ವಸತಿ ಶಾಲೆ ನಿರ್ಮಾಣಕ್ಕೆ ಒತ್ತು: ಶಾಸಕ ಕೆ.ಎಸ್. ಬಸವಂತಪ್ಪ



**ದಾವಣಗೆರೆ:** ಮಾಯಕೊಂಡ ಕ್ಷೇತ್ರದಲ್ಲಿ ಹೆಚ್ಚು ಹೆಚ್ಚು ವಸತಿ ಶಾಲೆಗಳನ್ನು ತೆರೆಯುವ ಮೂಲಕ ತುಳಿತಕ್ಕೊಳಗಾದ ಮಕ್ಕಳಿಗೆ ಶಿಕ್ಷಣ ಕೊಡಿಸಬೇಕೆಂಬುದು ನಮ್ಮ ಗುರಿಯಾಗಿದೆ ಎಂದು ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಚನ್ನಗಿರಿ ತಾಲೂಕಿನ ತ್ಯಾವಣಗಿ ಗ್ರಾಮದಲ್ಲಿ ಬುಧವಾರ ಲೋಕೋಪಯೋಗಿ ಇಲಾಖೆ ಉಪವಿಭಾಗ ಚನ್ನಗಿರಿ, ಸಮಾಜ ಕಲ್ಯಾಣ ಇಲಾಖೆ ದಾವಣಗೆರೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಆಶ್ರಯದಲ್ಲಿ 18 ಕೋಟಿ ರೂ. ವೆಚ್ಚದ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಹೋಬಳಿಗೊಂದು ವಸತಿ ಶಾಲೆಗಳನ್ನು ತೆರೆಯುವ ಮೂಲಕ ತುಳಿತಕ್ಕೊಳಗಾದ ಮಕ್ಕಳಿಗೆ ಶಿಕ್ಷಣ ಕೊಡಿಸಬೇಕೆಂದು ಪ್ರೊ. ಕೃಷ್ಣಪ್ಪ ಅವರು ಅಂದು ಹೋರಾಟ ಮಾಡಿದ್ದರು.

ಅವರ ಹೋರಾಟದಫಲವಾಗಿ ಈ ಹಿಂದೆ ಸಮಾಜ ಕಲ್ಯಾಣ ಇಲಾಖೆ ಸಚಿವರಾಗಿದ್ದ ಎಚ್.ಆಂಜನೇಯ ಅವರು ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಳಿ ಚರ್ಚಿಸಿದಾಗ ಹೋಬಳಿಗೊಂದು ವಸತಿ ಶಾಲೆ ನಿರ್ಮಿಸಿಎಂದು ಸೂಚನೆ ನೀಡಿದ್ದರಿಂದ ಎಚ್.ಆಂಜನೇಯ ಅವರು ರಾಜ್ಯದಲ್ಲಿ 845 ವಸತಿ ಶಾಲೆಗಳನ್ನುನಿರ್ಮಿಸಲು ಮಂಜೂರಾತಿ ನೀಡಿದ್ದರು.ಅದರ ಫಲವಾಗಿ ಇಂದು ಭೂಮಿಪೂಜೆನೆರವೇರಿಸಲಾಗುತ್ತಿದೆ ಎಂದು ತಿಳಿಸಿದರು.

ಕ್ಷೇತ್ರದ ವ್ಯಾಪ್ತಿಯ ಕಾರಿಗನೂರು, ತ್ಯಾವಣಗಿ, ಬಸವಾಪಟ್ಟಣ, ಆನಗೋಡು ಸೇರಿದಂತೆ ಐದು ವಸತಿ ಶಾಲೆಗಳನ್ನು ನಿರ್ಮಿಸಲಾಗಿದೆ.

ಇನ್ನೂ ಎರಡ್ಮೂರು ವಸತಿ ಶಾಲೆಗಳನ್ನುನಿರ್ಮಿಸಬೇಕಾಗಿದೆ. ಈ ವರ್ಷ ಬಜೆಟ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 20 ವಸತಿ ಶಾಲೆಗಳನ್ನು ಮಂಜೂರು ಮಾಡಿದ್ದಾರೆ. ಕಾರ್ಮಿಕ ಇಲಾಖೆ 10, ಅಲ್ಪಸಂಖ್ಯಾತ ಇಲಾಖೆ,ಹಿಂದುಳಿದ ವರ್ಗಗಳ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ವಸತಿ ಶಾಲೆಗಳನ್ನುನಿರ್ಮಿಸಲಾಗುವುದು ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಎಇಇ ರವಿಕುಮಾರ್, ಮಾಜಿ ಜಿಪಂ ಸದಸ್ಯ ಪಿ.ಸಿ. ಗೋವಿಂದಸ್ವಾಮಿ, ಬಸವಾಪಟ್ಟಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಜಿ. ನಾಗರಾಜ್,ಮುಖಂಡರಾದ ಬಿ.ಎಚ್. ಹಾಲಪ್ಪ, ಮಹಾಬಲೇಶ್, ಲೋಹಿತಾಶ್ವ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶಶಿಕಲಾ ಮೂರ್ತಿ, ಪರಶುರಾಮ್, ಅಂಜಿನಪ್ಪ, ಶ್ರೀನಿವಾಸ್, ಗ್ರಾಪಂ ಅಧ್ಯಕ್ಷಕರಿಬಸಪ್ಪ, ಸದಸ್ಯರು, ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಹಿಂದೂಪುರ-ಬೆಂಗಳೂರು ಪ್ಯಾಸೆಂಜರ್ ರೈಲಿನ 4 ಬೋಗಿಗಳ ಕಡಿತ, ಪ್ರಯಾಣಿಕರ ಗೋಳು ಕೇಳೋರಾರು



**ಗೌರಿಬಿದನೂರು:** ಹಿಂದೂಪುರ-ಬೆಂಗಳೂರು ನಡುವೆ ಸಂಚರಿಸುವ ಪ್ಯಾಸೆಂಜರ್ ರೈಲಿನ ಬೋಗಿಗಳನ್ನು ಕಡಿತ ಮಾಡಿರುವುದರಿಂದ ರೈಲ್ವೆ ಪ್ರಯಾಣಿಕರು ಪ್ರತಿನಿತ್ಯ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಗೌರಿಬಿದನೂರಿನಿಂದ ಬೆಂಗಳೂರಿಗೆ ಪ್ರಯಾಣಿಸಲು ಕಾರ್ಮಿಕರು, ವಿದ್ಯಾರ್ಥಿಗಳು, ಸರಕಾರಿ ಕರ್ತವ್ಯಕ್ಕೆ ತೆರಳುವವರು ಹಾಗೂ ರೈತರು ಪ್ರತಿನಿತ್ಯ ಹಿಂದೂಪುರ-ಬೆಂಗಳೂರು ಪ್ಯಾಸೆಂಜರ್ ರೈಲನ್ನು ಸಾವಿರಕ್ಕೂ ಹೆಚ್ಚು ಮಂದಿ ಪ್ರಯಾಣಿಕರು ಅವಲಂಬಿಸಿದ್ದಾರೆ. ಪ್ಯಾಸೆಂಜರ್ ರೈಲು ಗಾಡಿಯು 16 ಬೋಗಿಗಳನ್ನು ಹೊಂದಿದ್ದರೂ ಸಹ ಪ್ರಯಾಣಿಕರು ಸ್ಥಳವಕಾಶವಿಲ್ಲದೆ ಪರದಾಡುತ್ತಿದ್ದರು. ಆದರೆ ಇದೀಗ 4 ಬೋಗಿಗಳನ್ನು ಕಡಿತಗೊಳಿಸಿರುವುದರಿಂದ ಪ್ರಯಾಣಿಕರ ಪಾಡಂತೂ ಹೇಳ ತೀರದಾಗಿದೆ.

ನೂಕು ನುಗ್ಗಲು: ಹಿಂದೂಪುರದಿಂದ ಹೊರಡುವ ಪ್ಯಾಸೆಂಜರ್ ರೈಲು ವಿದುರಾಶ್ವತ್ಥ, ಗೌರಿಬಿದನೂರು, ಸೋಮೇಶ್ವರ, ತೊಂಡೇಬಾವಿ, ಒಡ್ಡರಹಳ್ಳಿ, ರಾಜಾನುಕುಂಟೆ, ಯಲಹಂಕ ಬೆಂಗಳೂರು ರೈಲ್ವೆ ನಿಲ್ದಾಣ ತಲುಪುತ್ತದೆ. ಈ ರೈಲು ಪ್ಯಾಸೆಂಜರ್ ರೈಲು ಆಗಿರುವುದರಿಂದ ಮಾರ್ಗಮಧ್ಯ ಬರುವ ಪ್ರತಿಯೊಂದು ಗ್ರಾಮಗಳ ನಿಲ್ದಾಣದಲ್ಲೂ ನಿಲುಗಡೆ ಮಾಡಿಕೊಂಡು ಆಯಾ ಭಾಗಗಳ ಪ್ರಯಾಣಿಕರನ್ನು ಹೊತ್ತು ಬೆಂಗಳೂರಿಗೆ ಸಾಗುತ್ತಿದೆ.

ವಿದ್ಯಾರ್ಥಿಗಳು ದೊಡ್ಡಬಳ್ಳಾಪುರ, ರಾಜಾನುಕುಂಟೆ, ಯಲಂಹಂಕ, ಬೆಂಗಳೂರು ಕಡೆಗಳ ಶಾಲಾ-ಕಾಲೇಜುಗಳಿಗೆ ನೂರಾರು ಮಂದಿ ಪ್ರತಿನಿತ್ಯ ತೆರಳುತ್ತಾರೆ. ಅದೇ ರೀತಿ ಕಾರ್ಮಿಕರು. ಸಾರ್ವಜನಿಕರು ಸಾವಿರಾರು ಮಂದಿ ಪ್ರಯಾಣಿಸುತ್ತಿದ್ದಾರೆ. ರೈಲಿನ ಬೋಗಿಗಳು ಕಡಿತಗೊಳಿಸಿರುವುದರಿಂದ ರೈಲಿನಲ್ಲಿ ನೂಕು ನುಗ್ಗಲು ಉಂಟಾಗಿ ಕನಿಷ್ಠ ನಿಲ್ಲಲೂ ಸಹ ಸ್ಥಳಾವಕಾಶವಿಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮಕ್ಕಳನ್ನು ಹೊತ್ತ ತಾಯಂದಿರು, ಯುವತಿಯರು, ವಯೋವೃದ್ಧರ ಪಾಡಂತೂ ಹೇಳತೀರದಾಗಿದೆ.

ಇರಿಸು-ಮುರಿಸು: ಒಂದು ಬೋಗಿಯಲ್ಲಿ ನೂರಾರು ಮಂದಿ ಪ್ರಯಾಣಿಸವ ಪರಿಸ್ಥಿತಿ ನಿರ್ಮಾಣವಾಗಿದ್ದು, ಕಾಲೇಜು ಯುವತಿಯರಿಗೆ ಮತ್ತು ಮಹಿಳೆಯರಿಗೆ ಪ್ಯಾಸೆಂಜರ್ ರೈಲಿನಲ್ಲಿ ಪ್ರಯಾಣಿಸಲು ಒಂದು ರೀತಿಯ ಇರಿಸು ಮುರಿಸು ಆಗುತ್ತಿರುವುದಂತೂ ನಿಜ, ವಿಧಿಯಿಲ್ಲದೆ, ಸಕಾಲಕ್ಕೆ ಸಾರಿಗೆ ಬಸ್ ಗಳಿಲ್ಲದೆ ಇದ್ದರೂ ಪ್ರಯಾಣಿಕರ ಸಂಖ್ಯೆ ಹೆಚ್ಚಳವಾಗಿರುವುದರಿಂದ ಬಹುತೇಕ ಪ್ರತಿನಿತ್ಯ ಪ್ರಯಾಣಿಸುವ ಪ್ರಯಾಣಿಕರು ಪ್ಯಾಸೆಂಜರ್ ರೈಲನ್ನೇ ಅವಲಂಬಿಸಿದ್ದಾರೆ.

ಹೈಟೆಕ್ ನಿಲ್ದಾಣ:ನಗರದ ರೈಲ್ವೆ ನಿಲ್ದಾಣ ಹೈಟೆಕ್ ನಿಲ್ದಾಣವಾಗಿ ಮಾರ್ಪಾಟು ಆಗಿದ್ದರೂ ಸಹ ಮೂಲಭೂತ ಸೌಕಯ್ಯಗಳ ಕೊರತೆ ಎದ್ದು ಕಾಣುತ್ತಿದೆ, ಕೇವಲ ಟ್ರ್ಯಾಕ್ಗಳ ಸಂಖ್ಯೆ ಹೆಚ್ಚಳವಾಗಿರುವುದು ಬಿಟ್ಟರೆ ಹೊಸ ರೈಲುಗಳನ್ನು ಬಿಟ್ಟಿಲ್ಲ, ಕೆಲವು ಎಕ್ಸ್‌ಪ್ರೆಸ್ ರೈಲುಗಳು ಗೌರಿಬಿದನೂರು ನಿಲ್ದಾಣದಲ್ಲಿ ನಿಲುಗಡೆಯೂ ಸಹ ಇಲ್ಲವಾಗಿದೆ.ರಾಜಧಾನಿ, ಕರ್ನಾಟಕ ಎಕ್ಸ್‌ಪ್ರೆಸ್, ಹಾಸನ್ಸೊಲಾಪುರ್, ಕೊಂಡವೀಡು ಮುಂತಾದ ಎಕ್ಸ್ ಪ್ರೆಸ್ ರೈಲುಗಳನ್ನು ನಿಲುಗಡೆ ಮಾಡಬೇಕೆಂಬ ಪ್ರಯಾಣಿಕರಿಂದ ದಶಕಗಳಿಂದಲೂ ಬೇಡಿಕೆಯಿದ್ದರೂ ಈವರೆಗೂ ಯಾವುದೇ ಬೇಡಿಕೆಗಳು ಈವರೆಗೂ ಈಡೇರಿಲ್ಲ, ಸಂಬಂದ ಸಂಸದರು, ಕೇಂದ್ರ ರೈಲ್ವೆ ರಾಜ್ಯ ಮಂತ್ರಿಗಳು ಸಹ ಯಾವುದೇ ಕ್ರಮವನ್ನು ತೆಗೆದುಕೊಳ್ಳುತ್ತಿಲ್ಲ ಎಂದು ಪ್ರಯಾಣಿಕರು ಹಿಡಿಶಾಪವನ್ನು ಹಾಕುತ್ತಿದ್ದಾರೆ.ಪ್ರಯಾಣಿಕರ ಹಿತದೃಷ್ಟಿಯಿಂದ ಹಾಗೂ ಸುಖಕರ ಪ್ರಯಾಣಕ್ಕಾಗಿ ಕಡಿತಗೊಳಿಸಿರುವ 4 ಬೋಗಿಗಳನ್ನು ಅಳವಡಿಸುವುದರ ಜೊತೆಗೆ ಮತ್ತೆರಡು ಬೋಗಿಗಳನ್ನು ಅಳವಡಿಸಲು ರೈಲ್ವೆ ಇಲಾಖೆಯ ಅಧಿಕಾರಿಗಳು ಸೂಕ್ತ ಕ್ರಮಕ್ಕೆ ಮುಂದಾಗಬೇಕಿದೆ.

ಪ್ರತಿನಿತ್ಯ ಸಂಚರಿಸುವ ಪ್ಯಾಸೆಂಜರ್ ರೈಲು ಒಂದೇ ಕಡೆ ಸಂಚರಿಸುವುದಿಲ್ಲ, ಮೈಸೂರು, ತುಮಕೂರು,ಧರ್ಮಪುರಿ, ಮಾರಿಕುಪ್ಪಂ ಕಡೆಗಳಿಗೆ ಸಂಚಾರ ನಡೆಸುತ್ತಿದೆ, ಪ್ರತಿನಿತ್ಯ ಒಂದೊಂದು ಕಡೆಗಳಲ್ಲಿ ಸಂಚರಿಸುತ್ತದೆ.

## ಅರ್ಜಿ ಆಹ್ವಾನ

**ಶಿವಮೊಗ್ಗ;** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು ವಿಶೇಷ ಕೇಂದ್ರಿಯ ನೆರವಿನಡಿ ಶಿವಮೊಗ್ಗ ಜಿಲ್ಲೆಯ ಪರಿಶಿಷ್ಟ ಪಂಗಡದವರಿಗೆ ಸ್ಪಿಂಕ್ಲರ್ ಸೆಟ್ (ರೈನ್‌ಗನ್) ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅರ್ಜಿಯನ್ನು ಅಹ್ವಾನಿಸಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕ ಕಚೇರಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಸೂಕ್ತ ದಾಖಲಾತಿಗಳೊಂದಿಗೆ ಮೇ. 08 ರೊಳಗಾಗಿ ಸಲ್ಲಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಸ್.ಜಿ.ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿಗೆ ಪ್ರತಿಭಾನ್ವಿತ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿಗೆ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಹ ಅಭ್ಯರ್ಥಿಗಳು ಇದೇ ಏಪ್ರಿಲ್ 15 ರಿಂದ ಮೇ 3 ರವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿನ ಸಮಾಜ ಕಲ್ಯಾಣ ಇಲಾಖೆ ಕೊಠಡಿ ಸಂಖ್ಯೆ 37 ರಲ್ಲಿನ ಜಂಟಿ ನಿರ್ದೇಶಕರ ಕಚೇರಿಗೆ ಖುದ್ದು ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅವಧಿಯ ನಂತರ ಬಂದಂತಹ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಥಿಗಳು ಜಾತಿ ಪ್ರಮಾಣ ಪತ್ರ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಸೈಜ್ ಫೋಟೋ ಹಾಗೂ 5ನೇ ತರಗತಿ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು.ಅರ್ಹತೆಗಳು:ವಿದ್ಯಾರ್ಥಿಗಳು ಕುಟುಂಬದ ವಾರ್ಷಿಕ ವರಮಾನ ರೂ.2.50ಲಕ್ಷ ಮೀರಿರಬಾರದು. ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ವಿದ್ಯಾರ್ಥಿಗಳು ಹಾಜರಿರಬೇಕು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ದಾವಣಗೆರೆ ಜಿಲ್ಲೆಯವರಾಗಿರಬೇಕು. ಬೇರೆ ಜಿಲ್ಲೆಯ ಅರ್ಜಿಗಳನ್ನು ಅಂಗೀಕರಿಸುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಸಂಬಂಧಿಸಿದ ಹತ್ತಿರದ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಲು ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂದುಕೊರತೆ/ಅಹವಾಲು/ ಮನವಿ ಸಲ್ಲಿಸಲು ಆಹ್ವಾನ

**ಹಾಸನ :** ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗ ಮತ್ತು ಅಲೆಮಾರಿ ಅರೆ ಅಲೆಮಾರಿ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಕುಂದುಕೊರತೆ ಸಭೆಯನ್ನು ಏ. 22 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ನಡೆಸಲು ತೀರ್ಮಾನಿಸಲಾಗಿರುತ್ತದೆ. ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಾಂಗಗಳಿಗೆ ಸಂಬಂಧಿಸಿದಂತೆ ಯಾವುದೇ ಕುಂದುಕೊರತೆ/ಅಹವಾಲು/ಮನವಿಗಳು ಇದಲ್ಲಿ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಹಾಸನ ಇಲ್ಲಿಗೆ ಏ. 17 ರೊಳಗೆ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮ ರವರ ಅಧ್ಯಕ್ಷತೆಯಲ್ಲಿ ನರೇಗಾ ಕಾರ್ಯಾಗಾರ




**ಹಾಸನ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನದ ಕುರಿತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಪೂರ್ಣಿಮ ಬಿ.ಆರ್. ರವರ ಅಧ್ಯಕ್ಷತೆಯಲ್ಲಿ ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯಿತಿ ಮಟ್ಟದ ಎಲ್ಲಾ ಅನುಷ್ಠಾನಾಧಿಕಾರಿಗಳು ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ ಇಂದು ನಗರದ ಹಾಸನಾಂಭ ಕಲಾಭವನದಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಾಗಾರದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀಮತಿ ಪೂರ್ಣಿಮ ಬಿ.ಆರ್. ರವರು ಮಾತನಾಡಿ ನರೇಗಾ ಯೋಜನೆಯು ಗ್ರಾಮೀಣ ಜನರ ಬದುಕಿಗೆ ಆಶಾದಾಯಕವಾಗಿದೆ. ರೈತರು ಕೃಷಿ, ತೋಟಗಾರಿಕೆ, ಅರಣ್ಯ, ರೇಷ್ಮೆ ಇಲಾಖೆಗಳಡಿ ಹಲವಾರು ವೈಯಕ್ತಿಕ ಕಾಮಗಾರಿಗಳಾದ ಕೃಷಿಹೊಂಡ, ಬದು ನಿರ್ಮಾಣ, ತೋಟಗಾರಿಕಾ ಸಸಿಗಳನ್ನ ನೆಡುವುದು, ಹಣ್ಣಿನ ಗಿಡಗಳ ನಾಟಿ ಮುಂತಾದವುಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನ ಮಾಡಿ ಆರ್ಥಿಕ ಸಹಾಯ ಪಡೆಯಬಹುದಾಗಿದೆ. ಸಮುದಾಯ ಕಾಮಗಾರಿಗಳಾದ ಕೆರೆಕಟ್ಟೆಗಳ ಅಭಿವೃದ್ಧಿ, ರಸ್ತೆ ನಿರ್ಮಾಣ, ಗ್ರಾಮಗಳಲ್ಲಿ ಶುಚಿತ್ವ ಕಾಪಾಡಲು ವ್ಯವಸ್ಥಿತ ಚರಂಡಿ ನಿರ್ಮಾಣ, ಸೋಕ್ ಪಿಟ್ ನಿರ್ಮಾಣ, ಶಾಲಾ ಅಭಿವೃದ್ಧಿ ಕಾಮಗಾರಿಗಳು ಮುಂತಾದ ಗ್ರಾಮೀಣ ಮೂಲಭೂತ ಸೌಲಭ್ಯ ಕಾಮಗಾರಿಗಳನ್ನು ಅನುಷ್ಠಾನ ಮಾಡುವ ಮೂಲಕ ದೀರ್ಘ ಕಾಲ ಬಾಳಿಕೆ ಬರುವ ಆಸ್ತಿಗಳನ್ನು ಸೃಜನೆ ಮಾಡಬಹುದು ಎಂದು ತಿಳಿಸಿದರು. ಪ್ರಸಕ್ತ ಸಾಲಿನಲ್ಲಿ ನೀಡಿರುವ ಗುರಿಯನ್ನು ಸಾಧಿಸಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಸಲಹೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಉಪಸ್ತಿತರಿದ್ದ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಶ್ರೀ ಕೃಷ್ಣಮೂರ್ತಿ ರವರು ನರೇಗಾ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಮಡುವ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳು, ಕಾಮಗಾರಿ ಅನುಷ್ಠಾನದಲಿ

ಕಂಡುಬರುತ್ತಿರುವ ಲೋಪದೋಷಗಳು, ಸಾಮಾಜಿಕ ಲೆಕ್ಕ ಪರಿಶೋಧನೆ ಹಾಗೂ ತೀರುವಳಿ ಬಗ್ಗೆ ಸವಿವರವಾಗಿ ವಿವರಿಸುತ್ತಾ ಎಲ್ಲಾ ಅನುಷ್ಠಾನಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ನರೇಗಾ ಮಾರ್ಗಸೂಚಿಯಂತೆ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ತಿಳಿಸಿದರು.

ಕಾರ್ಯಾಗಾರದಲ್ಲಿ ಉಪಸ್ತಿತರಿದ್ದ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿಗಳಾದ ಶ್ರೀ ತಫ್ ಜುಲ್ ಹುಸೇನ್ ರವರು ಮಾತನಾಡಿ ನರೇಗಾ ಕಾಮಗಾರಿಗಳ ಅನುಷ್ಠಾನದಲ್ಲಿ ಸಾಮಗ್ರಿ ಖರೀದಿಗೆ ಸಂಬಂಧಿಸಿದಂತೆ ಟೆಂಡರ್/ ಕೊಟೇಶನ್ ಕರೆಯುವುದು, ತೆರಿಗೆ ಕಟಾವು ಮಾಡುವುದು, ಅಡ್ಹಾಕ್ ಮೀಟಿಂಗ್, ಮುಂತಾದ ಲೆಕ್ಕ ಶಾಖೆಗೆ ಸಂಬಂಧಿಸಿದ ವಿಷಯಗಳನ್ನು ತಿಳಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅನುಷ್ಠಾಧಿಕಾರಿಗಳು, ಕಾರ್ಯ ನಿರ್ವಾಹಕ ಅಧಿಕಾರುಗಳು, ಸಹಾಯಕ ನಿರ್ದೇಶಕರುಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಿಬ್ಬಂದಿಗಳು ಹಾಗೂ ಜಿಲ್ಲಾ ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು.

**ರೈತರು ಕೃಷಿ, ತೋಟಗಾರಿಕೆ, ಅರಣ್ಯ, ರೇಷ್ಮೆ ಇಲಾಖೆಗಳಡಿ ಹಲವಾರು ವೈಯಕ್ತಿಕ ಕಾಮಗಾರಿಗಳಾದ ಕೃಷಿಹೊಂಡ, ಬದು ನಿರ್ಮಾಣ, ತೋಟಗಾರಿಕಾ ಸಸಿಗಳನ್ನ ನೆಡುವುದು, ಹಣ್ಣಿನ ಗಿಡಗಳ ನಾಟಿ ಮುಂತಾದವುಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನ ಮಾಡಿ ಆರ್ಥಿಕ ಸಹಾಯ ಪಡೆಯಬಹುದಾಗಿದೆ.**

## ನಾಮ ನಿರ್ದೇಶಿತ ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ಮೇದಾರ ಪರಿಶಿಷ್ಟ ಪಂಗಡದ ಅಲೆಮಾರಿ ಅಭಿವೃದ್ಧಿ ನಿಗಮ ಸ್ಥಾಪನೆಯಾಗಿದ್ದು, ಜಿಲ್ಲೆಯ ಮೇದಾರ ಪರಿಶಿಷ್ಟ ಪಂಗಡದ ಅಲೆಮಾರಿ ನಿಗಮಕ್ಕೆ ಜಿಲ್ಲೆಯ ಮೇದಾರ ಸಮುದಾಯದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಯನ್ನು ಉತ್ತಮಪಡಿಸಲು 2 ಜನ ನಾಮನಿರ್ದೇಶಿತ ಸದಸ್ಯರನ್ನು ಆಯ್ಕೆ ಮಾಡಲು ಸದರಿ ಸಮುದಾಯಕ್ಕೆ ಶ್ರಮಿಸಿದ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಜಿದಾರರು ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಇಲ್ಲಿ ಅರ್ಜಿ ನಮೂನೆ ಪಡೆದು ಏ.29 ರೊಳಗೆ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

## ಯುವನಿಧಿ ಯೋಜನೆ

**ಗದಗ :** ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರೆಂಟಿ ಯೋಜನೆಗಳಲ್ಲಿ 05ನೇ ಗ್ಯಾರೆಂಟಿ ಯೋಜನೆ ಯುವನಿಧಿ.

ಈ ಯೋಜನೆಯಲ್ಲಿ ಪದವಿದರರಿಗೆ 3000ರೂ. ಮತ್ತು ಡಿಪ್ಲೋಮಾದಾರರಿಗೆ 1500ರೂ. ಗಳನ್ನು ನಿರುದ್ಯೋಗಿ ಭತ್ಯಯಾಗಿ ನಿಡುತ್ತಿದ್ದು ಜನೇವರಿ-2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು ಹಾಗೂ ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ವರ್ಷದಲ್ಲಿ 4 ಬಾರಿ ಸ್ವಯಂ ಘೋಷಣೆಯನ್ನು ಮಾಡಬೇಕು. ಪ್ರತಿ ಮೂರು ತಿಂಗಳಿಗೊಮ್ಮೆ ದಿನಾಂಕ 25 ರೊಳಗಾಗಿ ಸ್ವಯಂ ಘೋಷಣೆಯನ್ನು ಮಾಡಬೇಕು. ಮಾರ್ಚ್-2025,

ಎಪ್ರೀಲ್-2025, ಮೇ-2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಮೇ-2025ರ ಮಾಹೆಯಲ್ಲಿ ಸ್ವಯಂ ಘೋಷಣೆಯನ್ನು ಮಾಡಬೇಕು. ಹಾಗೂ ಜುನ್-2025, ಜುಲೈ-2025 ವತ್ತು ಆಗಸ್ಟ್-2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಆಗಸ್ಟ್-2025ರ ಮಾಹೆಯಲ್ಲಿ ಮಾಡಬೇಕು, ಹಾಗೂ ಸೆಪ್ಟೆಂಬರ್-2025,

ಅಕ್ಟೋಬರ್-2025 ವತ್ತು ನವೆಂಬರ್-2025ರ ಸ್ವಯಂ ಘೋಷಣೆಯನ್ನು ನವೆಂಬರ್-2025ರ ಮಾಹೆಯಲ್ಲಿ ಮಾಡಬೇಕು ಮತ್ತು ಡಿಸೆಂಬರ್-2025, ಜನೇವರಿ-2026, ಪಬ್ರವರಿ-2026ರ ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಫೆಬ್ರವರಿ -2026ರ ಮಾಹೆಯಲ್ಲಿ ನೀಡಬೇಕು. ಮತ್ತು ಸೇವಾ ಸಿಂಧು ಪೋರ್ಟಲ್ ಲಾಗಿನ್ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372-220609. ಗೆ ಸಂಪರ್ಕಿಸಬಹುದು.

# ಜಾಗರ ಹೋಬಳಿಗೆ 20 ಕೋಟಿ ರೂ.ಗಳ ಅನುದಾನ

**ಚಿಕ್ಕಮಗಳೂರು:** ಈ ಕ್ಷೇತ್ರದ ಜಾಗರ ಹೋಬಳಿಯೊಂದಕ್ಕೆ ಅಭಿವೃದ್ಧಿ ಕಾಮಗಾರಿಗಳಿಗೆ 21 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದ್ದು, ಕಾಮಗಾರಿ ಆರಂಭವಾಗಿದೆ ಎಂದು ಚಿಕ್ಕಮಗಳೂರು ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ತಿಳಿಸಿದರು.

ಜಾಗರ ಹೋಬಳಿಯ ಶಿರವಾಸೆ ಹಾಗೂ ಮೇಲಿನಹುಲುವತ್ತಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸೋಮವಾರ ನಡೆದ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಸಬಾ, ಲಕ್ಯಾ, ಸಖರಾಯಪಟ್ಟಣ, ದೇವನೂರು ಕ್ಷೇತ್ರಕ್ಕೆ 20 ಕೋಟಿ ರೂ.ಗಳಿಗೂ ಕಡಿಮೆ ಅನುದಾನವನ್ನು ಒದಗಿಸಲಾಗಿದೆ. ಜಾಗರ ಹೋಬಳಿಯೊಂದಕ್ಕೆ ಆದರೆ ಒಟ್ಟು 21 ಕೋಟಿ ರೂ.ಗಳಲ್ಲಿ 13 ಕೋಟಿ ರೂ.ಗಳನ್ನು ವಿಸ್ತೀರ್ಣ ದೊಡ್ಡದಾಗಿರುವ ಶಿರವಾಸೆ ಗ್ರಾ.ಪಂ. ಗೆ ನೀಡಲಾಗಿದ್ದು, ಕಡಿಮೆ ವಿಸ್ತೀರ್ಣವಿರುವ ಮೇಲಿನ ಹುಲುವತ್ತಿಗೂ ಉಳಿದ ಹಣ ಬಿಡುಗಡೆ ಮಾಡಲಾಗಿದ್ದು, ಈಗಾಗಲೇ ಕಾಮಗಾರಿಗಳನ್ನು ಆರಂಭಿಸಲಾಗಿದೆ. ಹೆಚ್ಚಿನ ಅವಶ್ಯಕತೆ ಇರುವಲ್ಲಿಗೆ ಪ್ರಥಮ ಆದ್ಯತೆ ನೀಡಿ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಹೇಳಿದರು.ಜಾಗರದಿಂದ ನೆತ್ತಿಚೌಕದವರೆಗೆ ಐದು ಕೋಟಿ ರೂ.ನ ರಸ್ತೆ ಕಾಮಗಾರಿಗೆ ಇಂದು ಶಂಕುಸ್ಥಾಪನೆ ನೆರವೇರಿಸಲಾಗಿದೆ. ಕೆಲವೇ ದಿನಗಳಲ್ಲಿ ಹೊಂಡದಕಾನ್ವರೆಗೆ 5 ಕೋಟಿ ರೂ.ವೆಚ್ಚದ ಪಿಡಬ್ಲ್ಯುಡಿ ರಸ್ತೆ ನಿರ್ಮಾಣವಾಗಲಿದೆ. ಹೊನ್ನಾಳದಿಂದ ಗಾಳಿಗುಡ್ಡದವರೆಗಿನ 2 ಕೋಟಿ ರೂ.ವೆಚ್ಚದ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿದೆ ಇಲ್ಲಿಂದ ಮುಂದುವರಿದ ಭಾಗಕ್ಕೂ ಒಂದೊಂದು ಕೋಟಿ ರೂ.ನ ಎರಡು ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. 25 ಲಕ್ಷ ರೂ.ಗಳ ಶಿರವಾಸೆ ಕಾಂಕ್ರೀಟ್ ರಸ್ತೆ ಈಗಾಗಲೇ ಉದ್ಘಾಟಿಸಲಾಗಿದೆ. ಮೇಲಿನ ಹುಲುವತ್ತಿ ಗ್ರಾ.ಪಂ.ವ್ಯಾಪ್ತಿಯ 40 ಲಕ್ಷ ರೂ. ವೆಚ್ಚದ ಸೇತುವೆಯನ್ನು ಉದ್ಘಾಟಿಸಲಾಗಿದೆ. ಹೊನ್ನಾಳದಿಂದ ಸಿದ್ದರಬಾನುವರೆಗಿನ ಕಾಂಕ್ರೀಟ್ ರಸ್ತೆ ಕಾಮಗಾರಿಯನ್ನು 2 ಕೋಟಿ ರೂ.ವೆಚ್ಚದಲ್ಲಿ ಕೈಗೊಳ್ಳಲಾಗಿದೆ. ಇವಲ್ಲದೆ 5, 10, 20 ಲಕ್ಷ ರೂ. ಗಳ ಸಣ್ಣ ಸಣ್ಣ ರಸ್ತೆ ಕಾಮಗಾರಿಗಳನ್ನು ಕೂಡ ಕೈಗೆತ್ತಿಕೊಳ್ಳಲಾಗಿದೆ. ಬಿಲ್ಲವ ಸಮುದಾಯದ ಸಮುದಾಯ ಭವನ ಮುಕ್ತಾಯಗೊಳಿಸಲು 10 ಲಕ್ಷ ರೂ.ಗಳನ್ನು ಒದಗಿಸಲಾಗಿದೆ. ಅಗತ್ಯವಿದ್ದಲ್ಲಿ ಇನ್ನೂ ಹೆಚ್ಚಿನ ಅನುದಾನ ನೀಡುವುದಾಗಿ ತಿಳಿಸಿದರು.

ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ಬೆನ್ನತ್ತಿ ನಗರಕ್ಕೆ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಹುಡುಕಿಕೊಂಡು ಹೋಗುವ ಪರಿಸ್ಥಿತಿ ಆಗಬಾರದು.

2023ರಲ್ಲಿ ರಾಜ್ಯದಲ್ಲಿ ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ರಾಜ್ಯಮಟ್ಟದಲ್ಲಿ ಮುಖ್ಯಮಂತ್ರಿಗಳು, ಎಲ್ಲಾ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ತಮ್ಮ ಕ್ಷೇತ್ರದಲ್ಲಿ, ತಾಲ್ಲೂಕು ಮಟ್ಟದಲ್ಲಿ ಹಾಗೂ ಹೋಬಳಿ ಮಟ್ಟದಲ್ಲಿ ಶಾಸಕರು ಜನಸಂಪರ್ಕ ಸಭೆಗಳನ್ನು ನಡೆಸಬೇಕೆಂಬ ಉದ್ದೇಶದಿಂದ ಈ ಕಾರ್ಯಕ್ರಮ ಆರಂಭ ಮಾಡಲಾಯಿತು. ಸ್ಥಳೀಯ ಮಟ್ಟದಲ್ಲಿ ಸಮಸ್ಯೆ ಬಗೆಹರಿಸಿದರೆ ರಾಜ್ಯಮಟ್ಟಕ್ಕೆ ಹೋಗುವ ಪರಿಸ್ಥಿತಿ ಒದಗುವುದಿಲ್ಲ ಎಂದು ಎನ್ನುವ ಕಾರಣಕ್ಕಾಗಿ. ತಾ.ಪಂ. ಕಾರ್ಯ ನಿರ್ವಹಣಾಧಿಕಾರಿ ವಿಜಯಕುಮಾರ್, ಶಿರವಾಸೆ ಗ್ರಾ.ಪಂ ಉಪಾಧ್ಯಕ್ಷೆ ರಾಧ, ಮೇಲಿನ ಹುಲುವತ್ತಿ ಗ್ರಾ.ಪಂ.ಉಪಾಧ್ಯಕ್ಷೆ ಕೆ.ಸಿ.ಭಾರತಿ, ಸದಸ್ಯರಾದ ಪ್ರೇಮಾಕ್ಷಿ ಎಸ್.ಅಮೀನ್, ದಾಕ್ಷಾಯಿಣಿ, ಶಿರವಾಸೆ ಗ್ರಾ.ಪಂ. ಸದಸ್ಯರಾದ ವಿಮಲಾ, ಪಾರ್ವತಿ, ಎಸ್. ಉಮಾ,,, ಮೇಲಿನ ಹುಲುವತ್ತಿ ಗ್ರಾಪಂ ಸದಸ್ಯೆ ಶಾರದಾಂಬ, ಬಾಬು, ತಾಲ್ಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.


# ದೇಶದಲ್ಲಿ ಬಂಜೆತನ ಹೆಚ್ಚಳ

## ಶೇ.50 ರಷ್ಟು ಕೇಸ್ ಗಳಿಗೆ ಪುರುಷರಲ್ಲಿನ ಸಮಸ್ಯೆಗಳೇ ಕಾರಣ

ಬೆಂಗಳೂರು: ಕಳೆದೊಂದು ದಶಕದಲ್ಲಿ ಪ್ರಮುಖವಾಗಿ ಯುವಕರಲ್ಲಿ ಬಂಜೆತನ ಪ್ರಕರಣಗಳು ನಿರಂತರವಾಗಿ ಹೆಚ್ಚಾಗುತ್ತಿದೆ. ಶೇ. 40-50 ರಷ್ಟು ಬಂಜೆತನ ಪ್ರಕರಣಗಳು ಪುರುಷರ ಅಂಶಗಳೊಂದಿಗೆ ಸಂಬಂಧ ಹೊಂದಿವೆ ಎಂದು ಸಮಗ್ರ ಬಂಜೆತನದ ಕಾನ್ಕ್ಲೇವ್ (ಅಖಅ) 2025 ರ ಸಂಘಟನಾ ಅಧ್ಯಕ್ಷ ಡಾ.ಪ್ರವೀಣ್ ಜೋಶಿ ಹೇಳಿದರು.

ಭಾನುವಾರ ಗ್ಲೋಬಲ್ ಹೆಲ್ತ್‌ಕೇರ್ ಅಕಾಡೆಮಿ ನಗರದಲ್ಲಿ ಆಯೋಜಿಸಿದ್ದ ಅಖಅ 2025 ರಲ್ಲಿ ಮಾತನಾಡಿದ ಅವರು, ಭಾರತದಲ್ಲಿ ದಂಪತಿಗಳಲ್ಲಿ ಬಂಜೆತನವು ಆತಂಕಕಾರಿಯಾಗಿ ಹೆಚ್ಚಾಗುತ್ತಿರುವುದರಿಂದ ಆರಂಭಿಕ ರೋಗನಿರ್ಣಯ ಮತ್ತು ಸಮಗ್ರ ಫಲವತ್ತತೆಯ ಆರೈಕೆಯ ಅಗತ್ಯವನ್ನು ತಜ್ಞರು ಒತ್ತಿ ಹೇಳುತ್ತಿದ್ದಾರೆ. ಆರಂಭಿಕ ರೋಗನಿರ್ಣಯ ಮತ್ತು ಸಮಗ್ರ ಫಲವತ್ತತೆಯ ಆರೈಕೆಗೆ ಗಮನ ನೀಡಬೇಕು ಎಂದರು.

ಬಂಜೆತನ ಹೆಚ್ಚಳಕ್ಕೆ ಕಾರಣಗಳು: ನಗರ ಪ್ರದೇಶಗಳಲ್ಲಿ ಬಂಜೆತನದ ಹೆಚ್ಚುತ್ತಿರುವ ಕುರಿತು ಪ್ರತಿಕ್ರಿಯಿಸಿದ ಡಾ. ಜೋಶಿ, ಕಡಿಮೆ ವೀರ್ಯಾಣು ಹಾಗೂ ವೀರ್ಯಗಳ ಕಡಿಮೆ ಚಲನಶೀಲನತೆ,



ಹಾರ್ಮೋನುಗಳ ಅಸಮತೋಲನ, ಆನುವಂಶಿಕತೆ, ಧೂಮಪಾನ, ಅತಿಯಾದ ಮದ್ಯಪಾನ, ಸ್ಥೂಲಕಾಯತೆ ಮತ್ತು ಶಾಖ,ವಿಕಿರಣಕ್ಕೆ ಹೆಚ್ಚಿನ ಕಾಲ ಒಡ್ಡಿಕೊಳ್ಳುವುದು ಮುಂತಾದ ಜೀವನಶೈಲಿ ಪುರುಷ ಬಂಜೆತನದ ಹೆಚ್ಚಳಕ್ಕೆ ಕಾರಣವಾಗಿವೆ.

ಅಲ್ಲದೇ, ಬೆಂಗಳೂರಿನಂತಹ ನಗರಗಳಲ್ಲಿ ಹೆಚ್ಚುತ್ತಿರುವ ಮಾಲಿನ್ಯ ಮಟ್ಟ ವೀರ್ಯದ ಆರೋಗ್ಯ ಕ್ಷೀಣಿಸುವುದಕ್ಕೆ ಸಂಬಂಧಿಸಿದೆ ಎಂದು ಡಾ. ಪ್ರವೀಣ್ ಹೇಳಿದರು.

ಕರ್ನಾಟಕದಲ್ಲಿ ಶೇ. 5.9 ರಷ್ಟು ವಿವಾಹಿತ ಮಹಿಳೆಯರಲ್ಲಿ ಬಂಜೆತನ: ಸ್ತ್ರೀ ಬಂಜೆತನವನ್ನು ಉದ್ದೇಶಿಸಿ ಮಾತನಾಡಿದ ಅಖಅ 2025 ರ ಸಂಘಟನಾ ಕಾರ್ಯದರ್ಶಿ ಡಾ.ಮೇಘನಾ ನ್ಯಾಪತಿ, ?2019-20ರ ರಾಷ್ಟ್ರೀಯ ಕುಟುಂಬ ಕರ್ನಾಟಕದಲ್ಲಿ ಶೇ. 5.9 ರಷ್ಟು ವಿವಾಹಿತ ಮಹಿಳೆಯರಲ್ಲಿ ಬಂಜೆತನ: ಸ್ತ್ರೀ ಬಂಜೆತನವನ್ನು ಉದ್ದೇಶಿಸಿ ಮಾತನಾಡಿದ ಅಖಅ 2025 ರ ಸಂಘಟನಾ ಕಾರ್ಯದರ್ಶಿ ಡಾ.ಮೇಘನಾ ನ್ಯಾಪತಿ, ?2019-20ರ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ -5 (ಓಈಊಖ-5) ಪ್ರಕಾರ 15-49 ವರ್ಷ ವಯಸ್ಸಿನ ಪ್ರತಿ 1,000 ವಿವಾಹಿತ ಮಹಿಳೆಯರಲ್ಲಿ ಶೇ. 18.7 ರಷ್ಟು ಮಹಿಳೆಯರ ಮೇಲೆ ಬಂಜೆತನ ಪರಿಣಾಮ ಬೀರುತ್ತದೆ. ಗೋವಾ, ಲಕ್ಷದ್ವೀಪ ಮತ್ತು ಛತ್ತೀಸ್‌ಗಢದಂತಹ ಕೆಲವು ಪ್ರದೇಶಗಳು ಇನ್ನೂ ಹೆಚ್ಚಿನ ದರಗಳನ್ನು ಹೊಂದಿವೆ. ಕರ್ನಾಟಕದಲ್ಲಿ ಸುಮಾರು ಶೇ. 5.9 ರಷ್ಟು ವಿವಾಹಿತ ಮಹಿಳೆಯರು ಬಂಜೆತನ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ನಗರ ಪ್ರದೇಶಗಳಿಗಿಂತ (ಶೇ.5.5) ತುಸು ಹೆಚ್ಚು (ಶೇ. 6.1 ರಷ್ಟು) ಮಹಿಳೆಯರು ಬಂಜೆತನ ಅನುಭವಿಸುತ್ತಿದ್ದಾರೆ ಎಂದು ಜಿಲ್ಲಾ ಮಟ್ಟದ ಗೃಹಿಣಿಯರ ಸರ್ವೆ (ಆಐಊಖ) ತೋರಿಸಿದೆ. ಈ ವ್ಯತ್ಯಾಸಗಳು ವಿವಿಧ ಪ್ರದೇಶಗಳಲ್ಲಿನ ಮಹಿಳೆಯರಿಗೆ ಸಂತಾನೋತ್ಪತ್ತಿ ಆರೋಗ್ಯವನ್ನು ಸುಧಾರಿಸುವ ತುರ್ತು ಅಗತ್ಯವನ್ನು ತೋರಿಸಿವೆ ಎಂದು ಅವರು ಹೇಳಿದರು.

ಸಾಮಾಜಿಕ ಕಟ್ಟುಪಾಡು ತೊಡೆದುಹಾಕಬೇಕು: ಸಂತಾನೋತ್ಪತ್ತಿ ವೈದ್ಯಶಾಸ್ತ್ರದಲ್ಲಿ ಅನೇಕ ಸಂಶೋಧನೆಗಳ ಹೊರತಾಗಿಯೂ, ಬಂಜೆತನವು ವಿಶೇಷವಾಗಿ ಪುರುಷರಲ್ಲಿ ಕಳಂಕಿತ ಮತ್ತು ಕಡಿಮೆ ರೋಗನಿರ್ಣಯದ ಸಮಸ್ಯೆಯಾಗಿ ಉಳಿದಿದೆ. ಬಂಜೆತನ ಕುರಿತ ಸಾಮಾಜಿಕ ಕಟ್ಟುಪಾಡುಗಳನ್ನು ತೊಡೆದುಹಾಕಬೇಕಾದ ಅಗತ್ಯವಿದೆ ಎಂದು ಹೆಲ್ತ್‌ಕೇರ್ ಗ್ಲೋಬಲ್ ಎಂಟರ್‌ಪ್ರೈಸಸ್ ಲಿಮಿಟೆಡ್‌ನ ಕಾರ್ಯನಿರ್ವಾಹಕ ಅಧ್ಯಕ್ಷ ಡಾ ಬಿ ಎಸ್ ಅಜೈಕುಮಾರ್ ಹೇಳಿದರು.

### ಸಂಡೂರು ನಿವಾಸಿಗಳಿಗೆ ಸಂಕಷ್ಟ ತಂದೊಡ್ಡಿದ ಗಣಿಗಾರಿಕೆ:

# ಧೂಳಿನ ಮಜ್ಜನ; ನೀರು, ನೈರ್ಮಲ್ಯದ ಸಮಸ್ಯೆ ತಾಂಡವ...!



ಬೆಂಗಳೂರು: ಹೆಚ್ಚುತ್ತಿರುವ ವಾಯು ಮಾಲಿನ್ಯ, ಶ್ವಾಸಕೋಶ ತಜ್ಞರು ಮತ್ತು ಆರೋಗ್ಯ ಸೌಲಭ್ಯಗಳ ಕೊರತೆ ಮತ್ತು ಸರಿಯಾದ ಗಾಳಿಯ ಗುಣಮಟ್ಟ ಮೇಲ್ವಿಚಾರಣಾ ಸೌಲಭ್ಯದ ಸಮಸ್ಯೆಯಿಂದಾಗಿ ಬಳ್ಳಾರಿ ಜಿಲ್ಲೆಯ ಸಂಡೂರಿನ ಗಣಿಗಾರಿಕೆ ಕೇಂದ್ರದ ಹೃದಯಭಾಗದಲ್ಲಿರುವ ಹಳ್ಳಿಗಳ ಜನರು ತಮ್ಮ ಉಳಿವಿಗಾಗಿ ಸ್ಥಳಾಂತರಗೊಳ್ಳುವ ಅವಶ್ಯಕತೆಯಿದೆ.

ಸಂಡೂರಿನಲ್ಲಿ ವಾಯು ಗುಣಮಟ್ಟದ ಮೇಲ್ವಿಚಾರಣಾ ಕೇಂದ್ರವಿಲ್ಲ, ಆದರೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ) ಬಳ್ಳಾರಿ ನಗರದ ಕುವೆಂಪುನಗರದಲ್ಲಿ ಹಸ್ತಚಾಲಿತವಾಗಿ ನಿರ್ವಹಿಸುವ ಒಂದು ಕೇಂದ್ರವು ಸಂಡೂರಿನಿಂದ ಸುಮಾರು 50 ಕಿ.ಮೀ ದೂರದಲ್ಲಿದೆ. ಪ್ರಾದೇಶಿಕ ಪ್ರಯೋಗಾಲಯವು ಸಂಡೂರಿನಿಂದ ಸುಮಾರು 200 ಕಿ.ಮೀ ದೂರದಲ್ಲಿರುವ ರಾಯಚೂರಿನಲ್ಲಿ ದತ್ತಾಂಶ ನಿರ್ವಹಿಸಲಾಗುತ್ತದೆ.

ಸಂಡೂರಿನಲ್ಲಿ ಸ್ವಯಂಚಾಲಿತ ವಾಯು ಮಾಲಿನ್ಯ ಮೇಲ್ವಿಚಾರಣಾ ಕೇಂದ್ರ ಸ್ಥಾಪಿಸುವ ಪ್ರಸ್ತಾಪವನ್ನು ಅನುಮೋದಿಸಲಾಗಿದೆ, ಆದರೆ ಅದನ್ನು ಇನ್ನೂ ಸ್ಥಾಪಿಸಲಾಗಿಲ್ಲ ಎಂದು ಕೆಎಸ್‌ಪಿಸಿಬಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲಾ ಆಸ್ಪತ್ರೆಯ ಶಸ್ತ್ರಚಿಕಿತ್ಸಕ ಡಾ. ಬಸಾ ರೆಡ್ಡಿ ಎನ್, ಸಂಡೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಉಸಿರಾಟದ ತೊಂದರೆಗಳು ಮತ್ತು ಶ್ವಾಸಕೋಶದ ಸೋಂಕಿನ ಬಗ್ಗೆ ದೂರು ನೀಡುವ ಜನರ ಸಂಖ್ಯೆ ಹೆಚ್ಚುತ್ತಿದೆ ಎಂದು ಹೇಳಿದರು.

ಅಲರ್ಜಿ ಮತ್ತು ಶ್ವಾಸಕೋಶದ ಸೋಂಕಿನ ಬಗ್ಗೆ ದೂರು ನೀಡುವ ಜನರ ಪ್ರಕರಣಗಳು ಹೆಚ್ಚುತ್ತಿವೆ. ಉಸಿರಾಟದ ಸೋಂಕಿನಿಂದ ಬಳಲುತ್ತಿರುವ ಜನರನ್ನು ಪರೀಕ್ಷಿಸಲು ಮತ್ತು ಚಿಕಿತ್ಸೆ ನೀಡಲು ವಿಶೇಷ ಉಪಕರಣಗಳ ಅವಶ್ಯಕತೆಯಿದೆ. ಆದರೆ ಜಿಲ್ಲೆಯ ಆಸ್ಪತ್ರೆಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಿಟ್ಟು, ಅಂತಹ ಸೌಲಭ್ಯಗಳಿಲ್ಲ. ನಾವು ಅವುಗಳನ್ನು ಬಳ್ಳಾರಿಗೆ ಕಳುಹಿಸಬೇಕಾಗಿದೆ" ಎಂದು ಜಿಲ್ಲಾ ಆರೋಗ್ಯ ಅಧಿಕಾರಿಯೊಬ್ಬರು ಹೇಳಿದರು.

ವಾಯು ಮೇಲ್ವಿಚಾರಣಾ ಕೇಂದ್ರವು ಸಂಡೂರಿನಿಂದ ತುಂಬಾ ದೂರದಲ್ಲಿರುವುದರಿಂದ, ಏಖಕಅಃ ಸಿದ್ಧಪಡಿಸಿದ ವರದಿಯು ವಾಯು ಗುಣಮಟ್ಟ ಸೂಚ್ಯಂಕ (ಂಕಿಖ) "ಉತ್ತಮ" ಮತ್ತು "ತೃಪ್ತಿದಾಯಕವಾಗಿದೆ ಎಂದು ತೋರಿಸುತ್ತದೆ. ಸಂಡೂರು ಮತ್ತು ಸುತ್ತಮುತ್ತಲಿನ ಜನರು ಯಾವ ವಾಯು ಮಾಲಿನ್ಯಕ್ಕೆ ಒಳಗಾಗುತ್ತಾರೆ ಎಂಬುದರ ನಿಖರವಾದ ಸ್ಥಿತಿಯನ್ನು ಇದು ನೀಡುವುದಿಲ್ಲ ಎಂದು ತಿಳಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಕರ್ನಾಟಕ ಗಣಿಗಾರಿಕೆ ಪರಿಸರ ಪುನಃಸ್ಥಾಪನೆ ನಿಗಮದ (ಕೆಎಂಇಆರ್‌ಸಿ) ಅಧಿಕಾರಿಯೊಬ್ಬರು ಗಣಿಗಾರಿಕೆ ಪರಿಣಾಮ ವಲಯಕ್ಕಾಗಿ ಸಮಗ್ರ ಪರಿಸರ ಯೋಜನೆ (ಸಿಇಪಿಎಂಐಜೆಡ್) ಪ್ರಕಾರ ಯೋಜನೆಗಳ ಕಾಮಗಾರಿಗಳಿಗೆ ಕೆಎಂಇಆರ್‌ಸಿ ಅನುಮೋದನೆ ನೀಡುತ್ತಿದೆ, ಆದರೆ ಹುದ್ದೆಗಳನ್ನು ಮಂಜೂರು ಮಾಡುವಲ್ಲಿನ ಹಣಕಾಸಿನ ಸಮಸ್ಯೆಗಳಿಂದಾಗಿ ಆರೋಗ್ಯ ಕಾರ್ಯಕ್ರಮಗಳು ವಿಳಂಬವಾಗುತ್ತಿವೆ. ಕೆಎಂಇಆರ್‌ಸಿಯ ಆದ್ಯತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು, ಆದರೆ ಯಾವುದೇ ವೈದ್ಯರಿಗೆ ಅನುಮತಿ ನೀಡದ ಕಾರಣ ನಾವು ಅದನ್ನು ಮಾಡಲು ಸಾಧ್ಯವಾಗುತ್ತಿಲ್ಲ. ತಾಲ್ಲೂಕು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯೂ ಇದೆ, ಆದರೆ ವಿಶೇಷವಾಗಿ ಶ್ವಾಸಕೋಶಶಾಸ್ತ್ರಜ್ಞರು ಕೊರತೆಯಿದೆ ಎಂದಿದ್ದಾರೆ.

ಭಾರತದ ಕಬ್ಬಿಣದ ಅದಿರಿನ ಸುಮಾರು ಶೇ. 30 ರಷ್ಟು ಬಳ್ಳಾರಿಯಿಂದ ಬರುತ್ತದೆ. ಪ್ರತಿ ದಿನ ಆರರಿಂದ ಏಳು ಮಿಲಿಯನ್ ಟನ್‌ಗಳನ್ನು ರಸ್ತೆಯ ಮೂಲಕ ಸಾಗಿಸಲಾಗುತ್ತದೆ. ಡಾಂಬರು ಹಾಕದ ಮತ್ತು ಕಳಪೆಯಾಗಿ ನಿರ್ವಹಿಸಲಾದ ರಸ್ತೆಗಳ ಮೂಲಕ ಚಲಿಸುವ ಭಾರೀ ಅದಿರನ್ನು ಸಾಗಿಸುವ ಟ್ರಕ್‌ಗಳಿಂದ ಬರುವ ಧೂಳು ಸುತ್ತಲೂ ಹಾರುವುದರಿಂದ ಆತಂಕಕ್ಕೆ ಕಾರಣವಾಗಿದೆ. ಗಣಿ ಪ್ರದೇಶಗಳ 500–1,000 ಮೀಟರ್ ವ್ಯಾಪ್ತಿಯಲ್ಲಿ ವಾಸಿಸುವ ಜನರು ಮಾತ್ರವಲ್ಲ, ಕಿಲೋಮೀಟರ್ ಕೆಳಗೆ ವಾಸಿಸುವವರು ಸಹ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ ಎಂದು ಕೆಎಂಇಆರ್‌ಸಿ ಅಧಿಕಾರಿಯೊಬ್ಬರು ಹೇಳಿದರು.

ಇದು ಹಲವು ವರ್ಷಗಳಿಂದ ನಡೆಯುತ್ತಿದೆ. ಸುಪ್ರೀಂ ಕೋರ್ಟ್ ಅಧಿಕಾರಿಗಳಿಗೆ ಗಣಿಗಾರಿ–ಕೆ ಪ್ರದೇಶಗಳ ಸುತ್ತಮುತ್ತಲಿನ ಹಳ್ಳಿಗಳ ಜೀವನ ಮಟ್ಟವನ್ನು ಸುಧಾರಿಸಲು ಮತ್ತು ಸೌಲಭ್ಯಗಳನ್ನು ಒದಗಿಸಲು ನಿರ್ದೇಶಿಸಿದ ನಂತರ 2022 ರಲ್ಲಿ ಅಇಕಒಖಚ ಅನುಮೋದಿಸಲಾಯಿತು.

2022–23 ರಲ್ಲಿ ಮೇಲ್ವಿಚಾರಣಾ ಪ್ರಾಧಿಕಾರವನ್ನು ಸಹ ರಚಿಸಲಾಯಿತು ಮತ್ತು ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶ ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರನ್ನು ಅದರ ಮುಖ್ಯಸ್ಥರನ್ನಾಗಿ ನೇಮಿಸಲಾಯಿತು. ಅಲ್ಲದೆ, ಯೋಜನೆಗಳನ್ನು ಕಾರ್ಯಗತಗೊಳಿಸಲು ಏಒಇಖಅ ಗೆ 24,996.71 ಕೋಟಿ ರೂ.ಗಳನ್ನು ಹಂಚಿಕೆ ಮಾಡಲಾಯಿತು.

ಸಂಡೂರು ಗಣಿಗಾರಿಕೆ ಕಾರ್ಯಾಚರಣೆಗಳ ಬಗ್ಗೆ ತಿಳಿದಿರುವ ಆದರೆ ಹೆಸರು ಬಹಿರಂಗಪಡಿಸಲು ಇಚ್ಛಿಸದ ನಿವೃತ್ತ ಅರಣ್ಯ ಇಲಾಖೆಯ ಅಧಿಕಾರಿಯೊಬ್ಬರು ಹೀಗೆ ವಿವರಿಸಿದ್ದಾರೆ. ಗಾಳಿಯ ಗುಣಮಟ್ಟವನ್ನು ಮೇಲ್ವಿಚಾರಣೆ ಮಾಡುವಲ್ಲಿ ಮತ್ತು ಗಣಿಗಾರಿಕೆ ಪ್ರದೇಶಗಳ ಸುತ್ತಮುತ್ತಲಿನ ಗ್ರಾಮಸ್ಥರಿಗೆ ಸೌಲಭ್ಯಗಳನ್ನು ಒದಗಿಸುವಲ್ಲಿ ಸುಪ್ರೀಂ ಕೋರ್ಟ್ ನಿರ್ದೇಶನಗಳ ಸ್ಪಷ್ಟ ಉಲ್ಲಂಘನೆಯಾಗಿದೆ.

ಈ ಪ್ರದೇಶದಲ್ಲಿ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ (ಸಿಪಿಸಿಬಿ) ಮೇಲ್ವಿಚಾರಣಾ ಕೇಂದ್ರವಿಲ್ಲದಿರುವುದು ಆಶ್ಚರ್ಯಕರವಾಗಿದೆ. ಒಟ್ಟಾರೆಯಾಗಿ, ಗಣಿಗಾರಿಕೆ ನಡೆಯುವ ನಾಲ್ಕು ಜಿಲ್ಲೆಗಳಾದ ಬಳ್ಳಾರಿ, ಚಿತ್ರದುರ್ಗ, ವಿಜಯನಗರ ಮತ್ತು ತುಮಕೂರಿನ 10 ತಾಲ್ಲೂಕುಗಳ 1,730 ಗ್ರಾಮಗಳು ನೇರವಾಗಿ ಅಇಕಒಖಚ (ಗಣಿಗಾರಿಕೆ ಪರಿಣಾಮ ವಲಯಕ್ಕಾಗಿ ಸಮಗ್ರ ಪರಿಸರ ಯೋಜನೆ) ನಿಯಮಗಳ ಅಡಿಯಲ್ಲಿದೆ.

### ಉಪಲೋಕಾಯುಕ್ತರು ಜಿಲ್ಲೆಗೆ ಭೇಟಿ:

## ಸಾರ್ವಜನಿಕರಿಂದ ನೇರ ದೂರು ಅರ್ಜಿ ಸ್ವೀಕಾರ



ದಾವಣಗೆರೆ : ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಏಪ್ರಿಲ್ 22 ರಿಂದ 26 ರವರೆಗೆ ಐದು ದಿನಗಳ ಕಾಲ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಏಪ್ರಿಲ್ 24 ರಂದು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಸಾರ್ವಜನಿಕರಿಂದ ನೇರವಾಗಿ ದೂರು ಅರ್ಜಿಗಳನ್ನು ಸ್ವೀಕರಿಸುವರು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದರು.

ಮಂಗಳವಾರ (ಏ.15) ರಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲಿ ಉಪಲೋಕಾಯುಕ್ತರ ಭೇಟಿ ಹಿನ್ನಲೆಯಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಏಪ್ರಿಲ್ 23 ರಂದು ವಿವಿಧ ಸ್ಥಳಗಳ ವೀಕ್ಷಣೆ ಹಾಗೂ ಇಲಾಖೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಏ.24 ರಂದು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಮ.1.30 ಹಾಗೂ ಮ.2.30 ರಿಂದ ಸಂಜೆ 5 ಗಂಟೆಯವರೆಗೆ ಸಾರ್ವಜನಿಕರಿಂದ ದೂರು ಹಾಗೂ ಅಹವಾಲು ಸ್ವೀಕರಿಸಿ ನೇರವಾಗಿ ವಿಚಾರಣೆ ನಡೆಸುವರು. ಏ.25 ರಂದು ವಿವಿಧ ಇಲಾಖೆಗಳಿಗೆ ಭೇಟಿ ನೀಡಿ ತುಂಗಭದ್ರಾ ಸಭಾಂಗಣದಲ್ಲಿ ಲೋಕಾಯುಕ್ತದಲ್ಲಿ ಬಾಕಿ ಇರುವ ಬಾಕಿ ಪ್ರಕರಣಗಳನ್ನು ದೂರುದಾರರ ಸಮಕ್ಷಮದಲ್ಲಿ ನೇರವಾಗಿ ವಿಚಾರಣೆ ನಡೆಸುವರು.

ಸಾರ್ವಜನಿಕರು ಸರ್ಕಾರಿ ಇಲಾಖೆಗಳಲ್ಲಿ ಸಲ್ಲಿಸಿದ ಅರ್ಜಿಗಳನ್ನು ವಿಲೆಮಾಡದೇ ಬಾಕಿ ಇಟ್ಟಿರುವ ಬಗ್ಗೆ ಮತ್ತು ದುರಾಡಳಿತ, ಕರ್ತವ್ಯ ನಿರ್ವಹಣೆಯಲ್ಲಿ ವಿಫಲತೆ, ಯೋಜನೆಗಳು ಮತ್ತು ಸೌಲಭ್ಯಗಳನ್ನು ತಲುಪಿಸುವಲ್ಲಿ ವಿಫಲತೆ ಮತ್ತು ಅವ್ಯಹಾರಕ್ಕೆ ಸಂಬಂಧಿಸಿದ ಅರ್ಜಿಗಳನ್ನು ಸಲ್ಲಿಸಬಹುದು. ದೂರು ನೀಡಲು ಆಗಮಿಸುವ ಸಾರ್ವಜನಿಕರಿಗೆ ಪ್ರತ್ಯೇಕ ಕೌಂಟರ್‌ಗಳನ್ನು ಸ್ಥಾಪಿಸಿ ಸ್ವೀಕರಿಸಲಾಗುತ್ತದೆ. ಮತ್ತು ಸಾರ್ವಜನಿಕರಿಗೆ ಊಟ, ಆಸನದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. ಯಾವುದೇ ಆತಂಕವಿಲ್ಲದೆ ತಮ್ಮ ಕುಂದುಕೊರತೆ ಅರ್ಜಿಗಳನ್ನು ನೀಡಬಹುದಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್.ಕೌಲಾಪೂರೆ, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಮತಾ ಹೊಸಗೌಡರ್ ಉಪಸ್ಥಿತರಿದ್ದರು.

## ಮದಗದ ಕೆರೆ ಅಕ್ರಮ ಮಣ್ಣು ಮಾರಾಟ ತಡೆಗಟ್ಟಲು ಜಿಲ್ಲಾಡಳಿತಕ್ಕೆ ಮನವಿ



ಚಿಕ್ಕಮಗಳೂರು: ಕಡೂರು ತಾಲೂಕು ಮದಗದ ಕೆರೆಯ ಮಣ್ಣಿನ ಅಕ್ರಮ ಮಾರಾಟವನ್ನು ತಡೆಗಟ್ಟುವಂತೆ ಕರ್ನಾಟಕ ಮಾಹಿತಿ ಹಕ್ಕು ಕಾರ್ಯಕರ್ತರ ಸಂಘಟನೆ ಜಿಲ್ಲಾಡಳಿತವನ್ನು ಒತ್ತಾಯಿಸಿದೆ.

ರಾಜ್ಯಾಧ್ಯಕ್ಷ ಸೋಮುನಾಯಕ್ ಅವರೊಂದಿಗೆ ಅಪರ ಜಿಲ್ಲಾಧಿಕಾರಿ ನಾರಾಯಣರೆಡ್ಡಿ ಕನಕರಡ್ಡಿ ಅವರನ್ನು ಇಂದು ಭೇಟಿ ಮಾಡಿದ ಸಂಘಟನೆಯ ಪದಾಧಿಕಾರಿಗಳು ಈ ಸಂಬಂಧ ಮನವಿ ಸಲ್ಲಿಸಿದರು.

ರೈತರೆಂದು ಹೇಳಿಕೊಳ್ಳುವ ಹಲವರು ಮದಗದ ಕೆರೆಯ ಪಾತ್ರದ ಭೂಮಿಯನ್ನು ಬಗೆದು ಮಣ್ಣನ್ನು ಟ್ರ್ಯಾಕ್ಟರ್ ಮತ್ತು ಲಾರಿಗಳಲ್ಲಿ ಸಾಗಿಸಿ ಮಾರಾಟ ಮಾಡುತ್ತಿದ್ದಾರೆ. ಈ ದಂಧೆ ಹಗಲು, ರಾತ್ರಿ ಎನ್ನದೇ ಹಲವಾರು ದಿನಗಳಿಂದ ನಿರಂತರವಾಗಿ ನಡೆಯುತ್ತಿದೆ ಎಂದು ದೂರಿದರು.

ಭೂಮಿಯನ್ನು ಬಗೆದು ಮಣ್ಣನ್ನು ಸಾಗಿಸುತ್ತಿರುವುದರಿಂದಾಗಿ ಮದಗದಕೆರೆಯ ಪಾತ್ರದಲ್ಲಿ ಅಲ್ಲಲ್ಲಿ ದೊಡ್ಡದೊಡ್ಡ ಗುಂಡಿಗಳಾಗಿದ್ದು, ಅದರಲ್ಲಿ ಮಕ್ಕಳು, ಜನ, ಜಾನುವಾರುಗಳು ಬಿದ್ದು, ಜೀವ ಕಳೆದುಕೊಳ್ಳುತ್ತಿದ್ದಾರೆ ಎಂದರು.

ಅಕ್ರಮ ಮಣ್ಣುಗಾರಿಕೆಯಿಂದಾಗಿ ಕೆರೆಯ ಪಾತ್ರ ಬರಿದಾಗುತ್ತಿದೆ, ಯಾವುದೇ ಪರವಾನಗಿ ಅಥವಾ ಅನುಮತಿ ಇಲ್ಲದೇ ಕೆರೆಯ ಭೂಮಿಯನ್ನು ಬಗೆದು ಮಣ್ಣನ್ನು ಮಾರಾಟ ಮಾಡಲಾಗುತ್ತಿದೆ ಎಂದು ಆರೋಪಿಸಿದ ಪದಾಧಿಕಾರಿಗಳು, ಮಳೆಗಾಲದ ವೇಳೆ ಅನಾಹುತಗಳು ಸಂಭವಿಸುವ ಮುನ್ನ ಜಿಲ್ಲಾಡಳಿತ ಈಗಲಾದರೂ ಎಚ್ಚೆತ್ತುಕೊಳ್ಳಬೇಕು. ಮಣ್ಣಿನ ಅಕ್ರಮ ಮಾರಾಟವನ್ನು ತಕ್ಷಣ ತಡೆಗಟ್ಟಬೇಕು ಎಂದು ಆಗ್ರಹಿಸಿದರು.

## ಜಾತಿಗಣತಿಯನ್ನು ಒಪ್ಪಲು ಸಾಧ್ಯವಿಲ್ಲ : ಕುಮಾರಸ್ವಾಮಿ

ಬೆಂಗಳೂರು,ಏ.15: ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ನೀಡಿರುವ ಜಾತಿಗಣತಿ ವರದಿ ಸಂಪೂರ್ಣ ದ್ವೇಷದ ಗಣತಿ ಹಾಗೂ ಸಿದ್ಧ ಷಡ್ಯಂತ್ರ ಎಂದು ಕಿಡಿಕಾರಿರುವ ಕೇಂದ್ರ ಕೈಗಾರಿಕೆ ಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಯಾವುದೇ ಕಾರಣಕ್ಕೂ ಇದನ್ನು ಒಪ್ಪುವುದಿಲ್ಲ ಎಂದು ಹೇಳಿದ್ದಾರೆ.

ಈ ಕುರಿತು ಹೇಳಿಕೆಯೊಂದನ್ನು ಬಿಡುಗಡೆ ಮಾಡಿರುವ ಅವರು ಇದು ಜಾತಿಗಣತಿಯೋ.. ದ್ವೇಷಗಣತಿಯೋ..? ಎಂದು ಪ್ರಶ್ನೆ ಮಾಡಿದ್ದಾರೆ.

ಅಲ್ಲದೆ, ಹಿಂದೆ ಜಾತಿ ಗಣತಿ ವರದಿಯನ್ನು ವಿರೋಧಿಸಿದ್ದ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಈಗ ಯೂಟರ್ನ್ ಹೊಡೆದಿರುವ ಬಗ್ಗೆ ವ್ಯಂಗ್ಯವಾಡಿದ್ದು, ವರದಿಯ ವಿರುದ್ಧ ಹೋರಾಟ ನಡೆಸುವುದಾಗಿ ಎಚ್ಚರಿಸಿದ್ದಾರೆ.

ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಬೆಂ.ಗ್ರಾಮಾಂತರ, ತುಮಕೂರು, ಚಿತ್ರದುರ್ಗ ಸೇರಿ ಹಳೇ ಮೈಸೂರು ಜಿಲ್ಲೆಗಳಲ್ಲಿ ವಾಸಿಸುವ ಒಕ್ಕಲಿಗ ಸಮುದಾಯದ ಸಂಖ್ಯೆ ಎಷ್ಟು? ಎಂದು ಕೇಳಿರುವ ಅವರು, ಒಕ್ಕಲಿಗ ಸಮಾಜಕ್ಕೆ ಸೇರಿದ ಅಂಕೆ–ಸಂಖ್ಯೆ ಅಷ್ಟೇ ಅಲ್ಲ, ವೀರಶೈವ ಲಿಂಗಾಯತ ಮತ್ತು ಇನ್ನಿತರ ಸಮಾಜಗಳ ಸಂಖ್ಯೆಯೂ ನನಗೆ ಅಚ್ಚರಿ ಹುಟ್ಟಿಸಿದೆ ಎಂದು ಹೇಳಿದ್ದಾರೆ

ಜಾತಿ ಗಣತಿ ಗಜಪ್ರಸವ ತಥಂಗಕ್ಕೆ ಸಂಪುಟದಲ್ಲಿ ಶಾಸ್ತ್ರೋಕ್ತವಾಗಿ ಅರಿಶಿಣ ಕಂಕುಮ ಹಚ್ಚಿ ಕಡ್ಡಿ ಹಚ್ಚಲಾಗಿದೆ. ಆ ವರದಿಯದ್ದು ಎನ್ನಲಾದ ಅಂಕಿ–ಅಂಶಗಳು ಎಲ್ಲೆಡೆ ತೇಲಾಡುತ್ತಿವೆ! ಯಾವುದೋ ಅಜ್ಞಾತ ಕೈ ಅದನ್ನು ವ್ಯವಸ್ಥಿತವಾಗಿ ತೇಲಿಬಿಟ್ಟಿದೆ ಎಂದಿದ್ದಾರೆ

## ಡಿಸಿ ಕಚೇರಿ ಎದುರಿನ ಮೈದಾನ ಸಾರ್ವಜನಿಕ ಬಳಕೆಗೆ ಮುಕ್ತ



ಶಿವಮೊಗ್ಗ: ಮಲೆನಾಡ ನಗರಿ ಶಿವಮೊಗ್ಗ ಇತ್ತೀಚಿನ ವರ್ಷಗಳಲ್ಲಿ ಸೂಕ್ಷ್ಮ ನಗರಿ ಎಂಬ ಹೆಸರನ್ನು ಪಡೆದುಬಿಟ್ಟಿದೆ. ಕೆಲವೊಮ್ಮೆ ಸಣ್ಣ ಪುಟ್ಟ ವಿಷಯಗಳು ಕೋಮು ಬಣ್ಣ ಪಡೆದು ದೊಡ್ಡ ವಿವಾದಕ್ಕೆ ನಾಂದಿ ಹಾಡಿದ್ದು ಉಂಟು. ಅಂತೆಯೆ ರಂಜಾನ್ ಹಬ್ಬದ ಪ್ರಾರ್ಥನೆ ಮುಗಿದ ಬಳಿಕ ಮಾ. 31 ರ ತಡರಾತ್ರಿ ಡಿಸಿ ಕಚೇರಿ ಎದುರು ಇರುವ ಖಾಲಿ ಜಾಗಕ್ಕೆ ದಿಢೀರ್ ಬೇಲಿ ಬಿದ್ದಿದ್ದು ವಿವಾದಕ್ಕೆ ಕಾರಣವಾಗಿತ್ತು.

ಪ್ರಕರಣ ತೀವ್ರ ವಿವಾದಕ್ಕೆ ಒಳಗಾದ ಬೆನ್ನಲ್ಲೆ, ಮರು ದಿನ ರಾತ್ರಿಯೇ ಪೊಲೀಸ್ ಬಂದೋಬಸ್ತ್‌ನಲ್ಲಿ ಪಾಲಿಕೆ ಸಿಬ್ಬಂದಿ ಬೇಲಿಯನ್ನು ತೆರವುಗೊಳಿಸಿದರು. ಅಲ್ಲದೆ ಮುನ್ನೆಚರಿಕೆ ಕ್ರಮವಾಗಿ ಬೇಲಿ ಹಾಕಿದ ಜಾಗದಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಲಾಯಿತು. ಯಾವುದೇ ಘಟನೆಗೆ ಆಸ್ಪದವಾಗದಂತೆ, ಮೈದಾನವನ್ನು ಸಂಪರ್ಕಿಸುವ ರಸ್ತೆಗಳನ್ನು ಬ್ಯಾರಿಕೇಡ್ ಬಳಸಿ ಬಂದ್ ಮಾಡಲಾಗಿತ್ತು. ಹೆಚ್ಚುವರಿ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿತ್ತು.

ವಿಶೇಷ ಅಂದರೆ ಬೇಲಿ ತೆರವು ಕಾರ್ಯಾಚರಣೆ ವೇಳೆ ಈ ಭಾಗದ ಸುತ್ತಮುತ್ತ ಸಾರ್ವಜನಿಕ ಸಂಚಾರವನ್ನು ನಿರ್ಬಂಧಿಸಲಾಗಿತ್ತು. ಅಲ್ಲದೆ ಬೀದಿ ದೀಪಗಳನ್ನು ಆರಿಸಲಾಗಿತ್ತು. ಇತ್ತ ಆಹಾರ ಉತ್ಪನ್ನಗಳ ಅಂಗಡಿಗಳು ಸೇರಿದಂತೆ ಆ ಭಾಗದ ಎಲ್ಲಾ ಅಂಗಡಿಗಳನ್ನು ಮುಚ್ಚಿಸಲಾಗಿತ್ತು. ಕೆಲ ದಿನಗಳ ಕಾಲ ಈ ಭಾಗದ ವ್ಯಾಪಾರಸ್ಥರು ನಷ್ಟ ಅನುಭವಿಸಬೇಕಾಯಿತು.

ನಡೆದಿದ್ದೇನು?

ರಂಜಾನ್ ಹಬ್ಬದ ಪ್ರಾರ್ಥನೆ ಮುಗಿದ ಬಳಿಕ, ಪ್ರಾರ್ಥನೆ ನಡೆದ ಮೈದಾನದ ಜಾಗದ ಒಂದು ಬದಿಯಲ್ಲಿ ಬೇಲಿ ಹಾಕಲಾಗಿತ್ತು. ಬೇಲಿ ಹಾಕಿದ್ದು ಯಾರು? ಈ ಬಗ್ಗೆ ಪೊಲೀಸರಿಗೆ ಮಾಹಿತಿ ಇರಲಿಲ್ಲವಾ? ಈ ವಿಚಾರದಲ್ಲಿ ಇಂಟಲಿಜೆನ್ಸಿ ವಿಫಲವಾಯಿತೆ ಎಂಬ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದವು. ಜಿಲ್ಲಾ ಉಸ್ತುವಾರಿ ಸಚಿವರು ಈ ಪ್ರಕರಣದ ಬಗ್ಗೆ ನೋ ಕಮೆಂಟ್ಸ್ ಎಂದರೆ, ಬಿಜೆಪಿ, ಹಿಂದೂಪರ ಸಂಘಟನೆಗಳು ಮತ್ತು ರಾಷ್ಟ್ರಭಕ್ತರ ಬಳಗದಿಂದ ತೀವ್ರ ಹೋರಾಟ ನಡೆದವು.

ಬೇಲಿ ಹಾಕಿದ್ದನ್ನು ಪ್ರಶ್ನಿಸಿ ಹಿಂದೂಪರ ಸಂಘಟನೆಗಳೂ ಸ್ಥಳದಲ್ಲಿ ಕುಳಿತು ಪ್ರತಿಭಟನೆ ನಡೆಸಿದ್ದರು. ಈ ವೇಳೆ ಪ್ರತಿಭಟನಾಕಾರರನ್ನು ಪೊಲೀಸರು ಸಮಾಧಾನ ಪಡಿಸಲು ಯತ್ನಿಸದರು. ಆದರೆ ಸಂಘಟನೆ ಕಾರ್ಯಕರ್ತರು, ಬೇಲಿ ತೆಗೆಯುವಂತೆ ಡೆಡ್‌ಲೈನ್ ನೀಡಿದ್ದರು. ವಿಚಾರ ತಿಳಿದು ಸ್ಥಳಕ್ಕೆ ಬಂದ ಎಸ್‌ಪಿ ಮಿಥುನ್‌ಕುಮಾರ್ ಪ್ರತಿಭಟನಾಕಾರರಿಗೆ ಸಂಜೆಯೊಳಗೆ ಬೇಲಿ ತೆರವುಗೊಳಿಸುವುದಾಗಿ ಭರವಸೆ ನೀಡಿದ್ದರು. ಬಳಿಕ ಸಂಘಟನೆ ಸದಸ್ಯರು ಪ್ರತಿಭಟನೆ ಕೈ ಬಿಟ್ಟಿದ್ದರು. ಪೋಲಿಸರು ಕತ್ತಲಾಗುತ್ತಿದ್ದಂತೆ, ಪಾಲಿಕೆ ಸಿಬ್ಬಂದಿಯನ್ನು ಬಳಸಿಕೊಂಡು ಬೇಲಿಯನ್ನು ತೆಗೆಸಿದರು.

ಇನ್ನೂ ದಿಢೀರ್ ಬೇಲಿ ಪ್ರಕರಣದಿಂದಾಗಿ ಆ ಭಾಗದಲ್ಲಿ ನಡೆಯಬೇಕಿದ್ದ ಫುಡ್ ಬ್ಯುಸಿನೆಸ್‌ಗೆ ನಷ್ಟ ಉಂಟಾಗಿತ್ತು. ಧರ್ಮಾತೀತವಾಗಿ ವ್ಯಾಪಾರಸ್ಥರು ನಡೆದ ಘಟನೆಯನ್ನು ವಿರೋಧಿಸಿದರಷ್ಟೆ ಅಲ್ಲದೆ ನಮ್ಮ ಪಾಡಿಗೆ ದುಡಿಮೆಗೆ ಬಿಟ್ಟುಬಿಡಿ, ಅಂಗಡಿಗಳನ್ನು ಮುಚ್ಚಿಸುವುದರಿಂದ ದಿನದ ವಹಿವಾಟಿಗೆ ಸಮಸ್ಯೆಯಾಗಲಿದೆ, ದಿನದ ದುಡಿಮೆಯ ಮುಂದೆ ವಿವಾದಗಳು ಅಗತ್ಯವಿಲ್ಲ ಎನ್ನುತ್ತಿದ್ದರು.

ವಿವಿಧ ಪಕ್ಷ, ಸಂಘಟನೆಗಳ ಮುಖಂಡರ ಹೇಳಿಕೆಗಳು ಈ ಬಾರಿಯೂ ವಿವಾದಕ್ಕೆ ಕಿಡಿ ಹೊತ್ತಿಸಿ ಎಲ್ಲಿ ನಗರದಲ್ಲಿ ಶಾಂತಿಗೆ ಭಂಗ ತರಲಿದೆಯೋ ಎಂಬ ಆತಂಕ ಇದೀಗ ದೂರಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ವಿವಿಧ ಸಂಘಟನೆ, ಪಕ್ಷಗಳ ಮುಖಂಡರು ಒಡಗೂಡಿ ಒಮ್ಮತದ ನಿರ್ಧಾರ ಕೈಗೊಂಡಿದ್ದು, ಏ. 10 ರಿಂದ ಮೈದಾನವನ್ನು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಲಾಗುತ್ತಿದೆ. ಈಗಾಗಲೇ ಮೈದಾನದ ಸುತ್ತ ಪೊಲೀಸ್ ಇಲಾಖೆ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿದೆ. ಅಂತೂ ಒಂದು ವಿವಾದ ಸಂಯಮದಿಂದ ಬಗೆಹರಿದಿದ್ದು, ಎಲ್ಲರು ನಿಟ್ಟುಸಿರು ಬಿಡುವಂತಾಗಿದೆ.

## ಕಂದಕ್ಕೆ ಉರುಳಿದ ಕೆಎಸ್‌ಆರ್‌ಟಿಸಿ ಬಸ್



ಚಿಕ್ಕಮಗಳೂರು: ಚಾಲಕನ ನಿಯಂತ್ರಣ ತಪ್ಪಿದ ಕೆಎಸ್‌ಆರ್‌ಟಿಸಿ ಬಸ್ ಕಂದಕದಲ್ಲಿದ್ದ ಮನೆ ಮೇಲೆ ಉರುಳಿ ಬಿದ್ದಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಜಯಪುರ ಬಳಿಯ ಜಲದುರ್ಗ ಗ್ರಾಮದ ಬಳಿ ನಡೆದಿದೆ. ಬೆಂಗಳೂರಿನಿಂದ ಶೃಂಗೇರಿ ಕಡೆಗೆ ಬಸ್ ತೆರಳುತ್ತಿತ್ತು ಎಂದು ತಿಳಿದುಬಂದಿದೆ. ಘಟನೆಯಲ್ಲಿ ಬಸ್ಸಿನಲ್ಲಿದ್ದ 20 ಪ್ರಯಾಣಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಾಳುಗಳನ್ನು ಕೊಪ್ಪ ಹಾಗೂ ಜಯಪುರ ಅಸ್ಪತ್ರೆಗಳಿಗೆ ದಾಖಲಿಸಲಾಗಿದ್ದು ಸ್ಥಳಕ್ಕೆ ಜಯಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮಲೆನಾಡು ಭಾಗದಲ್ಲಿ ಕಳೆದ ಹಲವು ದಿನಗಳಿಂದ ನಿರಂತರವಾಗಿ ಮಳೆಯಾಗುತ್ತಿದ್ದು ತಿರುವಿನಲ್ಲಿ ಬಸ್ ಚಾಲನ ನಿಯಂತ್ರಣ ತಪ್ಪಿ ಬಸ್ ಕಂದಕದಲ್ಲಿದ್ದ ಮನೆ ಮೇಲೆ ಉರುಳಿ ಬಿದ್ದಿದೆ ಎನ್ನಲಾಗಿದೆ. ಅದೃಷ್ಟಾವಶಾತ್ ಮನೆಯಲ್ಲಿದ್ದವರಿಗೂ ಯಾವುದೇ ತೊಂದರೆ ಸಂಭವಿಸಿಲ್ಲ ವಿಷಯ ತಿಳಿಯುತ್ತಿದ್ದಂತೆಯೇ ಘಟನಾ ಸ್ಥಳಕ್ಕೆ ತೆರಳಿದ ಜಯಪುರ ಪೊಲೀಸರು ಸ್ಥಳೀಯರ ಸಹಕಾರದಿಂದ ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ.

## ಭದ್ರಾ ಮೇಲ್ದಂಡೆ ಕಾಮಗಾರಿ ವಿಳಂಬ ವಿರೋಧಿಸಿ ರಾಜ್ಯ ರೈತ ಸಂಘ ಪ್ರತಿಭಟನೆ



ಚಿತ್ರದುರ್ಗ: ಅನುದಾನದ ಕೊರತೆಯಿಂದ ಬಯಲು ಸೀಮೆ ಚಿತ್ರದುರ್ಗ ಜಿಲ್ಲೆಗೆ ನೀರುಣಿಸಬೇಕಾಗಿರುವ ಭದ್ರಾ ಮೇಲ್ದಂಡೆ ಕಾಮಗಾರಿ ವಿಳಂಭವಾಗುತ್ತಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಭದ್ರಾ ಮೇಲ್ದಂಡೆ ಯೋಜನೆಗಾಗಿ ಕೇಂದ್ರ ಸರ್ಕಾರ ಘೋಷಿಸಿರುವ ಐದು ಸಾವಿರದ ಮುನ್ನೂರು ಕೋಟಿ ರೂ.ಗಳು ಇನ್ನು ಬಿಡುಗಡೆಯಾಗಿಲ್ಲವೆಂದು ರಾಜ್ಯ ಸರ್ಕಾರ ಕೇಂದ್ರದ ಕಡೆ ಬೆರಳು ಮಾಡಿ ತೋರಿಸುವುದರ ಬದಲಿಗೆ ರಾಜ್ಯ ಸರ್ಕಾರ ತನ್ನ ಪಾಲಿನ ಜವಾಬ್ದಾರಿಯನ್ನರಿತು ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗಕ್ಕೆ ಭದ್ರಾಮೇಲ್ದಂಡೆ ಯೋಜನೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಜಿಲ್ಲೆಗೆ ನೀರು ಹರಿಸುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು.

ಸಾಮಾಜಿಕ ಚಿಂತಕ ಜೆ.ಯಾದವರೆಡ್ಡಿ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ರಾಜ್ಯ ಸರ್ಕಾರ ಕೇಂದ್ರದ ವಿರುದ್ದ ಸುಪ್ರೀಂಕೋರ್ಟ್ ಮೊರೆ ಹೋಗಿ ಭದ್ರಾಮೇಲ್ದಂಡೆ ಯೋಜನೆಗಾಗಿ ಘೋಷಿಸಿರುವ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಪಡೆಯಬೇಕು. ಕಳೆದ ಮುಂಗಾರು ಹಂಗಾಮಿನಲ್ಲಿ ಈರುಳ್ಳಿ ಹಾಗೂ ತೊಗರಿ ಬೆಳೆ ನಷ್ಟಕ್ಕೊಳಗಾದ ರೈತರಿಗೆ ಇದುವರೆವಿಗೂ ಪೂರ್ಣ ಪ್ರಮಾಣದ ಪರಿಹಾರ ಸಿಕ್ಕಿಲ್ಲ. ಜಿಲ್ಲಾಡಳಿತ ತಕ್ಷಣವೆ ರೈತರಿಗೆ ಪರಿಹಾರ ವಿತರಿಸಬೇಕು. ಅಧಿಕಾರದ ಆಸೆಯಿಂದ ರಾಜ್ಯದ ಸಂಸದರು ಕೇಂದ್ರ ಸರ್ಕಾರದ ವಿರುದ್ದ ಧ್ವನಿ ಎತ್ತದಂತಾಗಿದ್ದಾರೆ. ಪ್ರಧಾನಿ ಮೋದಿರವರು ಭದ್ರಾಮೇಲ್ದಂಡೆ ಯೋಜನೆಗಾಗಿ ಘೋಷಿಸಿರುವ ಐದು ಸಾವಿರದ ಮುನ್ನೂರು ರೂ.ಗಳನ್ನು ತರಬೇಕಾಗಿರುವುದರಿಂದ ಪಕ್ಷ ಬೇಧ ಮರೆತು ಕೇಂದ್ರಕ್ಕೆ ನಿಯೋಗ ಹೋಗುವಂತೆ ಆಗ್ರಹಿಸಿದರು.

ಬೇಸಿಗೆ ಈಗಾಗಲೆ ಆರಂಭವಾಗಿರುವುದರಿಂದ ಕೃಷಿಗಾಗಿ ರೈತರು ನೀರಾವರಿ ಪಂಪ್‌ಸೆಟ್‌ಗಳನ್ನು ಅವಲಂಭಿಸಿರುವುದರಿಂದ ಟ್ರಾನ್ಸ್‌ಫಾರ್ಮರ್‌ಗಳು ಸುಡುತ್ತಿವೆ. ಸುಟ್ಟ ಟಿ.ಸಿ.ಗಳನ್ನು ಬದಲಾಯಿಸುವ ಕೆಲಸವಾಗುತ್ತಿಲ್ಲ. ಇದರಿಂದ ರೈತರು ಹೈರಾಣಾಗಿದ್ದಾರೆ. ಜಿಲ್ಲೆಗೆ ಪ್ರತ್ಯೇಕ ಟ್ರಾನ್ಸ್‌ಫಾರ್ಮರ್‌ಗಳ ಬ್ಯಾಂಕ್ ಸ್ಥಾಪಿಸಿ ರೈತರ ನೆರವಿಗೆ ಮುಂದಾಗುವಂತೆ ಕೋರಿದರು.

ರೈತ ಮುಖಂಡರುಗಳಾದ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಕೆ.ಎಂ.ಕಾಂತರಾಜು, ರೈತ ಸಂಘದ ಜಿಲ್ಲಾಧ್ಯಕ್ಷ ಡಿ.ಧನಂಜಯ, ಎನ್.ಎಸ್.ರಂಗೇಗೌಡ ಗೌಸ್‌ಪೀರ್, ಅನಂತರೆಡ್ಡಿ, ಬಿ.ಓ.ಶಿವಕುಮಾರ್, ಕೆ.ಸಿ. ಹೊರಕೇರಪ್ಪ, ಪಿ.ಚೇತನ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankri Temple Arch, Main Road, Davanagere, Karnataka-577004. Editor: **MALLIKARJUNAPPA H.G.**